ಸಂಪುಟ: 21, ಸಂಚಿಕೆ: 258, ಪುಟಗಳು: 8, ಬುಧವಾರ, 26 ಜೂನ್ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3

### ಸುಭಾಷಿತ

ಇತರರು ನಿಮ್ಮ ಬಗ್ಗೆ ಅರಿತಿಲ್ಲ ಎಂದು ಚಿಂತಿಬೇಡಿ. ನೀವು ಅವರನ್ನು ಸರಿಯಾಗಿ ಅರಿಯದೇ ಇರುವುದರ ಬಗ್ಗೆ ಚಿಂತಿಸಿ.

। ಕನ್‌ಫ್ಯೂಷಿಯಸ್

### ಪಂಚಾಂಗ

(ಬುಧವಾರ 26, ಜೂನ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ಗ್ರೀಷ್ಮ ಋತು,
- ಜೇಷ್ಠ ಮಾಸ, ಕೃಷ್ಣ ಪಕ್ಷ,
- ವಾರ: ಬುಧವಾರ, ತಿಥಿ : ಪಂಚಮಿ
- ನಕ್ಷತ್ರ: ಧನಿಷ್ಠ,
- ರಾಹುಕಾಲ: 12.26 ರಿಂದ 2.02
- ಗುಳಿಕಕಾಲ: 10.50 ರಿಂದ 12.26
- ಯಮಗಂಡಕಾಲ: 7.38 ರಿಂದ 9.14




## ವೇತನಕ್ಕಾಗಿ '108 ಆಂಬ್ಯುಲೆನ್ಸ್' ಸಿಬ್ಬಂದಿ ಹೋರಾಟ
# ಬೀದಿಗಿಳಿದು ಪ್ರತಿಭಟಿಸುವ ಎಚ್ಚರಿಕೆ

**ಬೆಂಗಳೂರು:** ಬಾಕಿ ಇರುವ ವೇತನ ಪಾವತಿಸುವಂತೆ '108 ಆಂಬ್ಯುಲೆನ್ಸ್' ಸಿಬ್ಬಂದಿ ಹೋರಾಟ ಮುಂದುವರಿಸಿದ್ದಾರೆ. ಸಮಸ್ಯೆ ಪರಿಹರಿಸದಿದ್ದರೆ ಕುಟುಂಬ ಸಮೇತ ಬೀದಿಗಿಳಿದು ಹೋರಾಟ ಮಾಡುವುದಾಗಿಯೂ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ. ಆಂಬ್ಯುಲೆನ್ಸ್ ಸಿಬ್ಬಂದಿ ಕಳೆದ ಆರು ತಿಂಗಳಿನಿಂದ ಸಂಬಳ ಇಲ್ಲದೆ ಕೆಲಸ ಮಾಡುತ್ತಿದ್ದಾರೆ. ಸರ್ಕಾರ ಹಾಗೂ ಜಿವಿಕೆ ಸಂಸ್ಥೆ ನಡುವಿನ ಕಿತ್ತಾಟದಿಂದ ಆಂಬ್ಯುಲೆನ್ಸ್ ಸಿಬ್ಬಂದಿ ಬೀದಿಗೆ ಬೀಳುವಂತಾಗಿದೆ.

ಕಳೆದ ಆರು ತಿಂಗಳಿನಿಂದ 3 ಸಾವಿರಕ್ಕೂ ಅಧಿಕ ನೌಕರರಿಗೆ ಸಂಬಳ ನೀಡಲಾಗಿಲ್ಲ.



ಇದೀಗ ಆಂಬ್ಯುಲೆನ್ಸ್ ಸಿಬ್ಬಂದಿ ಕೋರ್ಟ್ ಮೊರೆ ಹೋಗಿದ್ದಾರೆ. ಪ್ರತಿ ಸಿಬ್ಬಂದಿಗೆ ಜಿವಿಕೆ ಸಂಸ್ಥೆ ಈವರೆಗೆ 2.16 ಲಕ್ಷ ರೂ. ಸಂಬಳ ಬಾಕಿ ಉಳಿಸಿಕೊಂಡಿದೆ. ಇದೀಗ ಜಿವಿಕೆಗೆ ಆಂಬ್ಯುಲೆನ್ಸ್ ನೌಕರರ ಸಂಘ ಹೊಸ ಡೆಡ್ ಲೈನ್ ಕೊಟ್ಟಿದೆ. ಗುರುವಾರ ಸಂಜೆಯೊಳಗೆ ಸಂಬಳ ನೀಡದಿದ್ದರೆ ಮತ್ತೆ ಮುಷ್ಕರ ಹೂಡುವುದಾಗಿ ಎಚ್ಚರಿಕೆ ನೀಡಿದೆ.

ಮಕ್ಕಳ ಶಾಲೆ ಫೀಜ್, ರೇಷನ್, ಇತರೆ ಖರ್ಚಿಗೆ ಸಾಲ ಮಾಡುತ್ತಿದ್ದೇವೆ. ಹೀಗೆಯೇ ಮುಂದುವರಿದರೆ ಕುಟುಂಬ ಸಮೇತ ಬೀದಿಗಿಳಿಯುತ್ತೇವೆ ಎಂದು ಎಚ್ಚರಿಕೆ ನೀಡಿದ್ದಾರೆ.

ಮೇ ಮೊದಲ ವಾರದಿಂದಲೇ '108 ಆಂಬ್ಯುಲೆನ್ಸ್' ಸಿಬ್ಬಂದಿ ವೇತನಕ್ಕಾಗಿ ಹೋರಾಟ, ಮುಷ್ಕರ ಆರಂಭಿಸಿದ್ದರು. ಆದರೆ, ಮಸ್ಯೆ ಬಗೆಹರಿಸುವುದಾಗಿ ಆರೋಗ್ಯ ಇಲಾಖೆ ಆಯುಕ್ತರು ಭರವಸೆ ನೀಡಿದ ನಂತರ ತಾತ್ಕಾಲಿಕವಾಗಿ ಮುಷ್ಕರ ಹಿಂಪಡೆದಿದ್ದರು.

ಪುಟ 2

# ಲೋಕಸಭಾ ಸ್ಪೀಕರ್ ಆಗಿ ಎನ್‌ಡಿಎ ಅಭ್ಯರ್ಥಿ ಓಂ ಬಿರ್ಲಾ ಆಯ್ಕೆ

**ನವದೆಹಲಿ:** ಭಾರತೀಯ ಜನತಾ ಪಕ್ಷದ (ಬಿಜೆಪಿ) ನಾಯಕ ಓಂ ಬಿರ್ಲಾ ಅವರು ಲೋಕಸಭಾ ಸ್ಪೀಕರ್ ಆಗಿ ಆಯ್ಕೆಯಾಗಿದ್ದಾರೆ. ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟದ (ಎನ್‌ಡಿಎ) ಅಭ್ಯರ್ಥಿ ಓಂ ಬಿರ್ಲಾ ಅವರನ್ನು ಬುಧವಾರ ಸದನದ ಸ್ಪೀಕರ್ ಆಗಿ ಆಯ್ಕೆ ಮಾಡಲಾಯಿತು.



ಪ್ರತಿಪಕ್ಷಗಳು ಕಾಂಗ್ರೆಸ್ ನಾಯಕ ಕೆ ಸುರೇಶ್ ಅವರನ್ನು ಲೋಕಸಭೆಯ ಸ್ಪೀಕರ್ ಆಗಿ ಆಯ್ಕೆ ಮಾಡಲು ಪ್ರಸ್ತಾವನೆಯನ್ನು ಮಂಡಿಸಿದ್ದವು. ಆದರೆ ಧ್ವನಿ ಮತದ ನಂತರ ಸದನವು ಪಿಎಂ ಮೋದಿ ಅವರ ಪ್ರಸ್ತಾಪವನ್ನು ಅಂಗೀಕರಿಸಿದ ನಂತರ ಅವರನ್ನು ತಿರಸ್ಕರಿಸಲಾಯಿತು.

ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ಮತ್ತು ಕಾಂಗ್ರೆಸ್ ನೇತೃತ್ವದ ಇಂಡಿಯಾ ಒಕ್ಕೂಟ ಅಭ್ಯರ್ಥಿಯನ್ನು ಒಪ್ಪಿಕೊಳ್ಳಲು ಸಾಧ್ಯವಾಗದ ಕಾರಣ ದಶಕಗಳಲ್ಲಿ ಮೊದಲ ಬಾರಿಗೆ ಲೋಕಸಭೆ ಸ್ಪೀಕರ್ ಚುನಾವಣೆ ಬುಧವಾರ ನಡೆದಿದೆ.

ಈ ಹಿಂದೆ, ಲೋಕಸಭಾ ಸ್ಪೀಕರ್ ಚುನಾವಣೆಗಳು 1952, 1967 ಮತ್ತು 1976 ರಲ್ಲಿ ಕೇವಲ ಮೂರು ಬಾರಿ ನಡೆದಿವೆ.

ಪ್ರಧಾನಿ ನರೇಂದ್ರ ಮೋದಿ ಮತ್ತು ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಓಂ ಬಿರ್ಲಾ ಅವರನ್ನು ಲೋಕಸಭೆಯ ಸ್ಪೀಕರ್ ಕುರ್ಚಿ ಬಳಿ ಕರೆದೊಯ್ದರು. ಲೋಕಸಭೆ ಸ್ಪೀಕರ್ ಆಯ್ಕೆಗೆ ಮೊದಲ ಬಾರಿಗೆ ಮತದಾನ ನಡೆದಿದೆ.

ಪುಟ 2

## ಸಂಕ್ಷಿಪ್ತ ಸುದ್ದಿ

### ಬಾಳು ಕೊಡುತ್ತೇನೆ ಅಂತ ಕರೆದುಕೊಂಡು ಬಂದು ಮಹಿಳೆಯ ಕೊಲೆ

**ದೇವನಹಳ್ಳಿ:** ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ನಗರದ ಕಾಲೇಜು ರಸ್ತೆಯಲ್ಲಿರುವ ಮನೆಯೊಂದರಲ್ಲಿ ವಾಸವಾಗಿದ್ದ ಮಹಿಳೆಗೆ ಚಾಕುವಿನಿಂದ ಚುಚ್ಚಿ ಬರ್ಬರವಾಗಿ ಕೊಲೆ ಮಾಡಲಾಗಿದೆ. ಹೇಮಾವತಿ ಕೊಲೆಯಾದವರು. ಹೇಮಾವತಿ ನಾಲ್ಕು ತಿಂಗಳ ಹಿಂದೆ ಕೆಲಸಕ್ಕೆಂದು ಆಂಧ್ರದಿಂದ ಬೆಂಗಳೂರಿಗೆ ಬಂದಿದ್ದರು. ಇಲ್ಲಿ, ಹೊಸಕೋಟೆ ನಗರದಲ್ಲಿ ಬಾಡಿಗೆಗೆ ಮನೆ ಪಡೆದು ವಾಸವಾಗಿದ್ದರು. ಹೊಸಕೋಟೆಯ ಪೆಟ್ರೋಲ್ ಬಂಕ್‌ನಲ್ಲಿ ಹೇಮಾವತಿ ಕೆಲಸ ಮಾಡುತ್ತಿದ್ದರು.



ಪುಟ 2

### ಉಪಮುಖ್ಯಮಂತ್ರಿ ಕಚೇರಿ ಎದುರು ಆತ್ಮಹತ್ಯೆಗೆ ಯತ್ನಿಸಿದ ಮಹಿಳೆ



**ಆಂಧ್ರಪ್ರದೇಶ:** ಆಂಧ್ರಪ್ರದೇಶದ ಉಪಮುಖ್ಯಮಂತ್ರಿ ಕಚೇರಿ ಎದುರು ಮಹಿಳೆಯೊಬ್ಬರು ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ವರದಿಯಾಗಿದೆ. ಉಪಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರ ಕ್ಯಾಂಪ್ ಕಚೇರಿ ಬಳಿ ಮಹಿಳೆಯೊಬ್ಬರು ತನ್ನ ಜೀವವನ್ನು ಅಂತ್ಯಗೊಳಿಸಲು ನಿರ್ಧರಿಸಿದ್ದರು, ಪೊಲೀಸರು ಕೂಡಲೇ ಮಧ್ಯಪ್ರವೇಶಿಸಿ ಅವರನ್ನು ರಕ್ಷಣೆ ಮಾಡಿದ್ದಾರೆ.

ಪ್ರತ್ಯಕ್ಷದರ್ಶಿಗಳ ಪ್ರಕಾರ, ಶ್ರೀಕಾಕುಳಂ ಜಿಲ್ಲೆಯ ನಿವಾಸಿಯಾದ ದುರ್ಗಾದೇವಿ ಕ್ಯಾಂಪ್ ಆಫೀಸ್ ಬಳಿಯಿರುವ ಕಟ್ಟಡವನ್ನು ಏರಿ ಅಲ್ಲಿಂದ ಹಾರಿ ಪ್ರಾಣ ಕಳೆದುಕೊಳ್ಳಲು ಮಹಿಳೆ ನಿರ್ಧರಿಸಿದ್ದಳು.

ಶ್ರೀಕಾಕುಳಂನಲ್ಲಿ ವೈಎಸ್‌ಆರ್‌ಸಿಪಿ ಪಕ್ಷದ ನಾಯಕರ ಒತ್ತುವರಿಯಿಂದ ತನ್ನ ಭೂಮಿಯನ್ನು ಕಳೆದುಕೊಂಡಿದ್ದೇನೆ ಎಂದು ಅವರು ಆರೋಪಿಸಿದ್ದಾರೆ.

ಪುಟ 2

## ಬಿಬಿಎಂಪಿಯಲ್ಲಿ ಗ್ಯಾರಂಟಿ ಯೋಜನೆ ಕಚೇರಿ!
# ಸಾರ್ವಜನಿಕರಿಂದ ಅಸಮಾಧಾನ

**ಬೆಂಗಳೂರು:** ಗ್ಯಾರಂಟಿ ಯೋಜನೆಗಳಿಂದಲೇ ಕರ್ನಾಟಕದಲ್ಲಿ ಅಧಿಕಾರಕ್ಕೆ ಬಂದ ಕಾಂಗ್ರೆಸ್, ಲೋಕಸಭೆ ಫಲಿತಾಂಶದ ಮುಜುಗರದ ಬಳಿಕ ಇದೀಗ ಬಿಬಿಎಂಪಿ ಚುನಾವಣೆಗೆ ಸಜ್ಜಾಗುತ್ತಿದೆ. ಬಿಬಿಎಂಪಿ ಚುನಾವಣೆಗೂ ಗ್ಯಾರಂಟಿಗಳನ್ನೇ ಕಾಂಗ್ರೆಸ್ ಅಸ್ತ್ರ ಮಾಡಿಕೊಂಡಂತೆ ಕಾಣುತ್ತಿದೆ. ಈ ಹಿನ್ನೆಲೆ ಬಿಬಿಎಂಪಿ ಗ್ಯಾರಂಟಿ ಅನುಷ್ಠಾನ ಸಮಿತಿ ರಚಿಸಿರುವ ಕಾಂಗ್ರೆಸ್, ಗ್ಯಾರಂಟಿ ಹಿಡಿದು ಪ್ರಚಾರಕ್ಕೆ ಮುಂದಾಗಿದೆ. ಇದಕ್ಕೆಂದೇ ಸಮಿತಿ ರಚನೆ ಮಾಡಲಾಗಿದೆ. ಈ ಸಮಿತಿಯು ಪ್ರತಿ ವಾರ್ಡ್‌ನಲ್ಲಿ ಗ್ಯಾರಂಟಿ ಯೋಜನೆ ಬಗ್ಗೆ ಮಾಹಿತಿ ಕಲೆ ಹಾಕಿ ಸರ್ಕಾರಕ್ಕೆ ವರದಿ ಸಲ್ಲಿಸಲಿದೆ. ಬಿಬಿಎಂಪಿಯಲ್ಲಿ ಗ್ಯಾರಂಟಿ ಅನುಷ್ಠಾನ ಕಚೇರಿ ಓಪನ್ ಮಾಡಲಾಗಿದ್ದು, ಡಿಸಿಎಂ ಡಿಕೆ ಶಿವಕುಮಾರ್ ಸೋಮವಾರವಷ್ಟೇ ಕಚೇರಿ ಉದ್ಘಾಟನೆ ಮಾಡಿದ್ದರು.

ಈ ಮಧ್ಯೆ, ಕಾಂಗ್ರೆಸ್ ಪಕ್ಷದ ಪ್ರಚಾರಕ್ಕಾಗಿ ಪಾಲಿಕೆಯ ಸ್ವತ್ತನ್ನು ಬಳಸಿಕೊಂಡ ಬಗ್ಗೆ ಈಗ ಅಪಸ್ವರ ಕೇಳಿ ಬಂದಿದೆ. ಸಾರ್ವಜನಿಕರು ಹಾಗೂ ಪ್ರತಿಪಕ್ಷಗಳು ಆಕ್ಷೇಪ ವ್ಯಕ್ತಪಡಿಸಿವೆ.

ಜನರ ದುಡ್ಡಿಂದ ನಡೆಯುವ ಪಾಲಿಕೆಯ ಕಟ್ಟಡದಲ್ಲಿ ಪಕ್ಷದ ಪ್ರಚಾರದ ಅನುಷ್ಠಾನ ಸಮಿತಿ ಮಾಡಿಕೊಂಡಿರುವುದು ಸರಿಯಲ್ಲ ಎಂದು ಸಾಮಾಜಿಕ ಕಾರ್ಯಕರ್ತ ನಟೇಶ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.




ಒಟ್ಟಿನಲ್ಲಿ ಬಿಬಿಎಂಪಿ ಚುನಾವಣೆಗೆ ಕಾಂಗ್ರೆಸ್ ಒಂದೊಂದೇ ಸಿದ್ಧತೆ ಮಾಡಿಕೊಳ್ಳುತ್ತಿದೆ. ಆದರೆ ಪಕ್ಷದ ಪ್ರಚಾರಕ್ಕೆ ರಚಿಸಿರುವ ಸಮಿತಿಯ ಕಚೇರಿಯನ್ನು ಪಾಲಿಕೆಯ ಕೇಂದ್ರದ ಕಚೇರಿಯಲ್ಲಿ ಸ್ಥಾಪಿಸಿರುವ ಬಗ್ಗೆ ಈಗ ಅಪಸ್ವರ ಕೇಳಿ ಬಂದಿದೆ. ಜನರ ತೆರಿಗೆ ದುಡ್ಡನ್ನು ಕಾಂಗ್ರೆಸ್ ಪಕ್ಷದ ಕೆಲಸಕ್ಕಾಗಿ ಬಳಸುಕೊಳ್ಳುತ್ತಿದೆ ಎನ್ನುವ ಆರೋಪಗಳೂ ಮುನ್ನಲೆಗೆ ಬಂದಿವೆ.

ಲೋಕಸಭೆ ಚುನಾವಣೆಯಲ್ಲಿ ನಿರೀಕ್ಷಿತ ಸ್ಥಾನಗಳು ಬಾರದೇ ಇರುವುದರಿಂದ ಎಚ್ಚೆತ್ತುಕೊಂಡಿರುವ ಕಾಂಗ್ರೆಸ್ ಈಗ ಬಿಬಿಎಂಪಿ ಚುನಾವಣೆಗೂ ಮುನ್ನ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಮತ್ತು ಅದರ ಕುರಿತು ಫೀಡ್‌ಬ್ಯಾಕ್ ಪಡೆಯುವುದಕ್ಕಾಗಿ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತಿದೆ. ಅದರ ಅಂಗವಾಗಿಯೇ ಪಾಲಿಕೆಯಲ್ಲಿ ಗ್ಯಾರಂಟಿ ಅನುಷ್ಠಾನ ಕಚೇರಿ ತೆರೆದಿದೆ.

# ನಂದಿನಿ ಹಾಲಿನ ದರ ಹೆಚ್ಚಳ
## ಹಳೆಯ ಪ್ಯಾಕೆಟ್‌ಗೂ ಹೊಸ ಬೆಲೆ, ಗ್ರಾಹಕರ ಆಕ್ರೋಶ

**ರಾಯಚೂರು:** ಕೆಎಂಎಫ್ ನಂದಿನಿ ಹಾಲಿನ ದರ ಹೆಚ್ಚಳ ಮಾಡಿದ್ದು, ಇಂದಿನಿಂದಲೇ ಹೊಸ ದರ ಅನ್ವಯವಾಗುತ್ತಿದೆ. ಆದರೆ ರಾಯಚೂರಿನಲ್ಲಿ ಹಳೆಯ ದರದ ಪ್ಯಾಕೆಟ್‌ಗಳನ್ನ ಹೊಸ ದರದಲ್ಲಿ ಮಾರಾಟ ಮಾಡುತ್ತಿದ್ದು, ಗ್ರಾಹಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪುಟ 2



## ಸಂಡೂರ ವಿಧಾನಸಭೆ ಉಪ ಚುನಾವಣೆ
# ತುಕಾರಾಂ, ಶ್ರೀರಾಮುಲು ಲಾಬಿ

**ಬಳ್ಳಾರಿ:** ಗಣಿನಾಡು ಬಳ್ಳಾರಿಯ ಸಂಡೂರ ವಿಧಾನಸಭಾ ಕ್ಷೇತ್ರದಲ್ಲಿ ಮತ್ತೆ ಉಪ ಚುನಾವಣೆ ಕಾವು ಜೋರಾಗುತ್ತಿದೆ. ಈ ಹಿಂದೆ ಶಾಸಕರಾಗಿ ಗೆದ್ದಿದ್ದ ಇ ತುಕಾರಾಂ ಬಳ್ಳಾರಿ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಿ ಗೆಲುವು ಸಾಧಿಸಿ ಸಂಸದರಾಗಿದ್ದಾರೆ. ಹೀಗಾಗಿ ಸಂಡೂರ ವಿಧಾನ ಸಭಾ ಕ್ಷೇತ್ರಕ್ಕೆ ರಾಜೀನಾಮೆ ಕೊಡಬೇಕಾದ ಪರಿಸ್ಥಿತಿ ಬಂತು. ಇ ತುಕಾರಾಂ ರಾಜೀನಾಮೆ ಬಳಿಕ ರಾಷ್ಟ್ರೀಯ ಪಕ್ಷಗಳ ಟಿಕೆಟ್‌ಗಾಗಿ ಭರ್ಜರಿ ಲಾಬಿ ಶುರುವಾಗಿದೆ. ಈಗಾಗಲೇ ಕಾಂಗ್ರೆಸ್ ನಿಂದ ಇ ತುಕಾರಾಂ ಕುಟುಂಬಕ್ಕೆ ಟಿಕೆಟ್ ನೀಡಲಾಗುತ್ತದೆ ಎಂಬ ಮಾಹಿತಿ ಹರಿದಾಡುತ್ತಿದೆ. ಸಂಸದರ ಪುತ್ರಿ ಚೈತನ್ಯ ತುಕಾರಾಂಗೆ ಟಿಕೆಟ್ ನೀಡಬೇಕು ಎನ್ನುವುದು ಸಂಸದರ ಒತ್ತಾಯವಾಗಿದೆ. ಇದರ ಮದ್ಯ ಸಂತೋಷ್ ಲಾಡ್ ಕೂಡ ತನ್ನದೆ ಕ್ಯಾಂಡಿಡೇಟ್ ಗೆ ಟಿಕೆಟ್ ಕೊಡಿಸುವ ತಂತ್ರ ಕೂಡ ಮಾಡುತ್ತಿದ್ದಾರೆ ಎನ್ನಲಾಗುತ್ತಿದೆ. ಇವರ ನಡುವೆ ಕಾಂಗ್ರೆಸ್ ಟಿಕೆಟ್ ಯಾರ ಪಾಲಾಗುತ್ತೆ ಎನ್ನುವ ಕುತೂಹಲ ಮೂಡಿದೆ.





ಅತ್ತ ಟಿಕೆಟ್‌ಗಾಗಿ ಬಿಜೆಪಿಯಲ್ಲೂ ತೆರೆಮರೆ ಕಸರತ್ತು ಜೋರಾಗಿಯೇ ಸಾಗಿದೆ. ಈಗಾಗಲೇ ಜನಾರ್ದನ ರೆಡ್ಡಿ ಆಪ್ತ ದಿವಾಕರ ಬಾಬು ತಮಗೆ ಟಿಕೆಟ್ ನೀಡಬೇಕು ಅಂತಾ ಶತ ಪ್ರಯತ್ನ ಮಾಡುತ್ತಿದ್ದಾರೆ. ಈ ಮದ್ಯೆ ಶ್ರೀರಾಮುಲು ಕೂಡ ಟಿಕೆಟ್‌ಗಾಗಿ ಲಾಬಿ ನಡೆಸುತ್ತಿದ್ದಾರೆ

ಪುಟ 2

## ಭಾರತಕ್ಕೆ ಸಕಾರಾತ್ಮಕ ಸಂದೇಶ ಕಳುಹಿಸಿದ ಪಾಕ್
# ಶಾಶ್ವತ ಹಗೆತನದಲ್ಲಿ ನಂಬಿಕೆ ಇಲ್ಲ

**ನವದೆಹಲಿ:** ಪಾಕಿಸ್ತಾನದ ಉಪಪ್ರಧಾನಿ ಮತ್ತು ವಿದೇಶಾಂಗ ಸಚಿವ ಇಶಕ್ ದಾರ್ ಅವರು ಭಾರತಕ್ಕೆ ಸಕಾರಾತ್ಮಕ ಸಂದೇಶ ಕಳುಹಿಸಿದ್ದಾರೆ. ತಮ್ಮ ದೇಶವು ಶಾಶ್ವತ ಹಗೆತನದಲ್ಲಿ ನಂಬಿಕೆ ಹೊಂದಿಲ್ಲ ಎಂದು ಅವರು ಹೇಳಿದ್ದಾರೆ. ಇಸ್ಲಾಮಾಬಾದ್‌ನ ಇನ್‌ಸ್ಟಿಟ್ಯೂಟ್ ಆಫ್ ಸ್ಟ್ರಾಟೆಜಿಕ್ ಸ್ಟಡೀಸ್ ಇಸ್ಲಾಮಾಬಾದ್ (ಐಎಸ್‌ಎಸ್‌ಐ)ನಲ್ಲಿ ನಡೆದ ಸೆಮಿನಾರ್‌ನಲ್ಲಿ ಮಾತನಾಡಿದ ಅವರು, ಪಾಕಿಸ್ತಾನ ಯಾವಾಗಲೂ ತನ್ನ ನೆರೆಯ ರಾಷ್ಟ್ರಗಳೊಂದಿಗೆ ಸೌಹಾರ್ದ ಸಂಬಂಧ ಹೊಂದುವುದರಲ್ಲಿ ಹೆಚ್ಚಿನ ನಂಬಿಕೆ ಹೊಂದಿದೆ ಎಂದು ಹೇಳಿದರು.



ದಕ್ಷಿಣ ಏಷ್ಯಾ, ಈ ಪ್ರದೇಶವು ಬಡತನ, ನಿರುದ್ಯೋಗ, ಅನಕ್ಷರತೆ, ರೋಗ, ಆಹಾರ ಅಭದ್ರತೆ, ನೀರಿನ ಕೊರತೆ, ನೈಸರ್ಗಿಕ ವಿಕೋಪಗಳು, ಪರಿಸರ ಅವನತಿ ಮತ್ತು ಹವಾಮಾನ ಬದಲಾವಣೆಯ ಪರಿಣಾಮಗಳು ಸೇರಿದಂತೆ ಬೆದರಿಸುವ ಸವಾಲುಗಳಿಂದ ಸುತ್ತುವರೆದಿದೆ.

ಎಲ್ಲಾ ದೇಶಗಳೊಂದಿಗೆ ಶಾಂತಿಯುತ, ಸಹಕಾರಿ ಮತ್ತು ಉತ್ತಮ-ನೆರೆಹೊರೆಯ ಸಂಬಂಧಗಳನ್ನು ಕಾಪಾಡಿಕೊಳ್ಳಲು ಪಾಕಿಸ್ತಾನ ಸತತವಾಗಿ ಶ್ರಮಿಸುತ್ತಿದೆ ಎಂದು ದಾರ್ ಹೇಳಿದ್ದಾರೆ. ಕೆಲವು ಸಂದರ್ಭಗಳಲ್ಲಿ ಸವಾಲುಗಳು ಮತ್ತು ಹಿನ್ನಡೆಗಳ ಹೊರತಾಗಿಯೂ, ಪಾಕಿಸ್ತಾನದ ನಿರ್ಧಾರ ಸ್ಥಿರವಾಗಿರುತ್ತದೆ ಎಂದು ಹೇಳಿದರು.

ನರೇಂದ್ರ ಮೋದಿ ಅವರು ಸತತ ಮೂರನೇ ಬಾರಿಗೆ ಭಾರತದ ಪ್ರಧಾನಿಯಾಗಿದ್ದಾರೆ. ಇತ್ತೀಚೆಗಷ್ಟೇ ನಡೆದ ಲೋಕಸಭಾ ಚುನಾವಣೆಯ ನಂತರ ಎನ್‌ಡಿಎ ಸಂಪೂರ್ಣ ಬಹುಮತ ಪಡೆದಿದೆ. ಮೋದಿ ಪ್ರಧಾನಿಯಾದ ನಂತರ ವಿಶ್ವದಾದ್ಯಂತದ ನಾಯಕರು ಅಭಿನಂದನಾ ಸಂದೇಶಗಳನ್ನು ನೀಡಿದರು.

ಪುಟ 2

# ಒಗ್ಗದ ಜೈಲೂಟ
## ತೂಕ ಕಳೆದುಕೊಳ್ಳುತ್ತಿರುವ ದರ್ಶನ್

**ಬೆಂಗಳೂರು:** ರೇಣುಕಾ ಸ್ವಾಮಿ ಹತ್ಯೆ ಕೇಸ್‌ನಲ್ಲಿ ಹಲವು ದಿನ ಪೊಲೀಸ್ ಕಸ್ಟಡಿಯಲ್ಲಿದ್ದ ದರ್ಶನ್ ಅವರು ಈಗ ಕೇಂದ್ರ ಕಾರಾಗೃಹಕ್ಕೆ ಶಿಫ್ಟ್ ಆಗಿದ್ದಾರೆ. ಎಲ್ಲರಿಗೂ ಸಿಗುತ್ತಿರುವ ವ್ಯವಸ್ಥೆಯೇ ದರ್ಶನ್ ಗೂ ಸಿಗುತ್ತಿದೆ. ಅವರಿಗೆ ಜೈಲಿನಲ್ಲಿ ಊಟ ಸೇರುತ್ತಿಲ್ಲ. ಹೀಗಾಗಿ ಹಂತ ಹಂತವಾಗಿ ಅವರು ದೇಹದ ತೂಕ ಕಳೆದುಕೊಳ್ಳುತ್ತಿದ್ದಾರೆ. ಹೀಗೊಂದು ವಿಚಾರ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.

ಜೂನ್ 25ರ ರಾತ್ರಿ ದರ್ಶನ್ ಬೇಗನೇ ಮಲಗಿದ್ದಾರೆ. ಇಂದು (ಜೂನ್ 26) ಬೆಳಿಗ್ಗೆ 5.30ರ ಸುಮಾರಿಗೆ ಎದ್ದಿದ್ದಾರೆ. ಜೈಲಿನ ಸಿಬ್ಬಂದಿ ಬಳಿ ಬಿಸಿ ನೀರನ್ನು ಕೇಳಿ ದರ್ಶನ್ ಪಡೆದಿದ್ದಾರೆ. ಬಳಿಕ ಕೆಲ ಹೊತ್ತು ಬ್ಯಾರಾಕ್ ನಲ್ಲಿಯೇ ನಟ ದರ್ಶನ್ ವಾಕಿಂಗ್ ಮಾಡಿದ್ದಾರೆ. ಜೂನ್ 25ರಂದು ದರ್ಶನ್ ಅವರು ಪತ್ನಿ, ಮಗನ ಭೇಟಿ ಮಾಡಿದ್ದಾರೆ. ಆ ಬಳಿಕ ದರ್ಶನ್ ಸ್ವಲ್ಪ ರಿಲ್ಯಾಕ್ಸ್ ಮೂಡ್ ನಲ್ಲಿ ಇದ್ದಾರೆ.



ದರ್ಶನ್‌ಗೆ ಜೈಲೂಟ ಒಗ್ಗುತ್ತಿಲ್ಲ. ಆದಾಗ್ಯೂ ಅನಿವಾರ್ಯವಾಗಿ ಇದನ್ನು ಸೇವಿಸಬೇಕಾದ ಸ್ಥಿತಿ ಬಂದೊದಗಿದೆ. ದಿನೇ ದಿನೇ ಅವರು ತೂಕ ಕಳೆದುಕೊಳ್ಳುತ್ತಿದ್ದಾರೆ.

ಪುಟ 2

## ಕೆಆರ್‌ಎಸ್ ಅಣೆಕಟ್ಟೆಗೆ ಎದುರಾಯ್ತು ಕಂಟಕ
# ಪ್ರಭಾವಿಗಳಿಂದ ಹಿನ್ನೀರು ಪ್ರದೇಶ ಒತ್ತುವರಿ

**ಮಂಡ್ಯ:** ಗಣಿಗಾರಿಕೆ ಬಳಿಕ ಕೆಆರ್‌ಎಸ್ ಅಣೆಕಟ್ಟೆಗೆ ಮತ್ತೊಂದು ಕಂಟಕ ಎದುರಾಗಿದೆ. ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಕೆಆರ್ ಎಸ್ ಜಲಾಶಯದ ಹಿನ್ನೀರು ಪ್ರದೇಶವನ್ನು ಪ್ರಭಾವಿಗಳು ಒತ್ತುವರಿ ಮಾಡಿಕೊಳ್ಳುತ್ತಿದ್ದಾರೆ. ಭೂಗಳ್ಳರು ಅಣೆಕಟ್ಟೆ ಜಾಗವನ್ನೇ ನುಂಗಿ ನೀರು ಕುಡಿಯುತ್ತಿದ್ದಾರೆ. ಡ್ಯಾಂ ಜಾಗ ಒತ್ತುವರಿ ಮಾಡ್ತಿದ್ರು ಅಧಿಕಾರಿಗಳು ಮಾತ್ರ ಜಾಣ ಮೌನರಾಗಿದ್ದಾರೆ.

ಸರ್ಕಾರಿ ದಾಖಲೆಗಳಲ್ಲಿ 3 ಎಕರೆ ಇದ್ರೂ ಹೆಚ್ಚುವರಿ ಭೂಮಿ ಒತ್ತುವರಿ ಆಗಿದೆ. ಒತ್ತುವರಿ ಜಾಗದಲ್ಲಿ ಟ್ರಂಚ್ ಹೊಡೆಸಿ ಫೆನ್ಸ್ ನಿರ್ಮಾಣಕ್ಕೆ ಸಿದ್ಧತೆ ನಡೆದಿದೆ. ಕೇರಳ ಮೂಲದ ನಕೇಶ್ ಜಾನ್ ಮ್ಯಾಥ್ಯು ಎಂಬುವವರು ಒತ್ತುವರಿ ಮಾಡಿಕೊಂಡಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ.



ಸರ್ವೆ ನಂ 279ರಲ್ಲಿ ಜಮೀನು ಹೊಂದಿರುವ ನಕೇಶ್ ಜಾನ್ ಮ್ಯಾಥ್ಯು ಅವರು ಮಂಡ್ಯ ಜಿಲ್ಲೆಯ ಪಾಂಡವಪುರ ತಾಲ್ಲೂಕಿನ ಚಿಕ್ಕಾಡಳ್ಳಿ ಗ್ರಾಮದ ಸರ್ವೆ ನಂಬರ್ ನಲ್ಲಿ ಜಮೀನು ಹೊಂದಿದ್ದಾರೆ.

ಡ್ಯಾಂನ ನೀರು ಸಂಗ್ರಹದ ಕಣ್ಣಳತೆ ದೂರದಲ್ಲಿ ಒತ್ತುವರಿ ಆಗ್ತಿದ್ರು, ಹೇಳೋರಿಲ್ಲ, ಕೇಳೋರಿಲ್ಲದಂತಾಗಿದೆ.

ಪುಟ 2

# ಆಟೋ ಪ್ರಯಾಣ ದರ ಏರಿಕೆಗೆ ಚಾಲಕರ ಸಂಘ ಒತ್ತಾಯ
## ನಗರ ಜಿಲ್ಲಾಧಿಕಾರಿಗಳಿಗೆ ಚಾಲಕರಿಂದ ಪತ್ರ

**ಬೆಂಗಳೂರು:** ಬೆಂಗಳೂರು ಆಟೋ ಮೀಟರ್ ದರ ಹೆಚ್ಚಿಸುವಂತೆ ಬೆಂಗಳೂರು ಆಟೋ ಚಾಲಕರ ಸಂಘ ಒತ್ತಾಯ ಮಾಡಿದೆ. ಆಟೋ ಚಾಲಕರ ಸಂಘ ಇತ್ತೀಚೆಗೆ ಬೆಂಗಳೂರು ನಗರ ಜಿಲ್ಲಾ ಉಪ ಆಯುಕ್ತರಿಗೆ ಪತ್ರ ಬರೆದು, ಬೆಂಗಳೂರಿನಲ್ಲಿ ಆಟೋ ರಿಕ್ಷಾ ದರವನ್ನು ಸಗಟು ಬೆಲೆ ಸೂಚ್ಯಂಕಕ್ಕೆ ಅನುಗುಣವಾಗಿ ಪರಿಷ್ಕರಿಸಲು ಕೋರಿದೆ. ಬೆಂಗಳೂರು ನಗರದಲ್ಲಿ ಆಟೋ ಮೀಟರ್ ದರ ಏರಿಕೆ ಮಾಡುವ ಅಧಿಕಾರ ಬೆಂಗಳೂರು ನಗರ ಜಿಲ್ಲಾಧಿಕಾರಿಗಳ ಕಮಿಟಿಗೆ ಮಾತ್ರ ಅವಕಾಶ ಇರುವುದರಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಲಾಗುತ್ತಿದೆ.

ಪ್ರತಿ ವರ್ಷ ದರಗಳನ್ನು ಪರಿಷ್ಕರಿಸಿದರೆ, ಆಟೋ ಚಾಲಕರು ಪ್ರಯಾಣಿಕರಿಗೆ ಸೇವೆ ನಿರಾಕರಿಸುವುದನ್ನು ತಪ್ಪಿಸಬಹುದು. ಅಲ್ಲದೆ, ಅಧಿಕ ಶುಲ್ಕ ವಿಧಿಸುವ ದೂರುಗಳನ್ನು ಕಡಿಮೆ ಮಾಡಬಹುದು ಎಂದು ಸಂಘ ಪತ್ರದಲ್ಲಿ ತಿಳಿಸಿದೆ. ಮೂರು ವರ್ಷಗಳಿಂದ ಪ್ರಯಾಣ ದರ ಏರಿಕೆಯಾಗದ ಕಾರಣ ಕನಿಷ್ಠ ಆಟೋ ದರವನ್ನು ಕೂಡ ಹೆಚ್ಚಿಸುವಂತೆ ಸಂಘ ಒತ್ತಾಯಿಸಿದೆ. ಈ ಬಗ್ಗೆ ಆದರ್ಶ ಆಟೋ ಯೂನಿಯನ್ ಅಧ್ಯಕ್ಷ ಮಂಜುನಾಥ್ ಮಾಹಿತಿ ನೀಡಿದ್ದಾರೆ.



ಇಂಧನ ಮತ್ತು ಬಿಡಿಭಾಗಗಳ ಬೆಲೆಗಳು ಮತ್ತು ಹಣದುಬ್ಬರದಿಂದ ಸಮಸ್ಯೆ ಎದುರಾಗಿದೆ ಎಂದು ಪತ್ರ ಬರೆಯಲಾಗಿದೆ. ಬೆಂಗಳೂರು ನಗರದಲ್ಲಿ ಆಟೋದರ ಪರಿಷ್ಕರಣೆಯನ್ನು 2021ರ ಡಿಸೆಂಬರ್ 20ರಂದು ಮಾಡಲಾಗಿದೆ. ನಂತರ ಪರಿಷ್ಕರಣೆ ಮಾಡಿಲ್ಲ.

ಪುಟ 2

## ಲಾಸ್ ವೇಗಾಸ್‌ನಲ್ಲಿ ಗುಂಡಿನ ದಾಳಿ- ಐವರ ದುರ್ಮರಣ



**ಲಾಸ್ ವೇಗಾಸ್:** ಲಾಸ್ ವೇಗಾಸ್‌ನಲ್ಲಿರುವ ಅಪಾರ್ಟ್‌ಮೆಂಟ್‌ಗಳ ಮೇಲೆ ನಡೆದ ಗುಂಡಿನ ದಾಳಿಯಲ್ಲಿ ಐವರು ಸಾವನ್ನಪ್ಪಿ, 13 ವರ್ಷದ ಬಾಲಕ ಗಂಭೀರ ಗಾಯಗೊಂಡ ಘಟನೆ ನಡೆದಿದೆ. ಗುಂಡಿನ ದಾಳಿ ನಡೆಸಿದ ಶಂಕಿತನನ್ನು ಎರಿಕ್ ಆಡಮ್ಸ್ (47) ಎಂದು ಗುರುತಿಸಲಾಗಿದೆ. ಘಟನೆಯ ಬಳಿಕ ಈತನೂ ಗುಂಡು ಹಾರಿಸಿಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ ಎನ್ನಲಾಗಿದೆ. ಎರಿಕ್ ಆಡಮ್ಸ್ ಸೋಮವಾರ ತಡರಾತ್ರಿ ಅದೇ ಸಂಕೀರ್ಣದಲ್ಲಿರುವ ಎರಡು ನಾರ್ತ್ ಲಾಸ್ ವೇಗಾಸ್ ಅಪಾರ್ಟ್‌ಮೆಂಟ್‌ಗಳಲ್ಲಿ ನಾಲ್ವರು ಮಹಿಳೆಯರು ಮತ್ತು ಓರ್ವ ಪುರುಷನನ್ನು ಗುಂಡಿಕ್ಕಿ ಕೊಂದಿದ್ದಾನೆ ಎಂದು ಶಂಕಿಸಲಾಗಿದೆ. ಶಂಕಿತ ನ ಸುಳಿವಿನ ಮೇರೆಗೆ ಪೊಲೀಸರು ಆತನನ್ನು ಬಂಧಿಸಲು ತೆರಳಿದಾಗ ಆತ ಸ್ಥಳದಿಂದ ಪರಾರಿಯಾಗಿದ್ದಾನೆ. ಬಳಿಕ ಶೂಟೌಟ್ ಮಾಡಿಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಸದ್ಯ ಈ ಘಟನೆಯ ಹಿಂದಿರುವ ಉದ್ದೇಶ ಏನು ಎಂಬುದನ್ನು ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

## ಹುಬ್ಬಳ್ಳಿ ವಿಮಾನ ನಿಲ್ದಾಣ ನಿರ್ದೇಶಕರಿಗೆ ಜೀವ ಬೆದರಿಕೆ ಇ-ಮೇಲ್

**ಹುಬ್ಬಳ್ಳಿ:** ಇತ್ತೀಚೆಗೆ ಬಾಂಬ್ ಬೆದರಿಕೆಯ ಇ-ಮೇಲ್ ಸಂದೇಶಗಳು ಹೆಚ್ಚಾಗಿವೆ. ಎರಡು ದಿನದ ಹಿಂದೆಯಷ್ಟೇ ಕಲಬುರಗಿ ವಿಮಾನ ನಿಲ್ದಾಣಕ್ಕೆ ಬಾಂಬ್ ಬೆದರಿಕೆಯ ಇ-ಮೇಲ್ ಬಂದಿತ್ತು. ಇದೀಗ ಹುಬ್ಬಳ್ಳಿ ವಿಮಾನ ನಿಲ್ದಾಣ ನಿರ್ದೇಶಕರಿಗೆ ಜೀವ ಬೆದರಿಕೆಯ ಇ-ಮೇಲ್ ಬಂದಿದೆ.



ವಿಮಾನ ನಿಲ್ದಾಣ ನಿರ್ದೇಶಕ ರೂಪೇಶ್ ಕುಮಾರ್‌ಗೆ ವ್ಯಕ್ತಿಯೊಬ್ಬನಿಂದ ಇ-ಮೇಲ್ ಮೂಲಕ ಜೀವಬೆದರಿಕೆ ಸಂದೇಶ ಬಂದಿದೆ. ಲಾಂಗ್ ಲೀವ್ ಪ್ಯಾಲೆಸ್ತೇನ್ ಎಂಬ ಹೆಸರಿನ ಮೇಲ್ ಐಡಿಯಿಂದ ನಿರ್ದೇಶಕರ ಕಚೇರಿಯ ಮೇಲ್ ಐಡಿಗೆ ಬೆದರಿಕೆ ಸಂದೇಶ ಬಂದಿದೆ. ನಾವು ನಿಮ್ಮನ್ನು ನಾಶ ಮಾಡುತ್ತೇವೆ. ನೀವು ಮಾಡಿದ ಎಲ್ಲ ಕೆಟ್ಟ ಕೆಲಸಗಳಿಗೆ ಉತ್ತರವಿಲ್ಲ ಎಂದು ಭಾವಿಸಿದ್ದೀರ. ಬೆಂಕಿಯಲ್ಲಿ ಎಸೆಯುತ್ತೇವೆ, ಉಸಿರುಗಟ್ಟಿ ಸಾಯುತ್ತೀರ ಎಂದು ಜೀವ ಬೆದರಿಕೆ ಹಾಕಿದ್ದಾರೆ. ಇ-ಮೇಲ್ ಸಂದೇಶ ಬಂದ ತಕ್ಷಣವೇ ರೂಪೇಶ್ ಅವರು ಈ ವಿಚಾರವನ್ನು ಟರ್ಮಿನಲ್ ಉಸ್ತುವಾರಿ ಪ್ರತಾಪ್ ಅವರ ಗಮನಕ್ಕೆ ತಂದಿದ್ದಾರೆ. ನಂತರ ಸಿಎಎಸ್‌ಓ, ಐಬಿ, ಬಿಡಿಡಿಎಸ್ ಮತ್ತು ಬಾಂಬ್ ನಿಷ್ಕ್ರಿಯ ದಳಕ್ಕೆ ಮಾಹಿತಿ ರವಾನಿಸಿದ್ದು ವಾಯುಯಾನ ಭದ್ರತಾ ನಿಯಮದ ಪ್ರಕಾರ ಅಗತ್ಯ ಕ್ರಮಗಳನ್ನು ಅಧಿಕಾರಿಗಳು ಕೈಗೊಂಡಿದ್ದಾರೆ. ಈ ಕುರಿತು ಗೋಕುಲ ರೋಡ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಎರಡು ದಿನಗಳ ಹಿಂದೆ ಕಲಬುರಗಿ ವಿಮಾನ ನಿಲ್ದಾಣದ ಕಟ್ಟಡದಲ್ಲಿ ಬಾಂಬ್ ಇಡಲಾಗಿದೆ ಎಂದು ವಿಮಾನ ನಿಲ್ದಾಣದ ನಿರ್ದೇಶಕ ಚಿಲಕಾ ಮಹೇಶ್ ಅವರಿಗೆ ಇ-ಮೇಲ್ ಮೂಲಕ ಬಾಂಬ್ ಬೆದರಿಕೆ ಸಂದೇಶ ಬಂದಿತ್ತು. ತಕ್ಷಣವೇ ರಾಜ್ಯ ಕೈಗಾರಿಕಾ ಭದ್ರತಾ ಪಡೆಯ ಸಿಬ್ಬಂದಿ, ಶ್ವಾನದಳ ತಪಾಸಣೆ ನಡೆಸಿ ಯಾವುದೇ ಅನುಮಾನಾಸ್ಪದ ವಸ್ತು ಕಂಡುಬಂದಿಲ್ಲ ಎಂದು ತಿಳಿಸಿದ್ದರು.

# ಡೆಂಗ್ಯೂ ಪತ್ತೆ, ಚಿಕಿತ್ಸೆಯನ್ನು ಗಂಭೀರವಾಗಿ ಪರಿಗಣಿಸಿ

**ಬೆಂಗಳೂರು:** ಡೆಂಗ್ಯೂ ಪತ್ತೆ ಮತ್ತು ಚಿಕಿತ್ಸೆಯನ್ನು ಗಂಭೀರವಾಗಿ ಪರಿಗಣಿಸಿ. ಅಗತ್ಯ ಚಿಕಿತ್ಸೆ, ಚುಚ್ಚುಮದ್ದು ನೀಡಲು ಸೂಕ್ತ ಕ್ರಮವಹಿಸಿ ಎಂದು ಅಧಿಕಾರಿಗಳಿಗೆ ಸಿಎಂ ಸಿದ್ದರಾಮಯ್ಯ ಸೂಚನೆ ನೀಡಿದರು.



ರಾಜ್ಯದಲ್ಲಿ ಡೆಂಗ್ಯೂ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಆರೋಗ್ಯ ಸಚಿವರು ಹಾಗೂ ಸರ್ಕಾರದ ಹಿರಿಯ ಅಧಿಕಾರಿಗಳ ಸಭೆ ನಡೆಸಿ ಸಿಎಂ ಚರ್ಚಿಸಿದರು.

ರಾಜ್ಯದಲ್ಲಿ ನಿನ್ನೆಯ ವರೆಗೆ ಒಟ್ಟು 5,374 ಪ್ರಕರಣ ವರದಿಯಾಗಿದ್ದು, 5 ಮರಣಗಳು ಸಂಭವಿಸಿವೆ. ಭಾರತ ಸರ್ಕಾರವು ಡೆಂಗ್ಯೂ ಪ್ರಕರಣಗಳಲ್ಲಿ ಅಚಿಜ ಜಿಚಿಣಚಿಟಣಥಿ ಡಿಚಿಣಜ ಅಂದರೆ ಮರಣ ಪ್ರಮಾಣ ಶೇ. 0.5 ನ್ನು ಮೀರುವಂತಿಲ್ಲ ಎಂದು ನಿಗದಿ ಪಡಿಸಿದೆ. ರಾಜ್ಯದಲ್ಲಿ ಮರಣ ಪ್ರಮಾಣ ಇನ್ನೂ ಕಡಿಮೆ ಪ್ರಮಾಣದಲ್ಲಿದೆ. ಅಂದರೆ, ಅಚಿಜ ಜಿಚಿಣಚಿಟಣಥಿ ಡಿಚಿಣಜ 0.09% ಇದೆ. ಬೆಂಗಳೂರು, ಚಿಕ್ಕಮಗಳೂರು, ಮೈಸೂರು, ಹಾವೇರಿ, ಶಿವಮೊಗ್ಗ, ಚಿತ್ರದುರ್ಗ, ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪ್ರಕರಣಗಳು ಕಾಣಿಸಿಕೊಂಡಿವೆ. ಬಿಬಿಎಂಪಿ ವ್ಯಾಪ್ತಿಯಲ್ಲಿ 1,230 ಪ್ರಕರಣಗಳು ವರದಿಯಾಗಿವೆ. ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಿದ್ದು, ನಿಯಂತ್ರಣಕ್ಕೆ ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಳ್ಳಿ ಎಂದು ಅಧಿಕಾರಿಗಳಿಗೆ ಸಿಎಂ ಸೂಚನೆ ನೀಡಿದರು.

ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ಚಿಕಿತ್ಸಾ ಸೌಲಭ್ಯಗಳು, ಔಷಧಿಗಳು ಲಭ್ಯವಿರುವುದನ್ನು ಖಾತರಿಪಡಿಸಿಕೊಳ್ಳಿ. ಆಶಾ ಕಾರ್ಯಕರ್ತೆಯರು, ನರ್ಸಿಂಗ್ ವಿದ್ಯಾರ್ಥಿಗಳು, ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಮತ್ತಿತರ ಸ್ವಯಂ ಸೇವಕರ ನೆರವಿನೊಂದಿಗೆ ಮನೆ ಮನೆ ಸಮೀಕ್ಷೆ ನಡೆಸಿ ಅರಿವು ಮೂಡಿಸಿ ಎಂದು ತಿಳಿಸಿದರು.

ಪ್ರತಿ ಶುಕ್ರವಾರ ರೋಗ ಹರಡುವ ಮೂಲ ಪತ್ತೆ ಮತ್ತು ನಾಶ ವಿಶೇಷ ಅಭಿಯಾನ ಮಾಡಲಾಗುವುದು. ಪ್ರತಿ ವಾರ ಬಿಬಿಎಂಪಿ, ನಗರಾಭಿವೃದ್ಧಿ ಮತ್ತು ಆರೋಗ್ಯ ಇಲಾಖೆಯವರು ಜಂಟಿಯಾಗಿ ಡೆಂಗ್ಯೂ ನಿಯಂತ್ರಣ ಕುರಿತು ಪರಿಶೀಲನೆ ನಡೆಸಬೇಕು. ಸ್ವಚ್ಛತೆ ಹಾಗೂ ನೀರು ನಿಲ್ಲದಂತೆ ನಗರ ಸ್ಥಳೀಯ ಸಂಸ್ಥೆಗಳು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಡೆಂಗ್ಯೂ ನಿಯಂತ್ರಣಕ್ಕೆ ಸಾರ್ವಜನಿಕರು ಸಹಕಾರ ನೀಡುವುದು ಅತಿ ಅಗತ್ಯ. ಡೆಂಗ್ಯೂ ಈಡಿಸ್ ಈಜಿಪ್ಟೈ ಎಂಬ ಸೊಳ್ಳೆಯಿಂದ ಹರಡುತ್ತದೆ. ಇದರ ಲಾರ್ವಾ ಮತ್ತು ಮೊಟ್ಟೆಗಳನ್ನು ಮೂಲದಲ್ಲಿಯೇ ನಾಶ ಮಾಡಬೇಕು. ಈ ಬಗ್ಗೆ ಸಾರ್ವಜನಿಕರಲ್ಲಿ ವ್ಯಾಪಕವಾಗಿ ಅರಿವು ಮೂಡಿಸಲು ಸಲಹೆ ನೀಡಿದರು. ಈ ವೇಳೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಉಪಸ್ಥಿತರಿದ್ದು, ಅಧಿಕಾರಿಗಳಿಗೆ ಅಗತ್ಯ ಸಲಹೆ-ಸೂಚನೆಗಳನ್ನು ನೀಡಿದರು.

## ಶಿವಕುಮಾರ್ ವಿರುದ್ಧ ಹಣ ದುರುಪಯೋಗ ಆರೋಪ ಎಫ್‌ಐಆರ್ ದಾಖಲು

**ಹಾಸನ:** ಸೂರಜ್ ರೇವಣ್ಣಗೆ ಬ್ಲಾಕ್‌ಮೇಲ್ ಮಾಡಲಾಗಿದೆ ಎಂದು ದೂರು ನೀಡಿದ್ದ ಶಿವಕುಮಾರ್ ವಿರುದ್ಧ ಹಣ ದುರುಪಯೋಗ ಆರೋಪದಲ್ಲಿ ಎಫ್‌ಐಆರ್ ದಾಖಲಾಗಿದೆ.

ಶ್ರೀರಾಮ್ ಫೈನಾನ್ಸ್‌ನ ರಾಮನಾಥಪುರ ಶಾಖೆಯಲ್ಲಿ ಕೆಲಸ ಮಾಡುತ್ತಿದ್ದ ಶಿವಕುಮಾರ್ ಮೇಲೆ ವಾಹನ ಸಾಲ ಪಡೆದ ಗ್ರಾಹಕರು ನೀಡಿದ್ದ ಹಣವನ್ನು ದುರ್ಬಳಕೆ ಮಾಡಿದ ಆರೋಪ ಕೇಳಿ ಬಂದಿದೆ.

ಆರು ಗ್ರಾಹಕರು ವಾಹನ ಸಾಲದ ವಂತಿಗೆ ಕಟ್ಟಲು ನೀಡಿದ್ದ 2,91,916 ರೂ. ಹಣವನ್ನು ಶಿವಕುಮಾರ್ ದುರ್ಬಳಕೆ ಮಾಡಿದ್ದಾರೆ ಎಂದು ಆರೋಪಿಸಿ ರಾಮನಾಥಪುರ ಶಾಖೆಯ ಮ್ಯಾನೇಜರ್ ಕೇಶವಮೂರ್ತಿ ಅವರು ಜೂ.21 ರಂದು ಕೊಣನೂರು ಠಾಣೆಗೆ ದೂರು ನೀಡಿದ್ದರು.

ಅರಕಲಗೂಡು ಮೂಲದ ಯುವಕನೋರ್ವನಿಂದ ಎಂಎಲ್‌ಸಿ ಸೂರಜ್ ರೇವಣ್ಣಗೆ ಬ್ಲಾಕ್ ಮೇಲ್ ಮಾಡಲಾಗಿದೆ ಎಂದು ಆರೋಪಿಸಿ ಶಿವಕುಮಾರ್ ದೂರು ನೀಡಿದ್ದರು.



## ನಟ ದರ್ಶನ್ ಬಳಿ ಇದೆ 2 ಯುಎಸ್ ಮೇಡ್ ಪಿಸ್ತೂಲ್‌ಗಳು!

**ಬೆಂಗಳೂರು:** ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಕೊಲೆ ಪ್ರಕರಣ ಸಂಬಂಧ ಇದೀಗ ದರ್ಶನ್ ಮತ್ತು ಪ್ರದೋಷ್ ನ ಮತ್ತೊಂದು ಇಂಟ್ರೆಸ್ಟಿಂಗ್ ವಿಚಾರ ಬೆಳಕಿಗೆ ಬಂದಿದೆ.



ನಟ ದರ್ಶನ್ ಬಳಿ ಲೈಸೆನ್ಸ್ ಪಡೆದಿರುವ 2 ಯುಎಸ್ ಮೇಡ್ ಪಿಸ್ತೂಲ್‌ಗಳಿದ್ದರೆ, ಪ್ರದೋಷ್ ಬಳಿ ಒಂದು ಲೈಸೆನ್ಸ್ ಪಿಸ್ತೂಲ್ ಇರುವುದು ಬೆಳಕಿಗೆ ಬಂದಿದೆ. ದರ್ಶನ್ ಮತ್ತು ಪ್ರದೋಷ್‌ಗೆ ಶಸ್ತ್ರಾಸ್ತ್ರ ಠೇವಣಿ ವಿನಾಯಿತಿಯನ್ನು ಪೊಲೀಸರೇ ನೀಡಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

ಕಳೆದ ಲೋಕಸಭಾ ಚುನಾವಣಾ ವೇಳೆ ಲೈಸೆನ್ಸ್ ಪಡೆದಿರುವ ಎಲ್ಲಾ ಶಸ್ತ್ರಾಸ್ತ್ರಗಳನ್ನು ಪೊಲೀಸರಿಗೆ ಒಪ್ಪಿಸಬೇಕು. ಆದರೆ ಗಣ್ಯ ವ್ಯಕ್ತಿಗಳು ಅನಿವಾರ್ಯದ ಕುರಿತು ದಾಖಲೆ ನೀಡಿ ಶಸ್ತ್ರಾಸ್ತ್ರ ವಾಪಸ್ ನೀಡುವಿಕೆಯಿಂದ ವಿನಾಯಿತಿ ಪಡೆಯಬಹುದಾಗಿದೆ. ನಿವೃತ್ತ ನ್ಯಾಯಾಧೀಶರು, ಐಎಎಸ್, ಐಪಿಎಸ್ ಅಧಿಕಾರಿಗಳು, ಬ್ಯಾಂಕ್ ಮ್ಯಾನೇಜರ್ ಗಳು, ಬ್ಯುಸಿನೆಸ್ ಮನ್‌ಗಳು, ಶಾಸಕರು, ಪರಿಷತ್ ಸದಸ್ಯರು ಸೇರಿ ಹಿರಿಯ ರಾಜಕಾರಣಿಗಳಿಗೆ ಮಾತ್ರ ವಿನಾಯಿತಿ ನೀಡಬಹುದು. ಉಳಿದಂತೆ ಎಲ್ಲರ ಬಳಿಯಿರುವ ಶಸ್ತ್ರಾಸ್ತ್ರಗಳನ್ನು ಆಯಾ ಪೊಲೀಸ್ ಠಾಣಾ ಇನ್ಸ್‌ಪೆಕ್ಟರ್ ವಶಕ್ಕೆ ಪಡೆಯಬೇಕಾಗಿದೆ.

ನಗರದ 277 ಜನರಿಗೆ ಶಸ್ತ್ರಾಸ್ತ್ರ ಠೇವಣಿ ವಿನಾಯಿತಿ ನೀಡಲಾಗಿತ್ತು. ಅತಿ ಗಣ್ಯರಿಗೆ ನೀಡುವ ವಿನಾಯಿತಿಯಲ್ಲಿ ನಟ ದರ್ಶನ್ ಮತ್ತು ಪ್ರದೋಷ್‌ಗೆ ಕೂಡ ವಿನಾಯಿತಿ ನೀಡಿ ಕಳೆದ ಮಾರ್ಚ್ 27 ರಂದು ಬೆಂಗಳೂರು ಪೊಲೀಸ್ ಕಮೀಷನರ್ ದಯಾನಂದ್ ಆದೇಶ ಹೊರಡಿಸಿದ್ದರು. ಬಿ.ದಯಾನಂದ್ ಅವರು ಶಸ್ತ್ರಾಸ್ತ್ರ ಠೇವಣಿ ಸ್ಕ್ರೀನಿಂಗ್ ಕಮಿಟಿಯ ಅಧ್ಯಕ್ಷರಾಗಿದ್ದಾರೆ. ಬೆಂಗಳೂರು ನಗರದ್ಯಾಂತ 7,830 ಗನ್ ಲೈಸೆನ್ಸ್ ಪರವಾನಗಿದಾರರಿದ್ದಾರೆ.

ನಟ ದರ್ಶನ್ ಮತ್ತು ಪ್ರದೋಷ್ ಪಿಸ್ತೂಲ್ ಗಳನ್ನು ವಶಕ್ಕೆ ಪಡೆಯುವಂತೆ ಸೂಚನೆ ನೀಡಲಾಗಿದೆ. ಈ ಕುರಿತು ತನಿಖಾಧಿಕಾರಿಗಳು ಆರ್ ಆರ್ ನಗರ ಮತ್ತು ಗಿರಿನಗರ ಪೊಲೀಸರಿಗೆ ಪತ್ರ ಬರೆದಿದ್ದಾರೆ.

### ಬೆಲೆ ಏರಿಕೆ ಕೊಡುಗೆ, ಹಣದುಬ್ಬರ ಏರಿಕೆ

## ಇದು ಕಾಂಗ್ರೆಸ್ ಗ್ಯಾರಂಟಿ

**ಬೆಂಗಳೂರು:** ರಾಜ್ಯದ ಕಾಂಗ್ರೆಸ್ ಪಕ್ಷ, ಕಾಂಗ್ರೆಸ್ ಸರ್ಕಾರವು ಕರ್ನಾಟಕದಲ್ಲಿ ಅಧಿಕಾರಕ್ಕೆ ಬಂದ ದಿನದಿಂದಲೂ ಬೆಲೆ ಏರಿಕೆಯ ಕೊಡುಗೆಯನ್ನು ವರ್ಷದುದ್ದಕ್ಕೂ ಜನರಿಗೆ ನೀಡಿದೆ ಎಂದು ರಾಜ್ಯದ ಮಾಜಿ ಉಪ ಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವಥ್ ನಾರಾಯಣ್ ಕಿಡಿಕಾರಿದ್ದಾರೆ.



ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಜನರ ರಕ್ತ ಹೀರುವುದು, ಬೆಲೆ ಏರಿಕೆಯ ಬರೆ ಎಳೆಯುವುದೇ ಈ ಸರ್ಕಾರದ ಸಾಧನೆ ಎಂದು ಟೀಕಿಸಿದರು. ಬೆಲೆ ಏರಿಕೆ ಮತ್ತು ಹಣದುಬ್ಬರದ ಗ್ಯಾರಂಟಿಯನ್ನು ಕಾಂಗ್ರೆಸ್ ಸರ್ಕಾರ ನೀಡುತ್ತಿದೆ ಎಂದು ದೂರಿದರು.

ಹೈನುಗಾರರಿಗೆ ಹಾಲಿನ ಸಬ್ಸಿಡಿ ನೀಡಿಲ್ಲ. ರೈತರಿಗೆ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ ನೀಡಬೇಕಾದ ಹಣ ನೀಡುತ್ತಿಲ್ಲ. ಬರ ನಿರ್ವಹಣೆಯಲ್ಲಿ ಸರ್ಕಾರ ತನ್ನ ಪಾಲಿನ ಹಣವನ್ನೂ ನೀಡಿಲ್ಲ. ರೈತರ ಮೇಲೆ ಬಿತ್ತನೆ ಬೀಜದ ದರದಿಂದ ಆರಂಭಿಸಿ ವಿದ್ಯುತ್ತಿನವರೆಗೆ, ನೀರಿನ ದರವನ್ನೂ ಹೆಚ್ಚಿಸಿಕೊಂಡು ಬರುತ್ತಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಅರ್ಧ ಲೀಟರ್ ಹಾಲಿಗೂ 2 ರೂ., ಒಂದು ಲೀಟರ್ ಹಾಲಿಗೂ 2 ರೂ. ದರ ಏರಿಸಿದೆ. ಇದು ಬಡವರಿಗೆ ದೊಡ್ಡ ಹೊಡೆತ ಕೊಟ್ಟಂತಾಗಿದೆ. ಈಗಾಗಲೇ ಸಂಕಷ್ಟದಲ್ಲಿರುವ ಜನರನ್ನು ಇನ್ನಷ್ಟು ಸಂಕಷ್ಟಕ್ಕೆ ಸಿಲುಕಿಸುವ ಕೆಲಸವನ್ನು ಬಹಳ ಪ್ರಾಮಾಣಿಕವಾಗಿ ಮಾಡುತ್ತಿದ್ದಾರೆ. ಭ್ರಷ್ಟ ಕಾಂಗ್ರೆಸ್ ಸರ್ಕಾರ ಜನವಿರೋಧಿ, ಇದು ಅಭಿವೃದ್ಧಿ ಶೂನ್ಯ ಸರ್ಕಾರ. ಬಿಜೆಪಿ ಈ ಬೆಲೆ ಹೆಚ್ಚಳವನ್ನು ತೀವ್ರವಾಗಿ ಖಂಡಿಸುತ್ತದೆ. ಕೆಎಂಎಫ್, ಸರ್ಕಾರದ ಭ್ರಷ್ಟಾಚಾರವನ್ನು ನಿಯಂತ್ರಿಸಬೇಕು. ಜನರು ನಿಮಗೆ ಆಶೀರ್ವಾದ ಮಾಡಿದ್ದಾರೆ. ಜನರಿಗೆ ಕಿರುಕುಳ, ಹಿಂಸೆ ಕೊಡುವುದು ಸಲ್ಲದು. ತೆರಿಗೆಯ ಬರೆ ಎಳೆಯಬೇಡಿ. ಅಧಿಕಾರವನ್ನು ಪ್ರಾಮಾಣಿಕವಾಗಿ, ಜನಪರ ಆಡಳಿತ ಕೊಡಬೇಕು ಎಂದು ಆಗ್ರಹಿಸಿದರು. ಅದರ ಬದಲು, ವಾಲ್ಮೀಕಿ ನಿಗಮ ಸೇರಿ, ಎಲ್ಲ ಇಲಾಖೆಗಳಲ್ಲಿ ಲೂಟಿ ನಡೆದಿದೆ ಎಂದು ಹೇಳಿದರು.

## ಓಂ ಬಿರ್ಲಾ ಆಯ್ಕೆ

ಅವಿರೋಧವಾಗಿ ಸ್ಪೀಕರ್ ಆಯ್ಕೆ ಮಾಡುವ ಸಂಪ್ರದಾಯವನ್ನು ಪ್ರತಿಪಕ್ಷಗಳು ಮುರಿದವು.

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಲೋಕಸಭೆಯಲ್ಲಿ ಕೆಳಮನೆಯ ಸ್ಪೀಕರ್ ಆಗಿ ಓಂ ಬಿರ್ಲಾ ಅವರನ್ನು ಆಯ್ಕೆ ಮಾಡುವ ಪ್ರಸ್ತಾಪವನ್ನು ಮಂಡಿಸಿದರು. ಸಾಂಪ್ರದಾಯಿಕವಾಗಿ, ಲೋಕಸಭೆಯ ಸ್ಪೀಕರ್ ಮತ್ತು ಉಪಸಭಾಪತಿಯನ್ನು ಆಡಳಿತ ಪಕ್ಷ ಮತ್ತು ವಿರೋಧ ಪಕ್ಷದ ನಡುವಿನ ಒಮ್ಮತದ ಮೂಲಕ ಆಯ್ಕೆ ಮಾಡಲಾಗುತ್ತಿತ್ತು.

ಸ್ಪೀಕರ್ ಹುದ್ದೆಗೆ ನಡೆದ ಸ್ಪರ್ಧೆಯಲ್ಲಿ ರಾಜಸ್ಥಾನದ ಕೋಟಾದಿಂದ ಮೂರು ಬಾರಿ ಸಂಸದರಾಗಿರುವ ಬಿಜೆಪಿಯ ಓಂ ಬಿರ್ಲಾ ಅವರು ಕೇರಳದ ಮಾವೇಲಿಕರದಿಂದ ಎಂಟು ಅವಧಿಗೆ ಸಂಸದರಾಗಿರುವ ಕಾಂಗ್ರೆಸ್‌ನ ಕೋಡಿಕುನ್ನಿಲ್ ಸುರೇಶ್ ವಿರುದ್ಧ ಸ್ಪರ್ಧಿಸಿದ್ದರು.

## ಬೀದಿಗಿಳಿದು ಪ್ರತಿಭಟಿಸುವ ಎಚ್ಚರಿಕೆ

**ಏನು ಹೇಳಿದ್ದರು ಆರೋಗ್ಯ ಸಚಿವ:** ಸರ್ಕಾರದ ಕಡೆಯಿಂದ 108 ಆಂಬ್ಯುಲೆನ್ಸ್ ಸಿಬ್ಬಂದಿಗೆ ವೇತನ ಬಾಕಿ ಉಳಿಸಿಕೊಂಡಿಲ್ಲ. ನ್ಯಾಯಯುತವಾಗಿ ಕೊಡಬೇಕಾದ ಸಂಬಳ ಕೊಡಲಾಗುತ್ತಿದೆ. ಈ ವಿಚಾರದಲ್ಲಿ ಸರ್ಕಾರಕ್ಕೆ ಹಣಕಾಸಿನ ಕೊರತೆ ಇಲ್ಲ ಎಂದು ಕಳೆದ ತಿಂಗಳು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟಪಡಿಸಿದ್ದರು.

2023-24ನೇ ಆರ್ಥಿಕ ವರ್ಷದಲ್ಲಿ 108 ಆಂಬ್ಯುಲೆನ್ಸ್ ಸೇವೆಗಾಗಿ 210.33 ಕೋಟಿ ರೂ. ಅನುದಾನಕ್ಕೆ ಅನುಮೋದನೆ ನೀಡಲಾಗಿತ್ತು. ಈ ಪೈಕಿ 162.40 ಕೋಟಿ ರೂ. ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಿದ್ದ ಆರೋಗ್ಯ ಸಚಿವರು, 108 ಆಂಬ್ಯುಲೆನ್ಸ್ ಸಿಬ್ಬಂದಿ ಕಾನೂನುಬಾಹಿರವಾಗಿ ಮುಷ್ಕರಕ್ಕೆ ಮುಂದಾದರೆ ಪರ್ಯಾಯ ವ್ಯವಸ್ಥೆಗೂ ಸಿದ್ಧರಿದ್ದೇವೆ ಎಂದು ಎಚ್ಚರಿಕೆ ನೀಡಿದ್ದರು.

## ನಂದಿನಿ ಹಾಲಿನ ದರ ಹೆಚ್ಚಳ

ಹೆಚ್ಚುವರಿ 50 ಒ.ಐ ಹಾಲು ಇಲ್ಲದಿದ್ದರೂ ಪ್ರತಿ ಅರ್ಧ ಲೀಟರ್ ಹಾಗೂ ಒಂದು ಲೀಟರ್ ಪ್ಯಾಕೆಟ್‌ಗೆ ಹೆಚ್ಚುವರಿ 2 ರೂ. ಪಡೆಯಲಾಗುತ್ತಿದೆ. ಕೆಎಂಎಫ್ ಹೊರಡಿಸಿರುವ ಆದೇಶದಲ್ಲಿ ಜೂನ್ 26 ರಿಂದಲೇ ಹೊಸ ದರ ಅನ್ವಯವಾಗುತ್ತದೆ ಅಂತ ನಮೂದಿಸಿರುವುದರಿಂದ ಹೊಸ ದರದಲ್ಲಿ ಮಾರಾಟ ಮಾಡುತ್ತಿರುವುದಾಗಿ ವ್ಯಾಪಾರಿಗಳು ಹೇಳುತ್ತಿದ್ದಾರೆ.

ಈ ಮಧ್ಯೆ ಕೆಎಂಎಫ್ ಅಧಿಕಾರಿಗಳು ಸೋಮವಾರ ರಾತ್ರಿ ಬಂದ ಹಾಲನ್ನು ಹಳೆದರಕ್ಕೆ ಮಾರಾಟ ಮಾಡಬೇಕು. ಇಂದು ಸಂಜೆ ಬರುವ ಹಾಲಿನ ಪ್ಯಾಕೆಟ್ ಅನ್ನ ಹೊಸ ದರಕ್ಕೆ ಮಾರಾಟ ಮಾಡಬೇಕು ಅಂತ ವ್ಯಾಪಾರಿಗಳಿಗೆ ಸೂಚಿಸಿರುವುದು ಇದೀಗ ವ್ಯಾಪಾರಿಗಳು ಹಾಗೂ ಗ್ರಾಹಕರು ಗೊಂದಲಕ್ಕೆ ಸಿಲುಕುವಂತಾಗಿದೆ. ಒಟ್ಟಿನಲ್ಲಿ ಒಂದೆಡೆ ಬೆಲೆ ಹೆಚ್ಚಳದ ಹೊರೆಯಾದ್ರೆ ಇನ್ನೊಂದೆಡೆ ಹಳೆ ಪ್ಯಾಕೆಟ್‌ಗಳಿಗೆ ಹೊಸ ದರ ಅನ್ವಯಿಸುತ್ತಿರುವುದಕ್ಕೆ ಗ್ರಾಹಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ನಂಬಿಕೆ ಇಲ್ಲ

ಅಲ್ಲದೆ, ಹಲವು ದೇಶಗಳು ಕೂಡ ಭಾರತದೊಂದಿಗೆ ಉತ್ತಮ ಬಾಂಧವ್ಯಕ್ಕೆ ಒತ್ತು ನೀಡುತ್ತಿವೆ. ಉಭಯ ದೇಶಗಳ ನಡುವಿನ ಸಂಬಂಧಕ್ಕೆ ಸಂಬಂಧಿಸಿದಂತೆ ನೆರೆಯ ರಾಷ್ಟ್ರ ಪಾಕಿಸ್ತಾನದಿಂದಲೂ ಮಹತ್ವದ ಹೇಳಿಕೆ ಬಂದಿದೆ.ಪಾಕಿಸ್ತಾನವು ಯಾವಾಗಲೂ ಭಾರತದೊಂದಿಗೆ ಉತ್ತಮ ಸಂಬಂಧವನ್ನು ಹೊಂದಲು ಉತ್ಸುಕವಾಗಿದೆ ಎಂದು ಹೇಳಿದರು.

## ತುಕಾರಾಂ, ಶ್ರೀರಾಮುಲು ಲಾಬಿ

ಎಂಬ ಮಾಹಿತಿ ಇದೆ. ಈಗಾಗಲೇ ಕಳೆದ ವಿಧಾನ ಸಭೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ನಾಗೇಂದ್ರ ವಿರುದ್ಧ ಸೋತಿದ್ದ ರಾಮುಲು ಮತ್ತೆ ಲೋಕಸಭಾ ಯಲ್ಲಿ ಸ್ಪರ್ಧೆ ಮಾಡಿ ತುಕಾರಾಂ ವಿರುದ್ಧ ಸೋಲನುಭವಿಸಿದ್ದಾರೆ. ಬಳಿಕ ಈಗ ಮತ್ತೆ ಸಂಡೂರ ಕ್ಷೇತ್ರದ ಟಿಕೆಟ್ ಆಕಾಂಕ್ಷಿ ಯಾಗಿ ಶ್ರೀರಾಮುಲು ಹೆಸರು ಜೋರಾಗಿಯೇ ಕೇಳಿಸುತ್ತಿದೆ.

ಒಟ್ಟಿನಲ್ಲಿ ಸಂಡೂರ ವಿಧಾನ ಸಭಾ ಕ್ಷೇತ್ರದ ಉಪ ಚುನಾವಣೆ ಕಾವು ಜೋರಾಗಿದ್ದು ರಾಷ್ಟ್ರೀಯ ಪಕ್ಷಗಳ ಟಿಕೆಟ್ ಗಾಗಿ ಭರ್ಜರಿ ಲಾಬಿ ನಡೆಯುತ್ತಿದೆ. ಯಾವ ಪಕ್ಷ ಯಾರಿಗೆ ಟಿಕೆಟ್ ನೀಡುತ್ತದೆ, ಜೊತೆಗೆ ಬರುವ ಚುನಾವಣೆಯನ್ನ ಜನ ಯಾರ ಕೈ ಹಿಡಿಯುತ್ತಾರೆ ಎನ್ನುವುದನ್ನ ಕಾದು ನೋಡಬೇಕಿದೆ.

ಮೊದಲನೇ ಪುಟದಿಂದ...

## ಚಾಲಕರ ಸಂಘ ಒತ್ತಾಯ

ನಗರದಲ್ಲಿ ಆರಂಭದ 2 ಕಿ.ಮೀ.ಗೆ 30 ರೂ. ನಂತರ ಪ್ರತಿ ಹೆಚ್ಚುವರಿ ಕಿ.ಮೀ. 15 ರೂ ದರ ನಿಗದಿಯಾಗಿದೆ. ಈ ದರ 3 ವರ್ಷಗಳ ಹಿಂದೆ ಪರಿಷ್ಕರಿಸಲಾಗಿತ್ತು. ಈಗ ಮತ್ತೆ 5 ರಿಂದ 10 ರುಪಾಯಿ ಪರಿಷ್ಕರಿಸಲು ಮನವಿ ಮಾಡಲಾಗಿದೆ. ಸದ್ಯ ಬೆಂಗಳೂರು ನಗರದಲ್ಲಿ ಕನಿಷ್ಠ 30 ರುಪಾಯಿ ಇದ್ದು, ಅದನ್ನು 40 ರುಪಾಯಿ ಮಾಡಬೇಕೆಂದು ಮನವಿ ಮಾಡಲಾಗಿದೆ. ಈ ಬಗ್ಗೆ ಮಾತಾನಾಡಿದ ಕೆಲವು ಮಂದಿ ಪ್ರಯಾಣಿಕರು, ಉಳಿದ ಎಲ್ಲಾ ದರ ಹೆಚ್ಚಳವಾದರೆ ಆಟೋ ಚಾಲಕರು ಕೂಡ ದರ ಏರಿಕೆ ಮಾಡಲೇಬೇಕಷ್ಟೆ ಎಂದಿದ್ದಾರೆ. ಒಟ್ಟಿನಲ್ಲಿ ಪೆಟ್ರೋಲ್, ಡಿಸೇಲ್, ಹಾಲಿನ ದರ ಏರಿಕೆ ಬೆನ್ನಲ್ಲೇ ಇದೀಗ ಬೆಂಗಳೂರು ಆಟೋ ದರ ಏರಿಕೆಯ ಬರೆಯೂ ಶ್ರೀಸಾಮಾನ್ಯನಿಗೆ ತಟ್ಟುವ ಸಾಧ್ಯತೆ ಇದೆ. ಆದರೆ ಬೆಂಗಳೂರು ನಗರ ಜಿಲ್ಲಾಧಿಕಾರಿ ಯಾವ ಕ್ರಮ ಕೈಗೊಳ್ಳುತ್ತಾರೆ ಎಂದು ಕಾದು ನೋಡಬೇಕಿದೆ.

## ಪ್ರದೇಶ ಒತ್ತುವರಿ

ಸ್ಥಳೀಯ ಜನಪ್ರತಿನಿಧಿಗಳು, ರಾಜಕೀಯ ಮುಖಂಡರ ಸಹಾಯದಿಂದ ಅತಿಕ್ರಮಣ ಆರೋಪ ಕೇಳಿ ಬಂದಿದೆ. ಒತ್ತುವರಿ ತೆರವು ಮಾಡದಿದ್ರೆ ಡ್ಯಾಂಗೆ ಅಪಾಯ ಕಟ್ಟಿಟ್ಟ ಬುತ್ತಿ. ಅಕ್ರಮ ಒತ್ತುವರಿಯಿಂದಾಗಿ ಡ್ಯಾಂ ನೀರು ಸಂಗ್ರಹಕ್ಕೆ ಧಕ್ಕೆ ಸಾಧ್ಯತೆ. ಸಂಗ್ರಹ ಸಾಮರ್ಥ್ಯ ಕುಗ್ಗಿದ್ರೆ ಭವಿಷ್ಯದಲ್ಲಿ ನೀರಿಗೆ ಹಾಹಾಕಾರ ಎದುರಾಗಲಿದೆ. ಜಮೀನು ಮಾಲೀಕ ಟ್ರಂಚ್ ಹೊಡೆಸಿ ದೊಡ್ಡ ದೊಡ್ಡ ಕಲ್ಲುಗಳನ್ನ ಟ್ರಂಚ್ ಗೆ ಹಾಕಿಸಿದ್ದಾನೆ. ಕೂಡಲೇ ಒತ್ತುವರಿ ತೆರವು ಮಾಡಲು ಸ್ಥಳೀಯರು ಆಗ್ರಹಿಸಿದ್ದಾರೆ.

ಕೃಷ್ಣ ರಾಜ ಸಾಗರ ಅಣೆಕಟ್ಟನ್ನು 1924 ರಲ್ಲಿ ಮೈಸೂರು ಮತ್ತು ಮಂಡ್ಯ ಜಿಲ್ಲೆಗಳಿಗೆ ಕಾವೇರಿ ನದಿಗೆ ಅಡ್ಡಲಾಗಿ ನಿರ್ಮಿಸಲಾಯಿತು. ಇದು ಮೈಸೂರು ಮತ್ತು ಮಂಡ್ಯದಲ್ಲಿ ನೀರಾವರಿಗೆ ಪ್ರಮುಖ ನೀರಿನ ಮೂಲವಾಗಿದೆ. ಕೆಲ ತಿಂಗಳ ಹಿಂದೆ ಕೆಆರ್ ಎಸ್ ಅಣೆಕಟ್ಟೆಯ ಸುತ್ತಮುತ್ತ ಗಣಿಗಾರಿಕೆಗೆ ನಿರ್ಬಂಧ ಹೇರಿ ಕರ್ನಾಟಕ ಹೈಕೋರ್ಟ್ ಆದೇಶಿಸಿತ್ತು. ಕೆಆರ್ ಎಸ್ ನ 20 ಕಿಲೋಮೀಟರ್ ವ್ಯಾಪ್ತಿಯಲ್ಲಿ ಗಣಿಗಾರಿಕೆಗೆ ನಿರ್ಬಂಧ ಹೇರಿ ಮುಖ್ಯ ನ್ಯಾಯಮೂರ್ತಿ ಪ್ರಸನ್ನ ಬಿ ವರಾಳೆ, ನ್ಯಾಯಮೂರ್ತಿ ಕೃಷ್ಣ ದೀಕ್ಷಿತ್ ಅವರಿದ್ದ ಪೀಠ ಆದೇಶ ನೀಡಿತ್ತು.

## ಒಗ್ಗದ ಜೈಲೂಟ

ಸಹ ಬಂಧಿಗಳ ಜತೆ ಅಷ್ಟಾಗಿ ಬೆರೆಯದೆ ದರ್ಶನ್ ಒಂಟಿಯಾಗಿ ಕುಳಿತಿದ್ದಾರೆ.

**ಪವಿತ್ರಾ, ಕಥೆ ಏನು?:** ಮಗಳನ್ನ ಕಂಡು ಪವಿತ್ರಾ ಗೌಡ ಕೊಂಚ ನಿರಾಳವಾಗಿದ್ದಾರೆ. ಕಳೆದ ಕೆಲ ದಿನಗಳಿಂದ ಮಾನಸಿಕವಾಗಿ ಅವರು ಕುಗ್ಗಿ ಹೋಗಿದ್ದರು. ಜೂನ್ 25ರಂದು ಪವಿತ್ರಾ ಗೌಡ ಭೇಟಿಗೆ ಅವರ ಮಗಳು ಖುಷಿ ಮೊದಲಾದವರು ಆಗಮಿಸಿದ್ದರು. ಸದ್ಯ ಪವಿತ್ರಾ ಪರಪ್ಪನ ಅಗ್ರಹಾರ ಜೈಲಿನ ಮಹಿಳಾ ಬ್ಯಾರಕ್ ನಲ್ಲಿ ಸೆರೆವಾಸ ಅನುಭವಿಸುತ್ತಿದ್ದಾರೆ.

ಸರಿಯಾಗಿ ಊಟ, ನಿದ್ರೆ ಮಾಡದೆ ಚಡಪಡಿಸುತ್ತಿದ್ದರು. ಮಗಳು ಖುಷಿ ಭೇಟಿ ಬಳಿಕ ಪವಿತ್ರಾ ಗೌಡ ಮನಸ್ಸು ಕೊಂಚ ಹಗುರವಾಗಿದೆ. ಜೈಲು ಸಿಬ್ಬಂದಿ ನೀಡಿದ್ದ ಮುದ್ದೆ, ಅನ್ನ, ಚಪಾತಿ, ಸಾಂಬರ್, ಮಜ್ಜಿಗೆ ಊಟ ಮಾಡಿ ಮಲಗಿದ್ದರು. ಇಂದು ಬೆಳಿಗ್ಗೆ 6 ಗಂಟೆಯ ಸುಮಾರಿಗೆ ನಿದ್ರೆಯಿಂದ ಪವಿತ್ರಾ ಎದ್ದಿದ್ದಾರೆ. ಬ್ಯಾರಕ್ ನಲ್ಲಿಯೇ ಕೆಲ ಹೊತ್ತು ವಾಕಿಂಗ್ ಮಾಡಿದ್ದಾರೆ.

## ಕೊಲೆ

3-4 ದಿನಗಳಿಗೊಮ್ಮೆ ವೇಣು ಎಂಬವರು ಹೇಮಾವತಿ ಮನೆಗೆ ಬಂದು ಹೋಗುತ್ತಿದ್ದರು. ಹೀಗೆ ಬಂದವರು 2-3 ದಿನ ಹೇಮಾವತಿ ಅವರ ಮನೆಯಲ್ಲೇ ಇರುತ್ತಿದ್ದರು. ಹೇಮಾವತಿ ಮತ್ತು ವೇಣು ದಂಪತಿ ಎಂದು ಅಂತ ಸ್ಥಳೀಯರು ತಿಳಿದಿದ್ದರು. ಎಂದಿನಂತೆ ಸೋಮವಾರ (ಜೂ.24)ರ ರಾತ್ರಿ ಹೇಮಾವತಿ ಮನೆಗೆ ಬಂದಿದ್ದ ವೇಣು ಮಂಗಳವಾರ (ಜೂ.25)ರ ನಸುಕಿನ ಜಾವ 3 ಗಂಟೆವರೆಗೆ ಇದ್ದು ಬಳಿಕ ಚಿಂತಾಮಣಿಯಲ್ಲಿರುವ ಪತ್ನಿಯ ಮನೆಗೆ ಹೋಗಿದ್ದಾನೆ.

ಪತ್ನಿಯ ಮನೆಗೆ ಹೋಗಿ ವಿಷ ಸೇವಿಸಿ, ತನ್ನ ಮಾವನಿಗೆ ಕರೆ ಮಾಡಿದ್ದಾನೆ. ಹೊಸಕೋಟೆಯಲ್ಲಿ ಓರ್ವ ಮಹಿಳೆ ಚಾಕುವಿನಿಂದ ಇರಿದುಕೊಂಡಿದ್ದಾಳೆ, ನಾನು ವಿಷ ಕುಡಿದಿದ್ದೇನೆ ಎಂದು ಹೇಳಿದ್ದಾನೆ. ಈ ವಿಚಾರ ತಿಳಿದ ವೇಣು ಮಾವ ಹೊಸಕೋಟೆ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಇತ್ತ ವೇಣು ಅನ್ನು ಚಿಕ್ಕಬಳ್ಳಾಪುರ ಆಸ್ಪತ್ರೆಗೆ ದಾಖಲಿಸಲಾಗಿದೆ.

**4 ಗಂಟೆಗಳ ಕಾಲ ಮಹಿಳೆಗಾಗಿ ಶೋಧ:** ವೇಣು ಮಾವನ ಮಾತು ಕೇಳಿ ಹೊಸಕೋಟೆ ಪೊಲೀಸರು ಕೊಲೆಯಾದ ಮಹಿಳೆಯ ಮನೆಗಾಗಿ ಶೋಧ ಕಾರ್ಯಕ್ಕೆ ಇಳಿದಿದ್ದರು. ಹಲವು ತಂಡಗಳಾಗಿ ಹುಡುಕಾಟ ನಡೆಸಿದರು. ಹೀಗೆ, ಸತತ ನಾಲ್ಕು ಗಂಟೆಗಳ ಕಾಲ ಹುಡುಕತ್ತಾ ಪೊಲೀಸರು ಕೊನೆಗೆ ಬಂದಿದ್ದು, ಹೇಮಾವತಿ ಮನೆಗೆ. ವೇಣು ಹೇಳಿಕೆ ಪ್ರಕಾರ ಮಹಿಳೆ ಚಾಕುವಿನಿಂದ ಇರಿದುಕೊಂಡು ಮೃತಪಟ್ಟಿದ್ದು ಹೇಮಾವತಿ. ಹೇಮಾವತಿ ಮನೆ ಬಾಗಿಲನ್ನು ತೆಗೆದು ನೋಡಿದಾಗ, ಗುಪ್ತಾಂಗ ಸೇರಿದಂತೆ ಮೂರು ಕಡೆ ಚಾಕುವನಿಂದ ಇರಿದು ಕೊಲೆ ಮಾಡಿರುವ ದೃಶ್ಯ ಕಂಡು ಬಂದಿದೆ. ಅಲ್ಲದೆ ಹೇಮಾವತಿ ಮೃತದೇಹದ ಬಳಿ ಪರಿಶೀಲನೆ ನಡೆಸಿ ಸಾಕ್ಷ್ಯಗಳನ್ನ ಕಲೆ ಹಾಕಿದ ಪೊಲೀಸರು ನಂತರ ಮಹಿಳೆಯ ಮೃತದೇಹವನ್ನ ಹೊಸಕೋಟೆಯ ಶವಾಗಾರಕ್ಕೆ ರವಾನಿಸಿದ್ದಾರೆ.

## ಮಹಿಳೆ

ಪದೇ ಪದೇ ಮನವಿ ಮಾಡಿದರೂ ಪಕ್ಷದ ಮುಖಂಡರು ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಅಳಲು ತೋಡಿಕೊಂಡಿದ್ದಾರೆ.

ವೈಎಸ್‌ಆರ್‌ಸಿಪಿ ನಾಯಕರ ವಿರುದ್ಧ ಭೂಕಬಳಿಕೆ ಪ್ರಕರಣಗಳ ಆರೋಪಗಳ ಕುರಿತ ಸುದ್ದಿ ಎಲ್ಲೆಡೆ ಹರಿದಾಡುತ್ತಿದ್ದಂತೆ ಈ ವಿಷಯ ಬೆಳಕಿಗೆ ಬಂದಿದೆ. ಇತ್ತೀಚೆಗೆ, ಗುಂಟೂರು ಜಿಲ್ಲೆಯಲ್ಲಿ ವೈಎಸ್‌ಆರ್ ಸಿಪಿ ಪಕ್ಷದ ಕಚೇರಿಯನ್ನು ಕೆಡವಲಾಗಿತ್ತು ವಿಶಾಖಪಟ್ಟಣಂನಲ್ಲಿ ಇನ್ನೂ ಎರಡು ಪಕ್ಷದ ಕಚೇರಿಗಳಿಗೆ ನೋಟಿಸ್ ನೀಡಲಾಗಿತ್ತು.

ಇತ್ತೀಚೆಗೆ ನಡೆದ ಲೋಕಸಭಾ ಚುನಾವಣೆಯಲ್ಲಿ ಟಿಡಿಪಿ ಗೆಲುವು ಸಾಧಿಸಿತ್ತು, ಚಂದ್ರಬಾಬು ನಾಯ್ಡು ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದರೆ ಜನಸೇನಾ ಪಕ್ಷದ ಪವನ್ ಕಲ್ಯಾಣ್ ಉಪಮುಖ್ಯಮಂತ್ರಿಯಾಗಿ ಅಧಿಕಾರದ ಗದ್ದುಗೆ ಏರಿದ್ದರು.

## ಪವಿತ್ರಾಗೆ ಮೇಕಪ್ ಮಾಡಿಕೊಳ್ಳಲು ಅವಕಾಶ ಕೊಟ್ಟಿದ್ದ ಪೊಲೀಸರಿಗೆ ಸಂಕಷ್ಟ

**ಬೆಂಗಳೂರು:** ನಟಿ, ದರ್ಶನ್ ಆಪ್ತೆ ಪವಿತ್ರಾ ಗೌಡ ಅವರು ಜೈಲಿನಲ್ಲಿದ್ದಾರೆ. ಸದ್ಯ ನ್ಯಾಯಾಂಗ ಬಂಧನದಲ್ಲಿ ಅವರಿದ್ದಾರೆ. ತಮಗೆ ಕಿರುಕುಳ ನೀಡಿದ ರೇಣುಕಾ ಸ್ವಾಮಿಯನ್ನು ದರ್ಶನ್ ಜೊತೆ ಸೇರಿ ಪವಿತ್ರಾ ಕೊಲೆ ಮಾಡಿದ್ದಾರೆ ಎನ್ನಲಾಗಿದೆ. ಸದ್ಯ ಪೊಲೀಸರು ಪ್ರಕರಣದ ವಿಚಾರಣೆ ನಡೆಸುತ್ತಿದ್ದಾರೆ. ಹೀಗಿರುವಾಗಲೇ ಪವಿತ್ರಾಗೆ ಮೇಕಪ್ ಮಾಡಲು ಅವಕಾಶ ನೀಡಿದ ಪಿಎಸ್ ಐಗೆ ಸಂಕಷ್ಟ ಎದುರಾಗಿದೆ.

ಜೂನ್ 15ರಂದು ಪವಿತ್ರಾ ಗೌಡ ಮನೆ ಮಹಜರು ಮಾಡಲಾಗಿತ್ತು. ಈ ವೇಳೆ ಪವಿತ್ರಾ ಗೌಡ ಕೂಡ ಇದ್ದರು. ಪವಿತ್ರಾಗೆ ಲಿಪ್ಸ್ ಟಿಕ್ ಹಚ್ಚಲು ಪಿಎಸ್‌ಐ ಅವಕಾಶ ಕೊಟ್ಟಿದ್ದರು. ಕರ್ತವ್ಯ ಲೋಪ ಹಿನ್ನಲೆಯಲ್ಲಿ ವಿಜಯನಗರದ ಮಹಿಳಾ ಪಿಎಸ್‌ಐಗೆ ನೋಟಿಸ್ ನೀಡಲಾಗಿದೆ. ಪಶ್ಚಿಮ ವಿಭಾಗ ಡಿಸಿಪಿ ಗಿರೀಶ್ ಅವರಿಂದ ನೋಟಿಸ್ ನೀಡಲಾಗಿದೆ. ಸದ್ಯ ಈ ವಿಚಾರ ಚರ್ಚೆ ಆಗುತ್ತಿದೆ. ಪವಿತ್ರಾ ಅವರು ಜೈಲಿನಲ್ಲಿ ಸಾಕಷ್ಟು ಅಸಮಾಧಾನಗೊಂಡಿದ್ದಾರೆ. ಜೈಲಿನ ಊಟ ಅವರಿಗೆ ಇಷ್ಟ ಆಗಿರಲಿಲ್ಲ. ಈ ಕಾರಣಕ್ಕೆ ಸಾಕಷ್ಟು ಬೇಸರ ಮಾಡಿಕೊಂಡಿದ್ದರು. ಕುಟುಂಬದವರು ಯಾರೂ ನೋಡಲು ಬರುತ್ತಿಲ್ಲ ಎನ್ನುವ ಟೆನ್ಷನ್ ಅವರಿಗೆ ಇತ್ತು. ಅವರ ಮಗಳು ಇತ್ತೀಚೆಗೆ ಬಂದು ಪವಿತ್ರಾನ ನೋಡಿ ಹೋಗಿದ್ದಾರೆ.

## ಕೆಆರ್‌ಎಸ್ ಡ್ಯಾಂ ಒಳಹರಿವಿನಲ್ಲಿ ಹೆಚ್ಚಳ ಮುಂಗಾರು ಚುರುಕು



**ಕೊಡಗು:** ಕಾವೇರಿ ಜಲಾನಯನ ಪ್ರದೇಶದಲ್ಲಿ ಮುಂಗಾರು ಚುರುಕು ಪಡೆದುಕೊಂಡಿದ್ದು, ಕೆಆರ್ ಎಸ್ ಡ್ಯಾಂ ಒಳಹರಿವಿನಲ್ಲಿ ಹೆಚ್ಚಳವಾಗಿದೆ.

ಎರಡು ದಿನಗಳಿಂದ ಕಾವೇರಿ ಜಲಾನಯನ ಪ್ರದೇಶದಲ್ಲಿ ಮುಂಗಾರು ಮಳೆಯಾಗುತ್ತಿದೆ. ಸ್ವಲ್ಪ ಪ್ರಮಾಣದಲ್ಲಿ ಮಳೆ ಬೀಳುತ್ತಿದೆ. ಹೀಗಾಗಿ ಒಳಹರಿವಿನ ಪ್ರಮಾಣ ಹೆಚ್ಚಾಗಿದೆ.

ಕೆಆರ್‌ಎಸ್ ಡ್ಯಾಂ ಒಳಹರಿವಿನ ಪ್ರಮಾಣ 2,241 ಕ್ಯೂಸೆಕ್ ಇದೆ. ನಿನ್ನೆಗಿಂತ ಇಂದು ಒಳಹರಿವಿನಲ್ಲಿ 1,000 ಕ್ಯೂಸೆಕ್ ಹೆಚ್ಚಳವಾಗಿದೆ.

124.80 ಅಡಿ ಗರಿಷ್ಠ ಮಟ್ಟದ ಡ್ಯಾಂನಲ್ಲಿ ಸದ್ಯ 87.90 ಅಡಿ ನೀರಿದೆ. 49.452 ಟಿಎಂಸಿ ಗರಿಷ್ಠ ಸಾಮಾರ್ಥ್ಯದ ಕೆಆರ್‌ಎಸ್‌ನಲ್ಲಿ 14.724 ಟಿಎಂಸಿ ನೀರು ಸಂಗ್ರಹವಾಗಿದೆ. ಕೆಆರ್‌ಎಸ್ ಡ್ಯಾಂನ ಒಳಹರಿವು 2,241 ಕ್ಯೂಸೆಕ್ ಹಾಗೂ ಡ್ಯಾಂನ ಹೊರ ಹರಿವು 986 ಕ್ಯೂಸೆಕ್ ಇದೆ.

## ಮನೆಯ ಗೋಡೆ ಕುಸಿದು ನಾಲ್ವರ ದುರ್ಮರಣ



**ಮಂಗಳೂರು:** ಮನೆಯ ಗೋಡೆ ಕುಸಿದು ಬಿದ್ದು ನಾಲ್ವರು ದುರ್ಮರಣಕ್ಕೀಡಾದ ಘಟನೆ ದಕ್ಷಿಣ ಕನ್ನಡ ಜಿಲ್ಲೆಯ ಉಳ್ಳಾಲ ತಾಲೂಕಿನ ಕುತ್ತಾರು ಮದನಿ ನಗರದಲ್ಲಿ ನಡೆದಿದೆ. ಮೃತರನ್ನು ಯಾಸಿರ್ (45), ಅವರ ಪತ್ನಿ ಮರಿಯಮ್ಮ(40) ಮಕ್ಕಳಾದ ರಿಯಾನ ಮತ್ತು ರಿಫಾನ ಎಂದು ಗುರುತಿಸಲಾಗಿದೆ. ಸೋಮವಾರ ರಾತ್ರಿ ಭಾರೀ ಮಳೆ ಸುರಿದ ಪರಿಣಾಮ ಮನೆಯ ಗೋಡೆ ಕುಸಿದು ಮನೆಯೊಳಗಿದ್ದ ನಾಲ್ವರು ಮೃತಪಟ್ಟಿದ್ದಾರೆ.

ಸದ್ಯ ಮೂವರ ಮೃತದೇಹವನ್ನು ಸ್ಥಳೀಯರು ಹೊರತೆಗೆದಿದ್ದಾರೆ. ಮತ್ತೊಬ್ಬ ಬಾಲಕಿ ಮೃತದೇಹಕ್ಕಾಗಿ ಕಾರ್ಯಾಚರಣೆ ನಡೆಸಲಾಗುತ್ತಿದೆ. ಉಳ್ಳಾಲ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಅವಘಡ ಸಂಭವಿಸಿದೆ.

# ವಿವಿಧ ಸೌಲಭ್ಯಗಳಿಗೆ ಅರ್ಜಿ

**ಮೈಸೂರು:** 2024-25ನೇ ಸಾಲಿನ ಎಸ್ಎಫ್‌ಸಿ ಮುಕ್ತ ನಿಧಿ ಹಾಗೂ ಪಟ್ಟಣ ಪಂಚಾಯಿತಿ ಅನುದಾನದಲ್ಲಿ ಶೇ.24.10, ಶೇ.7.25, ಮತ್ತು ಶೇ.5ರ ಯೋಜನೆಯ ಅನುದಾನದಲ್ಲಿ ಬೋಗಾದಿ ಪಟ್ಟಣ ಪಂಚಾಯಿತಿಯ ಫಲಾನುಭವಿಗಳಿಂದ ವಿವಿಧ ಸೌಲಭ್ಯಕ್ಕಾಗಿ ಅರ್ಜಿ ಅಹ್ವಾನಿಸಲಾಗಿದೆ.

ಶೇ.24.10ರ ಯೋಜನೆಯಲ್ಲಿ ಪರಿಶಿಷ್ಟ ಜಾತಿಯವರು ಡಾ.ಬಿ.ಆರ್. ಅಂಬೇಡ್ಕರ್ ನಿವಾಸ್ ಅಥವಾ ಇತರೆ ವಸತಿ ಯೋಜನೆ ಹಾಗೂ ಸ್ವಂತ ಮನೆ ನಿರ್ಮಿಸುವ ಫಲಾನುಭವಿಗಳಿಗೆ ಮನೆ ನಿರ್ಮಾಣ ಮಾಡಲು ಸಹಾಯಧನ ನೀಡಲಾಗುವುದು. ಶೇ.24.10 ಯೋಜನೆಯಲ್ಲಿ ಪರಿಶಿಷ್ಟ ಪಂಗಡದ ವೃತ್ತಿ ನಿರತ ವಕೀಲರಿಗೆ ಪುಸ್ತಕ ಖರೀದಿಗೆ ಸಹಾಯಧನ. ಶೇ24.10 ಮತ್ತು ಶೇ.7.25ರ ಯೋಜನೆಯಲ್ಲಿ ಪ.ಜಾತಿ, ಪ.ಪಂಗಡ ಹಾಗೂ ಇತರೆ ಹಿಂದುಳಿದ ವರ್ಗದವರುಗಳಿಂದ ಎಸ್ಎಸ್ಎಲ್‌ಸಿ, ಪಿಯುಸಿ, ಪದವಿ, ಸ್ನಾತಕೋತ್ತರ ಪದವಿಯವರಿಗೆ ಪ್ರೋತ್ಸಾಹಧನ ಹಾಗೂ ತಾಂತ್ರಿಕ, ವೈದ್ಯಕೀಯ ವ್ಯಾಸಂಗ ಮಾಡುತ್ತಿರುವ ವಿಧ್ಯಾರ್ಥಿಗಳಿಗೆ ಲ್ಯಾಪ್ ಟಾಪ್ ಖರೀದಿಗೆ ಸಹಾಯಧನ ನೀಡಲಾಗುವುದು. ಪ.ಜಾತಿ, ಪ.ಪಂಗಡದವರುಗಳಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಡೇ-ನಲ್ಮ್ ಯೋಜನೆಯ ವತಿಯಿಂದ ಬ್ಯಾಂಕ್‌ನಿಂದ ಸಾಲ ಪಡೆದವರಿಗೆ ಸಹಾಯಧನ ನೀಡಲಾಗುವುದು. ಶೇ.5ರ ಯೋಜನೆಯಲ್ಲಿ ವಿಶೇಷ ವಿಕಲಚೇತನರಿಗೆ ಜೀವ ವಿಮೆ, ಆರೋಗ್ಯ ವಿಮೆ ಮಾಡುವುದು, ಕಂತುಗಳನ್ನು ಪಾವತಿಸಲು ಹಾಗೂ ತ್ರಿಚಕ್ರ ವಾಹನ ಖರೀದಿಗೆ ಸಹಾಯಧನ, ಪೋಷಣ ಭತ್ಯ, ಸಾಧನ ಸಲಕರಣೆ ನೀಡಲಾಗುವುದು.

ಆಸಕ್ತಿಯುಳ್ಳ ಅರ್ಹ ಫಲಾನುಭವಿಗಳು ಕಚೇರಿಯಿಂದ ಅರ್ಜಿ ನಮೂನೆ ಪಡೆದು ಸಂಬಂಧಿಸಿದ ದೃಢೀಕೃತ ದಾಖಲಾತಿಗಳೊಡನೆ ಜು.10ರೊಳಗೆ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಚೇರಿಗೆ ಭೇಟಿ ನೀಡಬಹುದು ಅಥವಾ ಕಛೇರಿಯ ದೂ.ಸಂ: 0821-2331099ನ್ನು ಸಂಪರ್ಕಿಸಬಹುದು ಎಂದು ಬೋಗಾದಿ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿ ತಿಳಿಸಿದ್ದಾರೆ.

# ಸಮಾಜ ಸೇವಕರನ್ನು ಗೌರವಿಸುವ ಕಾರ್ಯ ಶ್ಲಾಘನೀಯ



**ಕೆ.ಆರ್.ನಗರ:** ಸಮಾಜದಲ್ಲಿ ಉತ್ತಮ ಕೆಲಸ, ಸೇವೆ ಸಲ್ಲಿಸುತ್ತಿರುವವನ್ನು ಗುರುತಿಸಿ ಅವರುಗಳನ್ನು ಗೌರವಿಸುವ ಕಾರ್ಯ ಶ್ಲಾಘನೀಯವಾದದ್ದು ಇದರಿಂದ ಇತರರಿಗೂ ಪ್ರೇರಣೆ ಸಿಗಲಿದೆ ಎಂದು ಶಾಸಕ ಡಿ.ರವಿಶಂಕರ್ ಹೇಳಿದರು.

ಪಟ್ಟಣದ ಶ್ರೀ ಕೃಷ್ಣ ಮಂದಿರದಲ್ಲಿ ಸೃಜನ ಲೇಖಕರು ಮತ್ತು ಕಲಾವಿದರ ಬಳಗದ ವತಿಯಿಂದ ನಡೆದ ಸಂಘದ ವಾರ್ಷಿಕೋತ್ಸವ ಹಾಗೂ ಸೃಜನ ಸದ್ಭಾವನಾ ಪ್ರಶಸ್ತಿ ಪ್ರದಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಳಗದವರಿಂದ ಸಾಧಕರನ್ನು ಗುರುತಿಸಿ ಸಮಾಜದ ಮುಖ್ಯವಾಹಿನಿಗೆ ತರುವುದು ಉತ್ತಮ ಕೆಲಸ ಎಂದರು.

ಇಂತಹ ಸಮಾಜ ಮುಖಿ ಚಟುವಟಿಕೆಗಳು ಸಂಘದ ವತಿಯಿಂದ ಮತ್ತಷ್ಟು ಮುಂದುವರೆಯಲಿ ಎಂದು ಆಶಿಸಿದ ಶಾಸಕರು ಇಂದು ಕೆಲವು ಸಂಘ ಸಂಸ್ಥೆಗಳಿಗೆ ಆರಂಭದ ದಿನದಲ್ಲಿದ್ದ ತುಡಿತ ಕಾರ್ಯದಕ್ಷತೆ ನಂತರದ ದಿನಗಳಲ್ಲಿ ಇರುವುದಿಲ್ಲ ಸೃಜನ ಬಳಗ ಕಳೆದ 20 ವರ್ಷಗಳಿಂದ ನಿರಂತರವಾಗಿ ಕಾರ್ಯ ಚಟುವಟಿಕೆ ಮಾಡಿಕೊಂಡು ಬರುತ್ತಿದೆ ಅಂದಿನಿಂದಲೂ ನಾನು ಬಳಗ ನಡೆಸುವ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದೇನೆ, ಬಳಗದ ಪದಾಧಿಕಾರಿಗಳ ಜವಬ್ದಾರಿಯುತ್ತ ಕೆಲಸಕ್ಕೆ ಎಲ್ಲಾ ರೀತಿಯ ಸಹಕಾರ ನೀಡುತ್ತೇನೆಂದು ಭರವಸೆ ನೀಡಿದರು.

ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಗ್ಯಾರಂಟಿ ಯೋಜನೆಗಳನ್ನು ಯಥಾವತ್ತಾಗಿ ಅನುಷ್ಠಾನ ಮಾಡಿರುವುದರ ಜತೆಗೆ ಕಳೆದ ಬಿಜೆಪಿ ಸರ್ಕಾರದ ಅವಧಿಯ ಅಭಿವೃದ್ದಿ ಕೆಲಸಗಳಿಗೆ ನೀಡಬೇಕಾದ 35 ಸಾವಿರ ಕೋಟಿ ರೂಗಳನ್ನು ಬಿಡುಗಡೆ ಮಾಡಿದ ಕಾರಣಕ್ಕಾಗಿ ನಿರೀಕ್ಷೆ ಮಾಡಿದ ಅನುದಾನ ತರಲು ಸಾಧ್ಯವಾಗಲಿಲ್ಲ ಮುಂದಿನ ದಿನಗಳಲ್ಲಿ ಪಟ್ಟಣ ಸೇರಿದಂತೆ ಎರಡು ತಾಲೂಕುಗಳ ಅಭಿವೃದ್ದಿಗಾಗಿ ಕ್ರೀಯಾ ಯೋಜನೆ ಸಿದ್ದಪಡಿಸಿ ಅನುದಾನಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು ಶೀಘ್ರದಲ್ಲಿಯೇ ಅನುದಾನ ಮಂಜೂರಾಗಲಿದೆ ಎಂದು ತಿಳಿಸಿದರು.

ಕೆ.ಆರ್.ನಗರ ಪಟ್ಟಣಕ್ಕೆ ಶುದ್ದ ಕುಡಿಯುವ ನೀರು ಸಬರಾಜು ಮಾಡುವ ಸಲುವಾಗಿ 4 ಓವರ್ ಹೆಡ್ ಟ್ಯಾಂಕ್ ನಿರ್ಮಾಣ ಮಾಡಲು, ಪಂಪ್‌ಹೌಸ್‌ನಲ್ಲಿ ನೀರು ಶುದ್ದಿಕರಿಸಲು ಫಿಲ್ಟರ್ ಅಳವಡಿಕೆ ಸೇರಿದಂತೆ ಪಾರ್ಕ್‌ಗಳಿಗೆ ಹೈಟೆಕ್ ಸ್ಪರ್ಶ ನೀಡಲು ಹಾಗೂ ಪುರಸಭೆ ಬಯಲು ರಂಗ ಮಂದಿರವನ್ನು ಉನ್ನತ್ತಿಕರಣಗೊಳಿಸಲು ನಿರ್ಧರಿಸಲಾಗಿದ್ದು ಅಗತ್ಯ ಅನುದಾನಕ್ಕಾಗಿ ಸಂಬಂಧ ಪಟ್ಟ ಇಲಾಖೆಗಳಿಗೆ ಮನವಿ ಸಲ್ಲಿಸಲಾಗಿದೆ ಎಂದು ಹೇಳಿದರು.

ಅಲ್ಪಾ ಕಾಲೇಜಿನ ಕಾರ್ಯದರ್ಶಿ ಸುಬ್ರಮಣ್ಯ, ಉಪನ್ಯಾಸಕ ಶ್ರೀನಿವಾಸ್, ಡಾ.ಜನಾರ್ಧನ್‌ಭಟ್, ಅಂಚೆ ಇಲಾಖೆಯ ರಾಜೇಶ್, ಪುರಸಭೆಯ ಆರೋಗ್ಯ ನಿರೀಕ್ಷ ಲೋಕೇಶ್, ಪೊಲೀಸ್ ಇಲಾಖೆಯ ಮಂಜು, ಯಶವಂತ್, ರೋಟರಿ ಕ್ಲಬ್ ಅಧ್ಯಕ್ಷ ನಾಗರಾಜುಬಾವೀಕಟ್ಟಿ, ಪುರಸಭೆ ನೌಕರ ಗಣೇಶ್, ಡಾ.ಶಾಂತಕುಮಾರ್ ಸೇರಿದಂತೆ ಸುಮಾರು 20 ಮಂದಿ ಸಾಧಕರಿಗೆ ಸದ್ಬಾವನಾ ಪ್ರಶಸ್ತಿ ನೀಡಿ ಗೌರವಿಸಲಾಯಿತು.

## ಕೆಡಿಪಿ ಸಭೆ ಮುಂದೂಡಿಕೆ

**ಮೈಸೂರು:** ಜೂ.26ರಂದು ಬೆಳಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್‌ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಉಪಸ್ಥಿತಿಯಲ್ಲಿ, ಜಿಲ್ಲಾ ಉಸ್ತುವಾರಿ, ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿದ್ದ 2024-25ನೇ ಸಾಲಿನ ತ್ರೈಮಾಸಿಕ ಕೆಡಿಪಿ ಸಭೆ ಮುಂದೂಡಲಾಗಿದೆ ಎಂದು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಎಂ.ಗಾಯತ್ರಿ ತಿಳಿಸಿದ್ದಾರೆ.

## ಬಾಡಿಗೆ ಕಟ್ಟಡಕ್ಕೆ ಮನವಿ

**ಮೈಸೂರು:** 2024-25ನೇ ಸಾಲಿನಲ್ಲಿ ಮೈಸೂರು ನಗರದಲ್ಲಿ ಹಿಂದುಳಿದ ವರ್ಗಗಳ ಇಲಾಖೆಯ 100 ಕ್ಕಿಂತ ಹೆಚ್ಚು ಸಂಖ್ಯಾಬಲ ಹೊಂದಿರುವ ಮೆಟ್ರಿಕ್ ನಂತರ ಬಾಲಕ, ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಸಾಕಷ್ಟು ಗಾಳಿ, ಬೆಳಕು, ನೀರಿನ ವ್ಯವಸ್ಥೆ, 10 ಸ್ನಾನದ ಗೃಹಗಳು, 10 ಶೌಚಾಲಯಗಳು, ಇರುವ ಮೂಲಭೂತ ಸೌಕರ್ಯವುಳ್ಳ ಸೂಕ್ತವಾದ ಬಾಡಿಗೆ ಕಟ್ಟಡದ ಅವಶ್ಯಕತೆ ಇರುತ್ತದೆ. ಆದ್ದರಿಂದ ಸೂಕ್ತವಾದ ಬಾಡಿಗೆ ಕಟ್ಟಡ ಲಭ್ಯವಿದ್ದಲ್ಲಿ ಅಗತ್ಯ ದಾಖಲಾತಿಗಳೊಂದಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಚೇರಿಯ ದೂ.ಸಂ: 0821-2445447ನ್ನು ಸಂಪರ್ಕಿಸಬಹುದು ಎಂದು ಮೈಸೂರು ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

## ಉಪನ್ಯಾಸಕ ಹುದ್ದೆಗಳಿಗೆ ಅರ್ಜಿ

**ಮೈಸೂರು:** ಚಾಮರಾಜೇಂದ್ರ, ಸರ್ಕಾರಿ ದೃಶ್ಯಕಲಾ ಕಾಲೇಜು ಸಂಸ್ಥೆಗೆ 2024-25ನೇ ಸಾಲಿಗೆ ಅತಿಥಿ ಉಪನ್ಯಾಸಕ, ಸಂಪನ್ಮೂಲ ವ್ಯಕ್ತಿಗಳಾಗಿ ಬೋಧನೆ ಮಾಡಲು ಇಚ್ಛಿಸುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು ಪ್ರಾಯೋಗಿಕ ಮತ್ತು ಥಿಯರಿ ಬೋಧನಾ ವಿಷಯಕ್ಕೆ ಅನ್ವಯ ಕಲೆ, ಚಿತ್ರಕಲೆ, ಶಿಲ್ಪ ಕಲೆ, ಅಚ್ಚುಕಲೆ ಅಥವಾ ಗ್ರಾಫಿಕ್ಸ್, ಛಾಯಾಚಿತ್ರ ಮತ್ತು ಛಾಯಾಚಿತ್ರ ಪತ್ರಿಕೋದ್ಯಮ ವಿಭಾಗ, ಕಲಾ ಇತಿಹಾಸ ವಿಷಯಗಳಿಗೆ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಸಂಬಂಧ ಪಟ್ಟ ವಿಷಯದಲ್ಲಿ ಸ್ನಾತಕೋತ್ತರ ಪದವಿ ಅಥವಾ ಪೋಸ್ಟ್ ಡಿಪ್ಲೋಮಾ, ಕನ್ನಡ, ಇಂಗ್ಲಿಷ್ ಹಾಗೂ ಹಿಂದಿ ಭಾಷಾ ವಿಷಯಗಳಿಗೆ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಕನ್ನಡ, ಇಂಗ್ಲಿಷ್ ಹಾಗೂ ಹಿಂದಿ ವಿಷಯದಲ್ಲಿ ಸ್ನಾತಕೋತ್ತರ ಪದವಿ, ಭಾರತ ಮತ್ತು ಭಾರತೀಯ ಸಂವಿಧಾನ ಹಾಗೂ ಸಂವಿಧಾನದ ಮೌಲ್ಯಗಳು ಬೋಧನಾ ವಿಷಯಕ್ಕೆ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಕಾನೂನು ವಿಷಯದಲ್ಲಿ ಸ್ನಾತಕೋತ್ತರ ಪದವಿ, ಸೈಬರ್ ಸೆಕ್ಯೂರಿಟಿ ಅಥವಾ ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಎಸ್ಇಸಿ ಪೇಪರ್ ಬೋಧನಾ ವಿಷಯಕ್ಕೆ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಎಂಎಸ್‌ಸಿ ಸ್ನಾತಕೋತ್ತರ ಪದವಿ, ಫೈನಾನ್ಸಿಯಲ್ ಎಜುಕೇಶನ್ ಅಂಡ್ ಇನ್ವೆಸ್ಟ್‌ಮೆಂಟ್ ಅವೇರ್ನೆಸ್ ಬೋಧನಾ ವಿಷಯಕ್ಕೆ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಎಂಕಾಂ ಅಥವಾ ಎಂಬಿಎ ಸ್ನಾತಕೋತ್ತರ ಪದವಿಯಲ್ಲಿ ಕನಿಷ್ಠ ಶೇ.55 ರಷ್ಟು ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು. ಅರ್ಜಿ ಸ್ವೀಕರಿಸಲು ಜು.9ಕೊನೆಯ ದಿನಾಂಕವಾಗಿದ್ದು, ಜು.10ರಂದು ಬೆಳಗ್ಗೆ 11 ಗಂಟೆಗೆ ಸಂಸ್ಥೆಯಲ್ಲಿ ಸಂದರ್ಶನ ನಡೆಸಲಾಗುವುದು. ಆಸಕ್ತ ಅಭ್ಯರ್ಥಿಗಳು ವೆಬ್‌ಸೈಟ್ ಮೂಲಕ ಮಾಹಿತಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂ.ಸಂ: 0821-2438931ನ್ನು ಸಂಪರ್ಕಿಸಬಹುದು ಎಂದು ಚಾಮರಾಜೇಂದ್ರ, ಸರ್ಕಾರಿ ದೃಶ್ಯಕಲಾ ಕಾಲೇಜಿನ ಡೀನ್ ತಿಳಿಸಿದ್ದಾರೆ.

## ವಿವಿಧ ಸೌಲಭ್ಯಗಳಿಗೆ ಅರ್ಜಿ

**ಮೈಸೂರು:** 2024-25ನೇ ಸಾಲಿನ ಹೂಟಗಳ್ಳಿ ನಗರಸಭಾ ವ್ಯಾಪ್ತಿಯ ಎಸ್ಎಫ್‌ಸಿ ಮುಕ್ತ ನಿಧಿ ಮತ್ತು ನಗರಸಭಾ ಸಾಮಾನ್ಯ ನಿಧಿಯಡಿಯಲ್ಲಿ ಶೇ.24.10ರ ಪರಿಶಿಷ್ಟ ಜಾತಿ, ಪಂಗಡದವರ, ಶೇ.7.25ರ ಇತರೆ ಹಿಂದುಳಿದ ವರ್ಗದ ಬಡಜನರ ಹಾಗೂ ಶೇ.5ರ ವಿಶೇಷ ಚೇತನರ ಕಲ್ಯಾಣ ನಿಧಿಯ ಕಾರ್ಯಕ್ರಮಗಳಡಿಯಲ್ಲಿ ವ್ಯಕ್ತಿ ಸಂಬಧಿತ ವಿವಿಧ ಸೌಲಭ್ಯಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಸೌಲಭ್ಯ ಪಡೆಯಲು ಇಚ್ಚಿಸುವ ಫಲಾನುಭವಿಗಳು ಸಂಬಂಧಪಟ್ಟ ಪೂರ್ಣ ದಾಖಲಾತಿಗಳೊಂದಿಗೆ ಆಗಸ್ಟ್ 02 ಸಂಜೆ 5 ಗಂಟೆಯೊಳಗೆ ನಗರಸಭಾ ಕಚೇರಿಗೆ ನಿಗಧಿತ ನಮೂನೆಯಲ್ಲಿ ಮಾಹಿತಿಗಳನ್ನು ಭರ್ತಿಮಾಡಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಹ ಫಲಾನುಭವಿಗಳಿಗೆ ಶೇ.24.10ರ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ಪಕ್ಕಾ ಮನೆ ನಿರ್ಮಾಣಕ್ಕಾಗಿ ಹಾಗೂ ಮೇಲ್ಛಾವಣಿ ದುರಸ್ಥಿ ಸಾಮಾಗ್ರಿಗಳನ್ನು ಖರೀದಿಸಲು ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ಹಾನಿಗೊಳಗಾದ ಮನೆಗಳಿಗೆ ಸಹಾಯಧನ ನೀಡುವುದು. ವಿವಿಧ ಹಂತಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಪ್ರೋತ್ಸಾಹ ಧನ ಹಾಗೂ ಬಿಇ, ಎಂಬಿಬಿಎಸ್ ಮಾಡುತ್ತಿರುವ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹೆಚ್ಚು ಅಂಕ ಪಡೆದವರಿಗೆ ಲ್ಯಾಪ್‌ಟಾಪ್‌ಗೆ ಸಹಾಯಧನ ನೀಡುವುದು. ಶೇ.7.25ರ ಯೋಜನೆಯಡಿ ಇತರೆ ಹಿಂದುಳಿದ ವರ್ಗದವರ ಬಡ ಜನರಿಗೆ ಪಕ್ಕಾ ಮನೆ ನಿರ್ಮಾಣಕ್ಕಾಗಿ ಹಾಗೂ ಒಂದು ಬಾರಿ ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ಹಾನಿಗೊಳಗಾದ ಮನೆಗಳಿಗೆ ರಿಪೇರಿಗಾಗಿ ಗರಿಷ್ಟ ಸಹಾಯಧನ ನೀಡುವುದು. ವಿವಿಧ ಹಂತಗಳಲ್ಲಿ ವ್ಯಾಸಂಗ ಮಾಡುತ್ತಿರುವ ಇತರೆ ಹಿಂದುಳಿದ ವರ್ಗದ ಬಡ ಜನರ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಪ್ರೋತ್ಸಾಹಧನ ಹಾಗೂ ಬಿಇ, ಎಂಬಿಬಿಎಸ್ ಮಾಡುತ್ತಿರುವ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹೆಚ್ಚು ಅಂಕ ಪಡೆದವರಿಗೆ ಲ್ಯಾಪ್‌ಟಾಪ್‌ಗೆ ಸಹಾಯಧನ ನೀಡುವುದು. ಶೇ.5ರ ಯೋಜನೆಯಡಿ ನಗರಸಭಾ ವ್ಯಾಪ್ತಿಯಲ್ಲಿನ ವಿಕಲಚೇತನರಿಗೆ ಕೃತಕ ಅಂಗ ಜೋಡಣೆಗೆ, ಶಸ್ತ್ರ ಚಿಕಿತ್ಸೆಗೆ, ಹಾಗೂ ಇನ್ನಿತರ ಸಾಧನ ಸಲಕರಣೆಗಳಿಗೆ ಸಹಾಯಧನ ನೀಡುವುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ವಿಷಯ ನಿರ್ವಾಹಕರನ್ನು ಭೇಟಿ ಮಾಡಬಹುದು ಎಂದು ಹೂಟಗಳ್ಳಿ ನಗರಸಭೆಯ ಪೌರಾಯುಕ್ತರು ತಿಳಿಸಿದ್ದಾರೆ.

# ಐಐಟಿಗೆ ಆಯ್ಕೆಯಾದ ಮೋನಿಕಾಗೆ ಅಭಿನಂದನೆ



**ಕೆ.ಆರ್.ಪೇಟೆ:** ತಾಲೂಕಿನ ಕಾಳೇನಹಳ್ಳಿ ನಿವಾಸಿಗಳಾದ ಕುಮಾರ್ ಅವರ ಪುತ್ರಿ ಕೆ.ಮೋನಿಕಾ ಐಐಟಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಉಚಿತ ಪ್ರವೇಶ ಪಡೆದ ತಾಲ್ಲೂಕಿನ ಏಕೈಕ ವಿದ್ಯಾರ್ಥಿನಿ ಎಂಬ ಕೀರ್ತಿಗೆ ಭಾಜನವಾಗಿದ್ದು, ಸಾಧನೆ ಮಾಡಿದ ಗ್ರಾಮೀಣ ವಿದ್ಯಾರ್ಥಿನಿ ಕೆ.ಮೋನಿಕಾ ಅವರನ್ನು ಕೆ.ಆರ್.ಪೇಟೆ ಪಟ್ಟಣದ ಪ್ರಗತಿ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಸರಳ ಕಾರ್ಯಕ್ರಮದಲ್ಲಿ ಶಾಲೆಯ ಆಡಳಿತ ಮಂಡಳಿಯ ವತಿಯಿಂದ ಅಭಿನಂದಿಸು ಸಾಧನೆಯನ್ನು ಸ್ಮರಿಸಲಾಯಿತು.

ತಾಲೂಕಿನ ಕಿಕ್ಕೇರಿ ಹೋಬಳಿಯ ಕಾಳೇನಹಳ್ಳಿ ವಿದ್ಯಾರ್ಥಿನಿ ಕೆ. ಮೋನಿಕಾ ಐ.ಐ.ಟಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದು ಉಚಿತ ಕಾಲೇಜು ಅಭ್ಯಾಸಕ್ಕೆ ಆಯ್ಕೆಯಾಗಿರುತ್ತಾರೆ. ಅವರಿಗೆ ಸರ್ಕಾರದಿಂದ ಎಲ್ಲಾ ಸೌಲಭ್ಯಗಳು ಉಚಿತವಾಗಿ ದೊರೆಯುತ್ತದೆ. ಗುಜರಾತಿನ ಗಾಂಧಿನಗರದ ಐಐಟಿ ಕಾಲೇಜಿಗೆ ಪ್ರಥಮ ಸುತ್ತಿನಲ್ಲಿ ಆಯ್ಕೆಯಾಗಿದ್ದಾರೆ. ಯಾವುದೇ ಸೌಲಭ್ಯಗಳಿಲ್ಲದ ಕುಗ್ರಾಮ ಕಾಳೇನಹಳ್ಳಿಯ ಗ್ರಾಮೀಣ ಪ್ರತಿಭೆಗೆ ಉತ್ತಮ ಅವಕಾಶ ಸಿಕ್ಕಿರುವುದು ಅಭಿನಂದನಾರ್ಹವಾದುದಾಗಿದೆ. ಇದು ಇತರ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮುಂದುವರಿಸಲು ಪ್ರೇರಣೆಯಾಗಿದೆ ಎಂದು ಅಭಿನಂದನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಪ್ರಾಂಶುಪಾಲ ಕೆ.ಕಾಳೇಗೌಡ ಅಭಿಪ್ರಾಯಪಟ್ಟರು.

ಪ್ರಗತಿ ಶಾಲೆಯ ಅಧ್ಯಕ್ಷರಾದ ಟಿ.ಶೈಲಜಾ ಪ್ರತಿಭಾನ್ವಿತ ವಿದ್ಯಾರ್ಥಿನಿ ಕೆ .ಮೋನಿಕಾ ಅವರಿಗೆ ಶಾಲು ಹೊದಿಸಿ ನೆನಪಿನ ಕಾಣಿಕೆ ನೀಡಿ ಸನ್ಮಾನ ಮಾಡಿದರು. ಜಿಲ್ಲಾ ಮಾಧ್ಯಮಿಕ ಶಿಕ್ಷಕರ ಸಂಘದ ಅಧ್ಯಕ್ಷರಾದ ಕೆ. .ಕಾಳೇಗೌಡ. ಪ್ರಗತಿ ಶಾಲೆಯ ಮುಖ್ಯ ಕಾರ್ಯನಿರ್ವಣಾಧಿಕಾರಿ ಎಂ.ಕೆ ಮೋನಿಕಾ ಹಾಗೂ ಪೋ?ಕರಾದ ಕುಮಾರ್, ರೇಖಾ ಹಾಗೂ ಶಾಲೆಯ ಶಿಕ್ಷಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಕುರಿಗಾಹಿಗಳ ರಕ್ಷಣೆಗೆ ಸರ್ಕಾರ ಬದ್ಧ



**ಬೆಂಗಳೂರು:** ಕುರಿಗಾಹಿಗಳ ರಕ್ಷಣೆ ನಮ್ಮ ಸರ್ಕಾರ ಬದ್ದ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಮಂಗಳವಾರ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಅಲೆಮಾರಿ ಕುರಿಗಾಹಿ ಸಮುದಾಯಗಳ ಮುಖಂಡರ ಸಭೆ ನಡೆಸಿ ಅವರ ಸಮಸ್ಯೆಗಳನ್ನು ಆಲಿಸಿದರು. ಅರಣ್ಯ ಪ್ರದೇಶದಲ್ಲಿ ಕುರಿಗಳನ್ನು ಮಾತ್ರ ಮೇಯಿಸಲು ಅವಕಾಶ ನೀಡುವ ಬಗ್ಗೆ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಲಾಗುವುದು ಎಂದು ತಿಳಿಸಿದರು.

ಕುರಿಗಳು ಸತ್ತರೆ ಒಂದು ಕುರಿಗೆ 5 ಸಾವಿರ ರೂಪಾಯಿ ಪರಿಹಾರ ನೀಡುವ ಅನುಗ್ರಹ ಯೋಜನೆ ಜಾರಿಯಲ್ಲಿದೆ. ಈ ಮೊತ್ತವನ್ನು ಇನ್ನಷ್ಟು ಹೆಚ್ಚಿಸುವ ಬಗ್ಗೆ ಪರಿಶೀಲನೆ ಮಾಡಲಾಗುವುದು ಎಂದು ಸಿಎಂ ಭರವಸೆ ನೀಡಿದರು.

ರಾಜ್ಯದಲ್ಲಿನ ವಲಸೆ ಕುರಿಗಾರರ ಮತ್ತು ಅವರ ಸ್ವತ್ತುಗಳ ಮೇಲಿನ ದೌರ್ಜನ್ಯ ತಡೆಯುವ ಕಾಯ್ದೆ ರೂಪಿಸುವುದು, ಕುರಿಗಳಿಗೆ ಉಚಿತ ಲಸಿಕೆ ನೀಡಲೂ ಅಗತ್ಯ ಸೂಚನೆ ನೀಡಲಾಗುವುದು. ಕುರಿಗಾಹಿಗಳಿಗೆ ಗುರುತಿನ ಚೀಟಿ ವಿತರಣೆ ನೀಡಲು ವ್ಯವಸ್ಥೆ ಮಾಡಲಾಗುವುದು. ಈ ಗುರುತಿನ ಚೀಟಿ ಆಧಾರದ ಮೇಲೆ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸೆ ನೀಡುವಂತೆ ಕೇರಂ ಕೈಗೊಳ್ಳಲಾಗುವುದು ಎಂದರು.

ಬಂದೂಕು ಪರವಾನಗಿ ನೀಡಲು ವ್ಯವಸ್ಥೆ, ಕುರಿಗಾಹಿಗಳ ಮಕ್ಕಳಿಗೆ ಸರ್ಕಾರಿ ವಸತಿ ಶಾಲೆಗಳಲ್ಲಿ ಆದ್ಯತೆ ಮೇರೆಗೆ ಪ್ರವೇಶ ನೀಡುವ ಬಗ್ಗೆ ಬಜೆಟ್‌ನಲ್ಲಿ ಘೋಷಣೆ ಮಾಡಿದ್ದು ಇವುಗಳಿಗೆ ಸರ್ಕಾರಿ ಆದೇಶ ನೀಡುವಂತೆ ಮುಖ್ಯಮಂತ್ರಿಗಳು ಸೂಚಿಸಿದರು.

ಪಶುಸಂಗೋಪನಾ ಇಲಾಖೆಯಲ್ಲಿ 1300 ವೈದ್ಯರ ಹುದ್ದೆ ಖಾಲಿ ಇದ್ದು, ಪ್ರಸ್ತುತ 400 ವೈದ್ಯರನ್ನು ನೇಮಕ ಮಾಡಲಾಗುತ್ತಿದೆ. ಮುಂದಿನ ವರ್ಷ ಬಾಕಿ ವೈದ್ಯರ ನೇಮಕಾತಿ ಮಾಡಲಾಗುವುದು. ಕುರಿಗಾರರು ಕ್ಯಾಂಪ್ ಮಾಡಿರುವ ಕಡೆಗಳಲ್ಲೇ ವೈದ್ಯರು ಬಂದು ಚಿಕಿತ್ಸೆ ನೀಡಬೇಕು ಎಂದು ಸೂಚಿಸಲಾಗುವುದು.

ಕುರಿಗಾರರ ಕುರಿ ಕಳ್ಳತನವಾದರೆ ಕೂಡಲೇ ಪ್ರಕರಣ ದಾಖಲು ಮಾಡಬೇಕು, ಬಂಧಿಸಿ ತನಿಖೆ ಮಾಡಲು ಹಾಗು ರಕ್ಷಣೆ ನೀಡುವ ವ್ಯವಸ್ಥೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಸೂಚಿಸಲಾಗುವುದು ಎಂದರು.

ಹಿಂದಿನ ಸರ್ಕಾರ ಸತ್ತ ಕುರಿಗಳಿಗೆ ನೀಡುವ ಅನುಗ್ರಹ ಯೋಜನೆಯನ್ನು ನಿಲ್ಲಿಸಿದ್ದು, ಈ ಕುರಿತು ಪರಿಹಾರ ನೀಡುವ ಬಗ್ಗೆ ಎಲ್ಲಾ ಜಿಲ್ಲೆಗಳಿಂದ ವರದಿ ತರಿಸಲಾಗುವುದು ಎಂದರು.

ಗೋಮಾಳಗಳನ್ನು ಯಾರಿಗೂ ಪರಭಾರೆ ಮಾಡಬಾರದೆಂದು ಈ ಹಿಂದೆ ನಮ್ಮ ಸರ್ಕಾರದ ಅವಧಿಯಲ್ಲಿ ಆದೇಶ ಹೊರಡಿಸಲಾಗಿತ್ತು. ಗೋಮಾಳಗಳ ರಕ್ಷಣೆ ಮಾಡಲಾಗುವುದು ಎಂದು ಮುಖ್ಯಮಂತ್ರಿಗಳು ಈ ಭರವಸೆ ನೀಡಿದರು.

ಪಶುಸಂಗೋಪನಾ ಸಚಿವ ವೆಂಕಟೇಶ್, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವೇಂದ್ರಪ್ಪ ವರ್ತೂರು, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಹೆಚ್.ಎಂ.ರೇವಣ್ಣ, ಪಶು ಸಂಗೋಪನಾ ಇಲಾಖೆ ಕಾರ್ಯದರ್ಶಿ ಅಜಯ್ ನಾಗಭೂಷಣ್ ಉಪಸ್ಥಿತರಿದ್ದರು.

# ಮೃತ ಚಾಲಕನ ಕುಟುಂಬಕ್ಕೆ ಆರ್ಥಿಕ ನೆರವು

**ಕೆ.ಆರ್.ಪೇಟೆ:** ಮಹಾರಾಷ್ಟ್ರ ರಾಜ್ಯದ ಮುಂಬೈ ಬಳಿಯ ಪುಣೆ ನಿವಾಸಿ ಎಳನೀರು ವಾಹನ ಚಾಲಕ ಪ್ರಭಾಕರ್ ಚೌದರಿ ಅವರು ಹೃದಯಾಘಾತದಿಂದ ಮೃತರಾಗಿದ್ದರು. ಅವರ ಮೃತ ದೇಹವನ್ನು ಮೃತ ಚಾಲಕನ ಸ್ವಗ್ರಾಮಕ್ಕೆ ಕೊಂಡೊಯ್ಯುವ ವಾಹನಕ್ಕೆ ತಗುಲುವ ವೆಚ್ಚಕ್ಕೆ ಸಮಾಜ ಸೇವಕರು ಹಾಗೂ ಆರ್.ಟಿ.ಓ ಅಧಿಕಾರಿಗಳಾದ ಮಲ್ಲಿಕಾರ್ಜುನ್ ಅವರು ಉದಾರವಾಗಿ ಆರ್ಥಿಕ ನೆರವು ನೀಡುವ ಮೂಲಕ ಮಾನವೀಯತೆ ಮೆರೆದಿದ್ದಾರೆ.

ಉತ್ತಮ ಎಳನೀರು ಮಾರುಕಟ್ಟೆಗೆ ಹೆಸರು ವಾಸಿಯಾಗಿರುವ ಕೆ.ಆರ್.ಪೇಟೆ ಪಟ್ಟಣದ ಎಳನೀರು ಮಾರುಕಟ್ಟೆಗೆ ಎಳನೀರು ವಾಹನವನ್ನು ಚಲಾಯಿಸಿಕೊಂಡು ಬಂದಿದ್ದ ಪ್ರಭಾಕರ್ ಚೌದರಿ ಮಾರುಕಟ್ಟೆಯಲ್ಲಿಯೇ ಹೃದಯಾಘಾತಕ್ಕೆ ಒಳಗಾಗಿ ಅಸ್ವಸ್ಥಗೊಂಡಿದ್ದರು. ಆದರೆ ಆಸ್ಪತ್ರೆಗೆ ಸೇರಿಸುವಷ್ಟರಲ್ಲಿ ಮೃತಪಟ್ಟಿದ್ದರು. ಈ ಸಂದರ್ಭದಲ್ಲಿ ಮೃತ ಚಾಲಕನ ಮೃತ ದೇಹವನ್ನು ಆತನ ಸ್ವಗ್ರಾಮಕ್ಕೆ ಕೊಂಡೊಯ್ಯಲು ಹಣಕಾಸಿನ ತೊಂದರೆಯಾಗಿತ್ತು.

ಈ ವಿಷಯವನ್ನು ತಾಲ್ಲೂಕು ಎಳನೀರು ವರ್ತಕರ ಸಂಘದ ಪದಾಧಿಕಾರಿಗಳು ಆರ್.ಟಿ.ಓ ಮಲ್ಲಿಕಾರ್ಜುನ್ ಅವರ ಗಮನಕ್ಕೆ ತಂದರು. ತಕ್ಷಣ ಎಳನೀರು ವರ್ತಕರ ಮನವಿಗೆ ಸ್ಪಂದಿಸಿದ ಮಲ್ಲಿಕಾರ್ಜುನ್ ಅವರು ಉದಾರವಾಗಿ ಆರ್ಥಿಕ ನೆರವು ನೀಡುವ ಮೂಲಕ ಮಾನವೀಯತೆಯ ಮೆರೆದರಲ್ಲದೇ, ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಮೃತ ಚಾಲಕನ ಪಾರ್ಥೀವ ಶರೀರಕ್ಕೆ ಗೌರವ ಸಲ್ಲಿಸಿ ಕಂಬನಿ ಮಿಡಿದರು.

# ಕನ್ನಡದಲ್ಲಿ ಪ್ರಮಾಣ ವಚನಕ್ಕೆ ಮೆಚ್ಚುಗೆ

**ಮೈಸೂರು:** ಕರ್ನಾಟಕದಿಂದ ಸಂಸತ್ತಿಗೆ ಆಯ್ಕೆಯಾಗಿರುವ ಸಂಸದರೆಲ್ಲರೂ ಮಾತೃಭಾಷೆ ಕನ್ನಡದಲ್ಲಿಯೇ ಪ್ರಮಾಣವಚನ ಸ್ವೀಕರಿಸುತ್ತಿರುವುದು ಕನ್ನಡ ಭಾಷೆಯ



ಅಭಿಮಾನ ಮತ್ತು ಗೌರವವನ್ನು ದಿಲ್ಲಿಯ ಸಂಸತ್ ಭವನದಲ್ಲಿ ಎತ್ತಿ ಹಿಡಿದಿದೆ ಎಂದು ಬಿಜೆಪಿ ಮುಖಂಡ ಗುರುಪಾದಸ್ವಾಮಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ

ಮೈಸೂರು ಮತ್ತು ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಸಂಸದ ಡಾ.ಮಂಜುನಾಥ್, ಕೇಂದ್ರ ಸಚಿವರಾದ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ, ವಿ.ಸೋಮಣ್ಣ ಮೊದಲಾದ ಹಿರಿಯ ಸಂಸದರು ಕೂಡ ತಮ್ಮ ನೂತನ ಆಯ್ಕೆಯ ಪ್ರಮಾಣ ವಚನವನ್ನು ಕನ್ನಡ ಭಾಷೆಯಲ್ಲಿಯೇ ಅನುವಾದ ಮಾಡಿಕೊಂಡು ಸಂಸತ್‌ನಲ್ಲಿ ಪ್ರತಿಜ್ಞಾವಿಧಿ ಸ್ವೀಕರಿಸಿದ್ದು, ಹೆಮ್ಮೆ ತರುವ ವಿಚಾರ. ಕರ್ನಾಟಕದಿಂದ ಆಯ್ಕೆಯಾಗಿರುವ ಎಲ್ಲಾ ಸಂಸದರು ಕನ್ನಡ ಭಾಷೆ ಮತ್ತು ಕನ್ನಡ ಪ್ರಾಂತ್ಯಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತನ್ನು ನೀಡಬೇಕು ಎಂದು ಮನವಿ ಮಾಡಿದ್ದಾರೆ. ನೂತನ ಸಂಸದರ ಕನ್ನಡ ಪ್ರಮಾಣ ವಚನಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದೆ.

# ಮಾದಕ ದ್ರವ್ಯದ ವಿರುದ್ಧ ಜಾಗೃತಿ ಅಭಿಯಾನ



**ಮೈಸೂರು:** ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ಮೈಸೂರು ಘಟಕ ಹಾಗೂ ಕೆಎಂಪಿಕೆ ಚಾರಿಟಬಲ್ ಟ್ರಸ್ಟ್ ವತಿಯಿಂದ ಮೈಸೂರು ನಗರದ ಪ್ರತಿ ಕಾಲೇಜುಗಳಲ್ಲಿ ಮಾದಕ ದ್ರವ್ಯ ಸೇವನೆ ಮತ್ತು ಅಕ್ರಮ ಮಾದಕ ವಸ್ತು ಕಳ್ಳ ಸಾಗಣೆ ವಿರೋಧದ ಕಾಲೇಜುಗಳಲ್ಲಿ ಕಡ್ಡಾಯವಾಗಿ ಮಕ್ಕಳಲ್ಲಿ ಜಾಗೃತಿ ಮೂಡಲಿ ಎಂದು ಸದ್ವಿದ್ಯಾ ಕಾಲೇಜು, ಮರಿಮಲ್ಲಪ್ಪ ಕಾಲೇಜು, ಟಿಟಿಎಲ್ ಕಾಲೇಜು, ಶಾರದಾ ವಿಲಾಸ ಕಾಲೇಜು, ಡಿ.ಬನುಮಯ್ಯ ಕಾಲೇಜು ಸೇರಿದಂತೆ ಇನ್ನಿತರ ಕಾಲೇಜುಗಳಿಗೆ ಪದಾಧಿಕಾರಿಗಳು ಭೇಟಿ ನೀಡಿ ಮಾದಕ ದ್ರವ್ಯ ಸೇವನೆಯಿಂದ ಆಗುವ ಅನಾಹುತಗಳ ಬಗ್ಗೆ ಜಾಗೃತಿಯ ಪೋಸ್ಟರ್ ನೀಡಿ ಜಾಗೃತಿ ಮೂಡಿಸಲಾಯಿತು.

ಬಳಿಕ ಮಾತನಾಡಿದ ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷರಾದ ವಿಕ್ರಂ ಅಯ್ಯಂಗಾರ್, ಮಾದಕ ದ್ರವ್ಯ ಸೇವನೆ ಮತ್ತು ಅಕ್ರಮ ಸಾಗಾಣಿಕೆಯಿಂದ ಸಮಾಜದ ಮೇಲಾಗುವ ಹಾನಿ ಮಾರಣಾಂತಿಕವಾದುದು. ಇದರ ದುಷ್ಪರಿಣಾಮ ಕುರಿತು ಅರಿವು ಮೂಡಿಸಿ ತಡೆಯುವ ಉದ್ದೇಶದಿಂದ 1989ರಿಂದ ಪ್ರತಿ ವರ್ಷ ಜೂ.26ರಂದು ಅಂತರಾಷ್ಟ್ರೀಯ ಮಾದಕ ದ್ರವ್ಯ ಸೇವನೆ ಮತ್ತು ಅಕ್ರಮ ಸಾಗಾಣಿಕೆ ವಿರೋಧಿ ದಿನ ಆಚರಿಸಲಾಗುತ್ತಿದೆ. ಈ ದಿನಾಚರಣೆಯ ಉದ್ದೇಶ ಹಾಗೂ ಮಾದಕ ವಸ್ತುಗಳ ನಿಯಂತ್ರಣ ಕಾಯ್ದೆಗಳ ಕುರಿತು ವಿದ್ಯಾರ್ಥಿಗಳು, ಯುವಜನತೆ ಅರ್ಥ ಮಾಡಿಕೊಳ್ಳಬೇಕು ಮತ್ತು ಮಾದಕ ದ್ರವ್ಯ ಸೇವನೆಯಿಂದ ಎದುರಾಗುವ ಸಮಸ್ಯೆಗಳು ಮತ್ತು ದುಷ್ಪರಿಣಾಮಗಳ ಕುರಿತು ವಿದ್ಯಾರ್ಥಿ ಹಂತದಲ್ಲೇ ಅರಿವು ಮೂಡಿಸುವುದರಿಂದ ತಡೆಯಲು ಸಾಧ್ಯವಾಗುವುದು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಟ್ರಸ್ಟ್ ಪದಾಧಿಕಾರಿಗಳಾದ ಅಜಯ್ ಶಾಸ್ತ್ರಿ, ರವಿಚಂದ್ರ, ಜಿ.ರಾಘವೇಂದ್ರ, ಎಸ್.ಎನ್.ರಾಜೇಶ್, ರಾಕೇಶ್, ದುರ್ಗಾ ಪ್ರಸಾದ್, ಸಚಿನ್ ನಾಯಕ್ ಇದ್ದರು.

# ಮಂಗಲದಲ್ಲಿ ಭಗೀರಥ ಜಯಂತಿ



**ಚಾಮರಾಜನಗರ:** ತಾಲ್ಲೂಕಿನ ಮಂಗಲ ಗ್ರಾಮದಲ್ಲಿ ಮಹರ್ಷಿ ಭಗೀರಥ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲಾಯಿತು.

ಭಗೀರಥ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದ ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರು ಮಹರ್ಷಿ ಭಗೀರಥರು ಆದರ್ಶ ಪುರುಷರಾಗಿದ್ದು ಲೋಕಕಲ್ಯಾಣಕ್ಕಾಗಿ ಶಿವನನ್ನು ಪ್ರಾರ್ಥಿಸಿ ಗಂಗೆಯನ್ನು ಭೂಮಿಗೆ ತಂದ ಮಹಾನ್ ಋಷಿಗಳು ಭಗೀರಥರು ಎಂದು ತಿಳಿಸಿದರು.

ಮಹರ್ಷಿಗಳ ಋಷಿ ಸದೃಶ ಜೀವನವನ್ನು ಪ್ರತಿಯೊಬ್ಬರು ಅನುಸರಿಸಿ ಪಾಲಿಸಿದಾಗ ಆಚರಣೆಗಳಿಗೆ ಅರ್ಥ ಬರುತ್ತದೆ ಎಂದು ಸಲಹೆ ನೀಡಿದರು. ಉಪ್ಪಾರ ಸಮುದಾಯ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಿ ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣ ಕೊಡಿಸಿ ಅವರನ್ನು ಸಮಾಜದ ಮುಖ್ಯವಾಹಿನಿಗೆ ತಂದು ಸುಶಿಕ್ಷಿತ ಸಮಾಜ ನಿರ್ಮಾಣ ಮಾಡುವತ್ತ ಗಮನಹರಿಸಬೇಕೆಂದು ಕಿವಿಮಾತು ಹೇಳಿದರು.

ಇದೇ ಸಂದರ್ಭದಲ್ಲಿ ಭಗೀರಥ ಮಹರ್ಷಿಗಳ ಭಾವಚಿತ್ರವನ್ನು ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಯಿತು. ಮಾರ್ಗದುದ್ದಕ್ಕೂ ತಳಿರು-ತೋರಣದೊಂದಿಗೆ ಶೃಂಗರಿಸಿ,ರಂಗೋಲಿ ಚಿತ್ತಾರದೊಂದಿಗೆ ಅದ್ದೂರಿಯಾದ ಮೆರವಣಿಗೆ ಸಾಗಿತು.

ಈ ಸಂದರ್ಭದಲ್ಲಿ ಅಯ್ಯನ ಸರಗೂರುಮಠದ ಮಹದೇವ ಶ್ರೀಗಳು, ಮಂಜುನಾಥಸ್ವಾಮಿ, ಗ್ರಾ.ಪಂ ಅಧ್ಯಕ್ಷ ಅಣ್ಣಪ್ಪಸ್ವಾಮಿ, ಗ್ರಾ.ಪಂ.ಮಾಜಿ ಅಧ್ಯಕ್ಷ ಶಿವಣ್ಣ,ಜಿ.ಪಂ ಮಾಜಿ ಅಧ್ಯಕ್ಷ ಸಿ.ಎ.ಮಹದೇವಶೆಟ್ಟಿ,ಮಂಗಲ ಶಿವಕುಮಾರ್, ಯ,ಕ್ಯಾತಶೆಟ್ಟಿ, ಮಹದೇವಶೆಟ್ಟಿ, ಚೌಡಶೆಟ್ಟಿ, ನಾರಾಯಣಸ್ವಾಮಿ, ಗೋಪಾಲಕೃಷ್ಣ, ದೂರೆರಾಜು, ಮಂಗಲ ಶಿವಣ್ಣ, ಬಾಗಳ್ಳಿ ರೇವಣ್ಣ, ಮಹೇಶ ಸೇರಿದಂತೆ ಗ್ರಾ.ಪಂ ಸದಸ್ಯರು, ಮುಖಂಡರು ಗ್ರಾಮಸ್ಥರು ಹಾಜರಿದ್ದರು.

# ಗ್ಯಾರಂಟಿ ಪರಿಣಾಮಕಾರಿ ಅನುಷ್ಠಾನಕ್ಕೆ ಸೂಚನೆ



**ಚಾಮರಾಜನಗರ:** ಕರ್ನಾಟಕ ತಮಿಳುನಾಡು ಮತ್ತು ಕೇರಳ ರಾಜ್ಯಗಳ ಗಡಿ ಚಾಮರಾಜನಗರ ಜಿಲ್ಲೆಯಲ್ಲಿ 5 ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಟಾನಕ್ಕೆ ನೂತನವಾಗಿ ನೇಮಕವಾಗಿರುವ ಸಮಿತಿಯ ಪದಾಧಿಕಾರಿಗಳು ಹಾಗೂ ಅಧಿಕಾರಿಗಳು ಮುಂದಾಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಸೂಚನೆ ನೀಡಿದರು.

ಚಾಮರಾಜನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಪಂ ಕೆಡಿಪಿ ಸಭಾಂಗಣದಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಸಭೆಯಲ್ಲಿ ಮಾತನಾಡಿದರು.

ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ 5 ಗ್ಯಾರಂಟಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ರಾಜ್ಯ, ಜಿಲ್ಲೆ ಹಾಗೂ ತಾಲೂಕು ಮಟ್ಟದಲ್ಲಿ ಸಮಿತಿಯನ್ನು ರಚನೆ ಮಾಡಲಾಗಿದೆ. ನೂತನ ಪದಾಧಿಕಾರಿಗಳು ಗ್ಯಾರಂಟಿ ಯೋಜನೆಗಳ ಕುರಿತು ಜನರಿಗೆ ತಲುಪಿಸಬೇಕು. ಸರ್ಕಾರದ ಪರ ಕೆಲಸ ಮಾಡಬೇಕು ಎಂದರು.

ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ಮಾತನಾಡಿ, ಗ್ಯಾರಂಟಿ ಯೋಜನೆಗಳನ್ನು ರಾಜಕೀಯ ಉದ್ದೇಶದಿಂದ ಜಾರಿಗೆ ತಂದಿಲ್ಲ. ಬದಲಿಗೆ ನಿರ್ಧಿಷ್ಟ ಆದಾಯವಿಲ್ಲದ ಕುಟುಂಬಗಳಿಗೆ ಸ್ವಾವಲಂಬಿ ಬದುಕು ನೀಡಲು ಯೋಜನೆ ಜಾರಿಗೊಳಿಸಲಾಗಿದೆ. ಸಮಿತಿಯ ಪದಾಧಿಕಾರಿಗಳು ಫಲಾನುಭವಿಗಳೊಂದಿಗೆ ಸಂಪರ್ಕ ಇಟ್ಟುಕೊಂಡು ಸಮಸ್ಯೆ ಬಗೆಹರಿಸಬೇಕು. ಸಮಸ್ಯೆ ಇದ್ದರೆ ಜಿಲ್ಲಾಧಿಕಾರಿ ಹಾಗೂ ಶಾಸಕರ ಗಮನಕ್ಕೆ ತಂದು ಬಗೆಹರಿಸಬೇಕು ಕೋಟಿ ಕ್ರಿಯಾ ಯೋಜನೆ ಕೂಡ ತಯಾರಿಸಲಾಗಿದೆ ಎಂದು ನಿಯಂತ್ರಣಾಧಿಕಾರಿ ಹೇಳಿದರು.

ಯುವನಿಧಿ ಯೋಜನೆಯಡಿ 1962 ಫಲಾನುಭವಿಗಳು ನೋಂದಣಿ ಮಾಡಿ ಕೊಂಡಿದ್ದು ಇದರಲ್ಲಿ 669 ಫಲಾನುಭವಿಗಳ ಖಾತೆಗೆ ಹಣ ಜಮಾ ಮಾಡಲಾಗಿದೆ. ಉಳಿದ ಫಲಾನುಭವಿಗಳ ಡಾಟಾ ಸಮಸ್ಯೆಯಿಂದಾಗಿ ಹಣ ಜಮಾ ಆಗಿಲ್ಲ ಎಂದು ಉದ್ಯೋಗ ಹಾಗೂ ಕೌಶಲ್ಯಾಭಿವೃದ್ಧಿ ಇಲಾಖೆ ಅಧಿಕಾರಿ ಮಾಹಿತಿ ನೀಡಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಮಾತನಾಡಿ, ಅನ್ನಭಾಗ್ಯ ಯೋಜನೆಯಲ್ಲಿ ಜಿಲ್ಲೆಯಲ್ಲಿ 2024ರ ಏಪ್ರಿಲ್ ತನಕ 2,39,345 ಪಡಿತ ಚೀಟದಾರದ 8,11,091 ಫಲಾನುಭವಿಗಳಿದ್ದಾರೆ. ಈ ಯೋಜನೆಯು ಜಿಲ್ಲೆಯಲ್ಲಿ ಶೇ.97.17 ಸಾಧನೆಯಾಗಿದ್ದು ರಾಜ್ಯದಲ್ಲಿಯೇ ಜಿಲ್ಲೆಯು 5ನೇ ಸ್ಥಾನದಲ್ಲಿದೆ. ಉಳಿದಂತೆ 7750 ಪಡಿತರ ಚೀಟಿಗಳ ಸುಮಾರು 20,029 ಫಲಾನುಭವಿಗಳು ಈ ಯೋಜನೆಯಿಂದ ಹೊರಗುಳಿದಿದ್ದಾರೆ ಎಂದರು. ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ ನಿತ್ಯ 3 ಲಕ್ಷ ಪ್ರಯಾಣಿಕರಂತೆ ತಿಂಗಳಿಗೆ 37-38 ಪ್ರಯಾಣಿಕರು ಬಸ್ನಲ್ಲಿ ಪ್ರಯಾಣ ಮಾಡುತ್ತಾರೆ ಎಂದರು. ಜಿಲ್ಲಾಧಿಕಾರಿ ಶಿಲ್ಪಾನಾಗ್ ಮಾತನಾಡಿ, ಈಗಾಗಲೇ ಜಿಲ್ಲೆಗೆ 44 ಹೊಸ ಬಸ್‌ಗಳನ್ನು ನೀಡಲಾಗಿದೆ ಎಂದರು. ಇನ್ನೂ 35 ಬಸ್‌ಗಳ ಅವಶ್ಯಕತೆ ಇದೆ ಎಂದು ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿ ಸಭೆಯಲ್ಲಿ ತಿಳಿಸಿದರು. ಅಲ್ಲದೇ ಹನೂರಿನಲ್ಲಿ ಕೆಎಸ್‌ಆರ್‌ಟಿಸಿ ಡಿಪೋ ನಿರ್ಮಾಣ ಮಾಡಲು 4.20 ಎಕರೆ ಜಾಗ ಸಿಕ್ಕಿದೆ ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಮಾಜಿ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಹಾಲಿ ಶಾಸಕ ಸಿ.ಪುಟ್ಟರಂಗಶೆಟ್ಟಿ,ಕೊಳ್ಳೇಗಾಲ ಶಾಸಕ ಎ.ಆರ್.ಕೃಷ್ಣಮೂರ್ತಿ, ಹನೂರು ಶಾಸಕ ಎಂ.ಆರ್. ಮಂಜುನಾಥ್, ಗುಂಡ್ಲುಪೇಟೆ ಶಾಸಕ ಎಚ್.ಎಂ.ಗಣೇಶ್ ಪ್ರಸಾದ್, ವಿಧಾನಪರಿಷತ್ ಸದಸ್ಯ ಡಾ.ತಿಮ್ಮಯ್ಯ, ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷ ಎಸ್.ಜಯಣ್ಣ, ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ, ಚುಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್ (ಮುನ್ನ), ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ವಿ.ಚಂದ್ರು, ಜಿಲ್ಲಾಧಿಕಾರಿ ಶಿಲ್ಪಾನಾಗ್, ಜಿಪಂ ಸಿಇಒ ಆನಂದ್ ಪ್ರಕಾಶ್ ಮೀನಾ, ಎಸ್ಪಿ ಪದ್ಮನಿ ಸಾಹು, ಡಿಸಿಎಫ್ ಸಂತೋಷ್ ಕುಮಾರ್ ಇದ್ದರು.

# ನೆಟ್ಟ ಗಿಡಗಳನ್ನು ಪೋಷಣೆ ಮಾಡಬೇಕು



**ಕೆ.ಆರ್.ಪೇಟೆ:** ಪರಿಸರ ಸಂರಕ್ಷಣೆ ಎಂದರೆ ಗಿಡ ನೆಟ್ಟು ಪರಿಸರ ದಿನಾಚರಣೆ ಮಾಡುವುದಷ್ಟೇ ಅಲ್ಲ. ಜೊತೆಗೆ ನೆಟ್ಟ ಗಿಡಗಳನ್ನು ಪೋಷಣೆ ಮಾಡಬೇಕು ಆಗಷ್ಟೇ ಅದಕ್ಕೊಂದು ಪರಿಪೂರ್ಣತೆ ಸಿಗುತ್ತದೆ. ಈ ರೀತಿಯ ಪರಿಸರ ಪ್ರಜ್ಞೆ ಪ್ರತಿಯೊಬ್ಬರಲ್ಲೂ ಬೆಳೆಯಬೇಕು. ಇದರಿಂದ ಮುಂದಿನ ಪೀಳಿಗೆಗೆ ಉತ್ತಮ ವಾತಾವರಣ ಹಾಗೂ ಪರಿಸರವನ್ನು ಕೊಡುಗೆಯಾಗಿ ನೀಡಬಹುದು ಎಂದು ಸಮಾಜ ಸೇವಕರು ಹಾಗೂ ರಾಜ್ಯ ಆರ್.ಟಿ.ಓ ಅಧಿಕಾರಿಗಳ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ್ ಅವರು ಸಲಹೆ ನೀಡಿದರು.

ಕೆ.ಆರ್.ಪೇಟೆ ತಾಲ್ಲೂಕಿನ ಶೀಳನೆರೆ ಹೋಬಳಿಯ ಸರ್ಕಾರಿ ಪದವಿ ಪೂರ್ವ ಕಾಲೇಜು ಹಾಗೂ ಪ್ರೌಢ ಶಾಲೆಯಲ್ಲಿ ಸಮಾಗಮ ವೆಲ್ ಫೇರ್ ಫೌಂಡೇಷನ್ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸಸಿನೆಡುವ ಮೂಲಕ ಪರಿಸರ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕ ರಾಜ್ಯ ಮಾರಾಟ ಮಹಾಮಂಡಳಿ ನಿರ್ದೇಶಕ ಎಲ್.ಎಲ್.ಮೋಹನ್ ಮಾತನಾಡಿ ಸಮಾಗಮ ವೆಲ್ಫೇರ್ ಫೌಂಡೇಶನ್ ಸಂಸ್ಥೆಯ ಕೆಲಸವನ್ನು ಶ್ಲಾಘಿಸಿದರು. ಹಿಂದೆ ಹಳ್ಳಿಗಳಲ್ಲಿ ತೊಪ್ಪೇ ಸಗಣಿ ತುಂಬುತಿದ್ದ ತಿಪ್ಪೆಗಳು, ಇಂದು ಪ್ಲಾಸ್ಟಿಕ್ ಹಾಕುವ ಗುಂಡಿಗಳಾಗಿವೆ ಹಾಗೆಯೇ ಪ್ರಸ್ತುತ ವರ್ಷದಲ್ಲಿ ಅತೀ ಹೆಚ್ಚು ಉಷ್ಣಾಂಶವನ್ನ ಕಾಣಬೇಕಾಯಿತು, ಇದೆ ರೀತಿ ಮುಂದುವರೆದರೆ ಬದುಕುವ ಆಸೆಯನ್ನೇ ಕಳೆದುಕೊಳ್ಳಬೇಕಾಗುತ್ತದೆ ಆದ್ದರಿಂದ ಆರೋಗ್ಯಕರ ಜೀವನ ನಡೆಸಲು ಪರಿಸರ ಸಂರಕ್ಷಿಶಿ ಎಂದು ನುಡಿದರು. ಶೀಳನೆರೆ ಗ್ರಾಮ ಪಂಚಾಯತಿ ಅಧ್ಯಕ್ಷ ಯುವರಾಜ್ ಮಾತನಾಡಿ ಗಿಡಗಳ ಸಂರಕ್ಷಣೆಗೆ ಪೂರಕವಾದ ವಾತಾವರಣನ್ನು ಪಂಚಾಯತಿ ವ್ಯಾಪ್ತಿಯಡಿಯಲ್ಲಿ ಕಲ್ಪಿಸಲು ಸಂಪೂರ್ಣವಾಗಿ ಪ್ರಯತ್ನಿಸುತ್ತೇನೆಂದು ತಿಳಿಸಿದರು.

ಸಮಾಗಮ ವೆಲ್‌ಫೇರ್ ಫೌಂಡೇಶನ್ ನಿರ್ದೇಶಕರಾದ ಎಸ್.ಪಾಂಡು ಮಾತನಾಡಿ, ಗ್ರಾಮೀಣ ಪ್ರದೇಶಗಳಲ್ಲಿಯೂ ಸಹ ಪರಿಸರ ಸಂರಕ್ಷಣೆ ಬಗ್ಗೆ ಅರಿವು ಮೂಡಿಸುವಂತ ಕಾಲಗಟ್ಟಕ್ಕೆ ಬಂದು ತಲುಪಿದ್ದೇವೆ ಹಳ್ಳಿಗಳ ಪರಿಸ್ಥಿಯೇ ಹೀಗಾದರೆ ಪಟ್ಟಣಗಳ ಸ್ಥಿತಿ ಗತಿ ಹೇಗೆ ಎಂದು ಬೇಸರ ವ್ಯಕ್ತಪಡಿಸಿದರು. ಕಾಲೇಜಿನ ಪ್ರಾಂಶುಪಾಲ ಕೆ.ಎಂ. ವಾಸು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಬಳಿಕ ಮಾತನಾಡಿ ಪರಿಸರ ಸಂರಕ್ಷಣೆ ಬಗ್ಗೆ ಜಾಗ್ರತಿ ಕಾರ್ಯಕ್ರಮಗಳು ಹೆಚ್ಚು ಹೆಚ್ಚು ಜರುಗಬೇಕು. ನಮ್ಮೆಲ್ಲರನ್ನ ರಕ್ಷಿಸುತ್ತಿರುವ ಪ್ರಕೃತಿಯನ್ನ ನಾವು ರಕ್ಷಿಸುವುದು ಪ್ರತಿಯೊಬ್ಬರ ಕರ್ತವ್ಯ ವಾಗಿದೆ ಎಂದು ಮಾತನಾಡಿದರು. ಇದೆ ಸಂದರ್ಭದಲ್ಲಿ ಸಮಾಗಮ ವೆಲ್‌ಫೇರ್ ಫೌಂಡೇಶನ್ ವತಿಯಿಂದ ಶಾಲಾ ಕಾಲೇಜು ಮಕ್ಕಳಿಗೆ ಪ್ರಬಂಧ ಹಾಗೂ ಭಾಷಣ ಏರ್ಪಡಿಸಿ ವಿಜೇತರಿಗೆ ಪುಸ್ತಕ ಹಾಗೂ ಟ್ರೋಫಿಗಳನ್ನ ನೀಡಿ ಪ್ರೋತ್ಸಾಯಿಸಲಾಯಿತು.

# ಶಾಲೆಯಲ್ಲಿ ಸಂಸತ್ತು ರಚನೆ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಮಾರ್ಟಳ್ಳಿ ಸೆಂಟ್ ಮೇರಿಸ್ ಆಂಗ್ಲ ಮಾಧ್ಯಮ ಶಾಲೆ ಮಾರ್ಟಳ್ಳಿಯಲ್ಲಿ ಶಾಲಾ ಸಂಸತ್ ರಚನೆಗೆ ಮತದಾನ ಏರ್ಪಡಿಸಲಾಯಿತು. ಸೆಂಟ್ ಮೇರಿಸ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಪೂರ್ವ ತಯಾರಿಯಂತೆ ಶಾಲಾ ವಿದ್ಯಾರ್ಥಿಗಳಿಗೆ ಮತದಾನಕ್ಕೂ ಒಂದು ವಾರ ಮುಂಚಿತವಾಗಿ ಅಧಿಸೂಚನೆ ಹೊರಡಿಸಿ ಮರುದಿನ ನಾಮಪತ್ರ ಸಲ್ಲಿಸಲು ಹಾಗೂ ಹಿಂಪಡೆಯಲು ಅವಕಾಶ ಕಲ್ಪಿಸಲಾಯಿತು. ಶಾಲೆಯ 13 ವಿದ್ಯಾರ್ಥಿಗಳು ಮುಖ್ಯೋಪಾಧ್ಯಾಯರಿಗೆ ನಾಮಪತ್ರ ಸಲ್ಲಿಸುವ ಮೂಲಕ ಸ್ಪರ್ಧಿಸಿದರು. ಯಾರೊಬ್ಬರೂ ಚುನಾವಣಾ ಕಣದಿಂದ ನಾಮಪತ್ರ ಹಿಂಪಡೆಯಲಿಲ್ಲ ಸ್ಪರ್ಧಾರ್ಥಿಗಳಿಗೆ ಚಿಹ್ನೆ ಹಾಗೂ ಕ್ರಮ ಸಂಖ್ಯೆಯನ್ನು ಪ್ರಕಟಿಸಿ ಮಾದರಿ ಮತಪತ್ರದೊಂದಿಗೆ ಪ್ರಚಾರಕ್ಕೆ ಅವಕಾಶ ಕಲ್ಪಿಸಲಾಯಿತು. ನಿಗದಿಯಂತೆ ಮತಗಟ್ಟೆಯ ಅಧಿಕಾರಿಗಳ ಸಮ್ಮುಖದಲ್ಲಿ ಮತದಾನ ನಡೆಯಿತು ಒಟ್ಟು 231 ಮತದಾರರ ಪೈಕಿ 120 ವಿದ್ಯಾರ್ಥಿಗಳು 94 ವಿದ್ಯಾರ್ಥಿನಿಯರು ಮತ ಚಲಾಯಿಸುವ ಮೂಲಕ ಶೇ. 92.64 ರಷ್ಟು ಮತದಾನ ನಡೆಯಿತು. ಗಂಡು ಮಕ್ಕಳ ಪೈಕಿ ಪ್ರಿಸ್ಟನ್ 59 ಮತಗಳನ್ನು ಹೆಣ್ಣು ಮಕ್ಕಳ ಪೈಕಿ ಐನ್‌ಸ್ಲಿ 75 ಮತಗಳಿಸುವುದರೊಂದಿಗೆ ಆಯ್ಕೆಯಾಗಿರುತ್ತಾರೆ.



# ವಾಲ್ಮೀಕಿ ನಿಗಮದ ಅವ್ಯವಹಾರ ಜಾಗೃತಿಗೆ ಅಭಿಯಾನ



**ಮಂಡ್ಯ:** ವಾಲ್ಮೀಕಿ ನಿಗಮದಲ್ಲಿ ನಡೆದಿರುವ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಪರಿಶಿಷ್ಟ ಜಾತಿ, ಪಂಗಡದಲ್ಲಿ ಅರಿವು ಮೂಡಿಸಲು ಬಿಜೆಪಿ ವತಿಯಿಂದ ಮನೆ ಮನೆ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗಿತ್ತು.

ಬೆಂಗಳೂರಿನ ವಸಂತನಗರ ಶಾಖೆಯ ಯೂನಿಯನ್ ಬ್ಯಾಂಕ್‌ನಲ್ಲಿ ಖಾತೆ ಇದ್ದರೂ ಸರ್ಕಾರದ ಅನುಮತಿ ಇಲ್ಲದೆ ಎಂ.ಜಿ. ರಸ್ತೆಯ ಬ್ಯಾಂಕ್ ಶಾಖೆಯಲ್ಲಿ ಖಾತೆ ತೆರೆಯುವ ಅವಶ್ಯಕತೆಯಾದರೂ ಏನಿತ್ತು, ಹಗರಣಕ್ಕೆ ಯಾರು ಹೊಣೆ, ಸರ್ಕಾರದ ಹಸ್ತಕ್ಷೇಪವಿಲ್ಲದೆ ಇಷ್ಟೊಂದು ದೊಡ್ಡ ಆರ್ಥಿಕ ವ್ಯವಹಾರ ನಡೆಸಲು ಸಾಧ್ಯವೇ ಎಂದು ಜನರಲ್ಲಿ ಜಾಗೃತಿ ಮೂಡಿಸಿದರು.

ಎಂ.ಜಿ. ರಸ್ತೆಯ ಯೂನಿಯನ್ ಬ್ಯಾಂಕ್‌ನಲ್ಲಿ ಮಾ. 21, 27ರಂದು ನಿಗಮದ ಪ್ರಮುಖ ಖಾತೆಯಿಂದ 87 ಕೋಟಿ ರೂ. ಹಣ ವರ್ಗಾವಣೆ, ಖಾತೆ ತೆರೆದು ಒಂದು ವಾರದಲ್ಲಿ ಆ ಖಾತೆಗೆ ಇಷ್ಟೊಂದು ಹಣ ವರ್ಗಾವಣೆ ಮಾಡುವುದಕ್ಕೆ ಅನುಮತಿ ಕೊಟ್ಟವರು ಯಾರು ಎಂದು ಪ್ರಶ್ನಿಸಿದ್ದಾರೆ.

ಬೆಂಗಳೂರಿನಲ್ಲೇ ಮುಖ್ಯ ಕಚೇರಿ ಇದ್ದರೂ, ಹೈದರಾಬಾದ್‌ನ ಬಂಜಾರ ಹಿಲ್ಸ್‌ನಲ್ಲಿ ಸಹಕಾರಿ ಬ್ಯಾಂಕ್‌ನಲ್ಲಿ ಖಾತೆ ತೆರೆದಿದ್ದಾರೂ ಏಕೆ ಎಂದು ಪ್ರಶ್ನಿಸಿರುವ ಅವರು, ವರ್ಗಾವಣೆಯಾದ ಹಣವನ್ನು ಹಿಂದಕ್ಕೆ ಪಡೆಯಲು ಕಸರತ್ತು ನಡೆಸುತ್ತಿರುವ ಸರ್ಕಾರದ ನಡೆಯಿಂದ ಇಷ್ಟೊಂದು ಅಕ್ರಮ ವರ್ಗಾವಣೆ ಎಂಬುದಕ್ಕೆ ಸರ್ಕಾರವೇ ಪುಷ್ಟಿ ನೀಡಿದಂತಾಗುವುದಿಲ್ಲವೇ, ಇಷ್ಟೊಂದು ದೊಡ್ಡ ಮೊತ್ತದ ಹಣದ ಅವ್ಯವಹಾರದ ದಂದೆಯ ಹಿಂದೆ ಪ್ರಭಾವಿ ವ್ಯಕ್ತಿಗಳ ಕೈವಾಡ ಇದೆ ಎಂಬ ವರದಿಗೆ ಕಾಂಗ್ರೆಸ್ ಚಕಾರವೆತ್ತುತ್ತಿಲ್ಲ ಏಕೆ ಎಂದು ಪ್ರಶ್ನಿಸಿದ್ದಾರೆ.

ದೊಡ್ಡ ಮೊತ್ತದ ಹಣ ವರ್ಗಾವಣೆಯಾಗಬೇಕಾದರೆ ಇಬ್ಬರು ಹಿರಿಯ ಅಧಿಕಾರಿಗಳು ಕಡ್ಡಾಯವಾಗಿ ಸಹಿ ಮಾಡಬೇಕೆಂಬ ನಿಯಮವಿದ್ದರೂ, ಸಂಬಂಧಿತ ಇಲಾಖೆಯ ಹೊಣೆ ಹೊತ್ತ ಸಚಿವರು ಮೌಖಿಕ ಆದೇಶ ನೀಡಿದ್ದಾರೆಂಬ ಕಾರಣಕ್ಕೆ ಕಚೇರಿ ಅಧೀಕ್ಷಕ ಚಂದ್ರಶೇಖರ್ ಡೆತ್‌ನೋಟ್ ಬರೆದು ಆತ್ಮಹತ್ಯೆ ಮಾಡಿಕೊಳ್ಳುವ ಮೂಲಕ ಇಡೀ ಪ್ರಕರಣ ಹೊರಬಂದಿದೆ. ಇದರಲ್ಲಿ ಪ್ರಭಾವಿ ವ್ಯಕ್ತಿಗಳ ಕೈವಾಡ ಇದೆ ಎಂದು ದೂರಿದರು.

ಬಿಜೆಪಿ ವಕ್ತಾರ ಸಿ.ಟಿ. ಮಂಜುನಾಥ್, ಎಸ್ಸಿ, ಎಸ್ಟಿ ಮೋರ್ಚಾ ಮಾಜಿ ಜಿಲ್ಲಾಧ್ಯಕ್ಷ ನಿತ್ಯಾನಂದ, ಮುಖಂಡರಾದ ಮಹಂತಪ್ಪ, ಯೋಗೇಶ, ನಂದೀಶ, ವೈರಮುಡಿ, ರಂಗಣ್ಣ ಸೇರಿ ಹಲವರು ಭಾಗವಹಿಸಿದ್ದರು.

## ಬಾಲನ್ಯಾಯ ಕಾಯ್ದೆ ಅನುಷ್ಠಾನ ಸಭೆಯಲ್ಲಿ ನಾಗರಾಜ್ ಸಲಹೆ

# ಬಾಲ್ಯ ವಿವಾಹ ತಡೆಗೆ ಜಾಗೃತಿ ಮೂಡಿಸಿ

**ಮಂಡ್ಯ:** ಬಾಲ್ಯ ವಿವಾಹದಂತಹ ಸಾಮಾಜಿಕ ಪಿಡುಗನ್ನು ತೊಡೆದುಹಾಕಲು ಜಿಲ್ಲೆಯಲ್ಲಿ ಹೆಚ್ಚು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಿ ಎಂದು ಅಪರ ಜಿಲ್ಲಾಧಿಕಾರಿ ಡಾ. ಎಚ್. ಎಲ್. ನಾಗರಾಜ್ ಹೇಳಿದರು.



ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ನಡೆದ ಬಾಲ್ಯವಿವಾಹ ನಿಷೇಧ ಕಾಯ್ದೆ ಮತ್ತು ಬಾಲನ್ಯಾಯ ಕಾಯ್ದೆ ಅನುಷ್ಠಾನ ಕುರಿತು ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನ ಸಭೆ ನಡೆಸಿ ಮಾತನಾಡಿದರು.

ಬಾಲ್ಯ ವಿವಾಹಗಳು ಜಿಲ್ಲೆಯಲ್ಲಿ ಹೆಚ್ಚು ನಡೆಯುವ ಗ್ರಾಮಗಳನ್ನು ಪಟ್ಟಿ ಮಾಡಿ ಅಂತಹ ಗ್ರಾಮಗಳ ಬಗ್ಗೆ ಹೆಚ್ಚು ನಿಗಾ ವಹಿಸುವುದರ ಜೊತೆಗೆ, ಜಾಗೃತಿ ಶಿಬಿರಗಳನ್ನು ಆಯೋಜಿಸಿ ಎಂದರು. ಬಾಲ್ಯ ವಿವಾಹದ ದುಷ್ಪರಿಣಾಮಗಳ ಬಗ್ಗೆ ಮಕ್ಕಳಲ್ಲಿ ಹೆಚ್ಚು ಅರಿವು ಮೂಡಿಸಬೇಕು. ಶಾಲೆಗಳಲ್ಲಿ ಪ್ರಬಂಧ, ಚರ್ಚಾ ಸ್ಪರ್ಧೆ ಏರ್ಪಡಿಸಿ ಇದರಲ್ಲಿ ಪ್ರಥಮ ಮತ್ತು ದ್ವಿತೀಯ ಬಹುಮಾನಗಳನ್ನು ನೀಡಿ ಇದರಿಂದ ಮಕ್ಕಳು ಮಾಹಿತಿಯನ್ನು ತಿಳಿದುಕೊಂಡಂತೆ ಆಗುತ್ತದೆ ಅದರ ಅರಿವು ಕೂಡ ಮೂಡುತ್ತದೆ ಎಂದು ಹೇಳಿದರು. ಭಾರತ ದೇಶ ಸಾಕ್ಷರತೆ ವಿಷಯದಲ್ಲಿ ಮುಂದೆ ಸಾಗುತ್ತಿದ್ದರೂ ಬಾಲ್ಯ ವಿವಾಹ, ಬಾಲಾಪರಾಧ, ಬಾಲ ಕಾರ್ಮಿಕ ಪದ್ಧತಿ, ಹೆಣ್ಣು ಭ್ರೂಣ ಹತ್ಯೆಯಂತಹ ಪ್ರಕರಣಗಳು ಕಂಡು ಬರುತ್ತಿರುವುದು ಸೋಚನೀಯ ವಿಷಯವಾಗಿದೆ. ಇಂತಹ ಅನಿಷ್ಟ ಪದ್ಧತಿಗಳನ್ನು ದೂರಮಾಡಲು ಸಾರ್ವಜನಿಕರು ಕೈಜೋಡಿಸಿ ಎಂದು ಹೇಳಿದರು.

ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ ಎಂದು ಸಾರ್ವಜನಿಕರಿಗೆ ಮನದಟ್ಟಾಗಬೇಕು. ಆಗ ಮಾತ್ರ ಬಾಲ್ಯ ವಿವಾಹ ಪದ್ಧತಿಯನ್ನು ಸಮಾಜದಿಂದ ಸಂಪೂರ್ಣವಾಗಿ ತೊಡೆದುಹಾಕಲು ಸಾಧ್ಯ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ಆನಂದ್ ತಿಳಿಸಿದರು.

ಬಾಲ್ಯ ವಿವಾಹದ ಕಂಡು ಬಂದರೆ ಸಾರ್ವಜನಿಕರು ಸಂಬಂಧ ಪಟ್ಟ ಅಧಿಕಾರಿಗಳು ಅಥವಾ ಪೊಲೀಸ್ ಅವರಿಗೆ ದೂರು ಸಲ್ಲಿಸಿ. ಬಾಲ್ಯ ವಿವಾಹ ತಡೆಗಟ್ಟಲು ಪ್ರತಿಯೊಬ್ಬರು ಕೈ ಜೋಡಿಸಿ ಎಂದು ಹೇಳಿದರು. ನಮ್ಮ ರಾಜ್ಯದಲ್ಲಿ ಬಾಲ್ಯ ವಿವಾಹ ನಿಷೇಧ, ಬಾಲನ್ಯಾಯ ಕಾಯ್ದೆ, ಬಾಲ ಕಾರ್ಮಿಕ ನಿಷೇಧ ಪದ್ದತಿ ಇಂತಹ ಹಲವಾರು ಅನಿಷ್ಟ ಪದ್ದತಿಗಳನ್ನು ಹೋಗಲಾಡಿಸಲು ಸಂಬಂಧ ಪಟ್ಟ ಅಧಿಕಾರಿಗಳು ಪ್ರಾಮಾಣಿಕವಾಗಿ ಕೆಲಸ ಮಾಡಬೇಕು ಎಂದು ಕರ್ನಾಟಕ ರಾಜ್ಯದ ಮಕ್ಕಳ ಹಕ್ಕುಗಳ ಶಿಕ್ಷಣ ಆಯೋಗದ ಸದಸ್ಯ ವೆಂಕಟೇಶ್ ತಿಳಿಸಿದರು.

# ಗ್ರಂಥಾಲಯ ವಿಜ್ಞಾನ ತರಬೇತಿಗೆ ಅರ್ಜಿ ಆಹ್ವಾನ

**ಚಾಮರಾಜನಗರ:** ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಅಡಿಯಲ್ಲಿ ರಾಜ್ಯದ ನಾಲ್ಕು ಕಂದಾಯ ವಿಭಾಗಗಳಾದ ಬೆಂಗಳೂರು, ಮೈಸೂರು ವಿಭಾಗದ ಮಂಗಳೂರು, ಬೆಳಗಾವಿ ವಿಭಾಗದ ಧಾರವಾಡ ಮತ್ತು ಕಲಬುರಗಿ ವಿಭಾಗಗಳಲ್ಲಿ ಆರು ತಿಂಗಳ ಅವಧಿಯ ಗ್ರಂಥಾಲಯ ವಿಜ್ಞಾನ ತರಬೇತಿ ನೀಡಲಿದ್ದು ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಪಿ.ಯು.ಸಿ ಪರೀಕ್ಷೆಯಲ್ಲಿ ಕನಿಷ್ಠ ಶೇ. 40ರಷ್ಟು ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಾಗಿದ್ದಲ್ಲಿ ಶೇ. 35ರಷ್ಟು ಅಂಕ ಪಡೆದಿರಬೇಕು. ಹಾಲಿ ಕಾರ್ಯನಿರ್ವಹಿಸುತ್ತಿರುವ ಇಲಾಖೆಯ ಡಿ ದರ್ಜೆಯ ಗ್ರಂಥಾಲಯ ಸಹವರ್ತಿಗಳು ಸಂಬಂಧಪಟ್ಟ ಉಪನಿರ್ದೇಶಕರು, ಮುಖ್ಯ ಗ್ರಂಥಾಲಯಾಧಿಕಾರಿಗಳ ಮುಖಾಂತರ, ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರು ಸಂಬಂಧಪಟ್ಟ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಮುಖಾಂತರ ಹಾಗೂ ಇತರೆ ಸಂಸ್ಥೆಯಿಂದ ಬರುವ ಅಭ್ಯರ್ಥಿಗಳು ತಮ್ಮ ಸಂಸ್ಥೆಯ ಮುಖ್ಯಸ್ಥರ ಮುಖಾಂತರ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.ಸಂ 0836-2442465 ಸಂಪರ್ಕಿಸಿ.

# ಕ್ರೀಡಾ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

**ಮಂಡ್ಯ:** ರಾಜ್ಯ ಸರ್ಕಾರದ ಕ್ರೀಡಾ ವಿದ್ಯಾರ್ಥಿ ವೇತನ ಯೋಜನೆಯಡಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಪ್ರತಿಭಾವಂತ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸುವ ಸಲುವಾಗಿ ಮಾಧ್ಯಮಿಕ/ಪ್ರೌಢಶಾಲಾ ವಿದ್ಯಾರ್ಥಿ ಕ್ರೀಡಾಪಟುಗಳಿಗೆ ವಾರ್ಷಿಕ ರೂ 10,000 ಗಳಂತೆ ಪ್ರೋತ್ಸಾಹಿತ ಕ್ರೀಡಾ ವಿದ್ಯಾರ್ಥಿ ವೇತನ ನೀಡಲು ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಕ್ರೀಡಾವಿದ್ಯಾರ್ಥಿಗಳು ಜೂನ್ 30 ರೊಳಗೆ ಅರ್ಜಿಯನ್ನು https://sevasindhuservice.karnataka.gov.in ವೆಬ್ ಸೈಟ್ ಮೂಲಕ ಸಲ್ಲಿಸತಕ್ಕದ್ದು. ಅರ್ಜಿದಾರರು 2023-24 ನೇ ಸಾಲಿನ ವಿದ್ಯಾರ್ಥಿಯಾಗಿದ್ದು, (6 ರಿಂದ 10 ನೇ ತರಗತಿ) ಮಾಧ್ಯಮಿಕ ಅಥವಾ ಪ್ರೌಢಶಾಲೆಯಲ್ಲಿ ಓದುತ್ತಿರಬೇಕು. ರಾಜ್ಯ ಕ್ರೀಡಾ ಪ್ರಾಧಿಕಾರದಲ್ಲಿ ನೊಂದಾಯಿತವಾದ ಕ್ರೀಡಾ ಸಂಸ್ಥೆಗಳು 1 ಏಪ್ರಿಲ್ 2023 ರಿಂದ 31 ಮಾರ್ಚ್ 2024 ರವರೆಗೆ ನಡೆಸಿದ ರಾಜ್ಯ ಮಟ್ಟದ ಕ್ರೀಡಾ ಸ್ಪರ್ದೆಗಳಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದಿರಬೇಕು ಅಥವಾ ಭಾರತ ಸರ್ಕಾರದಿಂದ ಮಾನ್ಯತೆ ಪಡೆದ ಅಧಿಕೃತ ಕ್ರೀಡಾ ಸಂಸ್ಥೆಗಳು ಆಯೋಜಿಸುವ ರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸರಬೇಕು. ರಾಷ್ಟ್ರೀಯ ಖೇಲೋ ಇಂಡಿಯಾ ಕ್ರೀಡಾಕೂಟದಲ್ಲಿ ರಾಜ್ಯ ತಂಡವನ್ನು ಪ್ರತಿನಿಧಿಸಿ ಭಾಗವಹಿಸಿದ ಕ್ರೀಡಾಪಟುಗಳು ಹಾಗೂ ರಾಷ್ಟ್ರೀಯ ಶಾಲಾ ಕ್ರೀಡಾಕೂಟಗಳಲ್ಲಿ ರಾಜ್ಯ ತಂಡವನ್ನು ಪ್ರತಿನಿಧಿಸಿ ಭಾಗವಹಿಸಿದಂತಹ ಕ್ರೀಡಾಪಟುಗಳು ಕೂಡ ಅರ್ಜಿ ಸಲ್ಲಿಸಬಹುದಾಗಿದೆ. ಒಬ್ಬ ಕ್ರೀಡಾಪಟು ಒಂದಕ್ಕಿಂತ ಹೆಚ್ಚು ಕ್ರೀಡೆಗಳಲ್ಲಿ ಭಾಗವಹಿಸಿದ್ದರೂ ಸಹ ವಾರ್ಷಿಕ ಒಂದೇ ವಿದ್ಯಾರ್ಥಿ ವೇತನ ಮೊತ್ತಕ್ಕೆ ಮಾತ್ರ ಅರ್ಹರಿರುತ್ತಾರೆ. ವಿದ್ಯಾರ್ಥಿ ವೇತನದ ಮೊತ್ತ ವಾರ್ಷಿಕ ರೂ. 10,000/- =ಮಂಜೂರು ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮಂಡ್ಯ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರನ್ನು ಸಂಪರ್ಕಿಸಬಹುದು.

# ಯುವನಿಧಿ ಅಭ್ಯರ್ಥಿಗಳಿಗೆ ಮಾಹಿತಿ

**ಮಂಡ್ಯ:** ಕರ್ನಾಟಕ ರಾಜ್ಯದ ಮಹತ್ವಾಕಾಂಕ್ಷಿ ಯೋಜನೆಯಾದ ಯುವನಿಧಿ ಯೋಜನೆಯಲ್ಲಿ ಪದವಿ, ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾಗಳನ್ನು 2022-23ನೇ ಶೈಕ್ಷಣಿಕ ವರ್ಷದಲ್ಲಿ ವ್ಯಾಸಂಗ ಮಾಡಿ 2023 ರಲ್ಲಿ ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಈಗಾಗಲೇ ಸೇವಾ ಸಿಂಧು ಪೋರ್ಟಲ್‌ನಲ್ಲಿ ನೋಂದಣಿಯಾಗಿದ್ದು ಹಾಗೂ ಫಲಿತಾಂಶದ ನಂತರ ನಿರುದ್ಯೋಗಿಗಳಾಗಿ 180 ದಿವಸಗಳು ಪೂರೈಸಿದ ಅಭ್ಯರ್ಥಿಗಳಿಗೆ ಜನವರಿ-2024 ರಿಂದ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ. ಅಭ್ಯರ್ಥಿಗಳು ಈ ಪ್ರಯೋಜನವನ್ನು ಪ್ರತಿ ತಿಂಗಳು ಪಡೆಯಬೇಕಿದ್ದರೆ, ಪ್ರತಿ ಮಾಹೆಯಲ್ಲಿ ತಾನು ನಿರುದ್ಯೋಗಿಯೆಂದು, ವ್ಯಾಸಂಗ ಮುಂದುವರೆಸುತ್ತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗಿಯಲ್ಲವೆಂದು ಪ್ರತಿ ತಿಂಗಳ 25ನೇ ತಾರೀಖಿನೊಳಗಾಗಿ ಸ್ವಯಂ ಘೋಷಣೆಯನ್ನು ಮಾಡಬೇಕಾಗಿರುತ್ತದೆ. ಯೋಜನೆಯ ಪ್ರಯೋಜನವನ್ನು ಪಡೆಯುತ್ತಿರುವ ಅರ್ಹ ಅಭ್ಯರ್ಥಿಗಳು ಪ್ರತಿ ತಿಂಗಳು 25ನೇ ತಾರೀಖಿನೊಳಗಾಗಿ ಸ್ವಯಂ ಘೋಷಣೆ ಮಾಡದಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆಯನ್ನು ಮಾಡಲಾಗುವುದಿಲ್ಲ. ಹಾಗೂ ಅಭ್ಯರ್ಥಿಗಳು ಕಡ್ಡಾಯವಾಗಿ ಆಧಾರ್ ಸೇಡೆಡ್ ಬ್ಯಾಂಕ್ ಖಾತೆಯನ್ನು ಹೊಂದಿರತಕ್ಕದ್ದು. ಅಭ್ಯರ್ಥಿಗಳು ಸ್ವಯಂ ಘೋಷಣೆ ಮಾಡಿಕೊಳ್ಳಲು https://sevasindhugs.karnataka.gov.in ವೆಬ್ ಸೈಟ್ ನ್ನು ವೀಕ್ಷಿಸುವುದು. ಉಳಿದಂತೆ ಸೇವಾ ಸಿಂಧು ಪೋರ್ಟಲ್‌ನಲ್ಲಿ ತಮ್ಮ ಅರ್ಜಿಯು ಯಾವ ಹಂತದಲ್ಲಿದೆ ಎಂಬುದನ್ನು ಪರಿಶೀಲಿಸಿಕೊಂಡು, ಒಂದು ವೇಳೆ ಅರ್ಜಿಯು ಅಪ್ರೂವ್ ಆಗದ ಸಂದರ್ಭದಲ್ಲಿ ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗೆ ಭೇಟಿ ನೀಡಿ ತಮ್ಮ ಎಲ್ಲಾ ಮೂಲ ಅಂಕಪಟ್ಟಿ ಹಾಗೂ ಇತರೆ ಪ್ರಮಾಣ ಪತ್ರಗಳ ಜೆರಾಕ್ಸ್ ಪ್ರತಿಗಳನ್ನು ಸಲ್ಲಿಸಿ ಅಪ್ರೂವ್ ಮಾಡಿಸಿಕೊಳ್ಳತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08232-295124 ನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಉದ್ಯೋಗಾಧಿಕಾರಿ ತಿಳಿಸಿರುತ್ತಾರೆ.

# ಪ್ರವಾಸಿ ಮಾರ್ಗದರ್ಶನ ತರಬೇತಿಗೆ ಅರ್ಜಿ

**ಮಂಡ್ಯ:** ಕರ್ನಾಟಕ ರಾಜ್ಯದ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸುವ ಹಾಗೂ ಪ್ರಚಾರಪಡಿಸುವ ಉದ್ದೇಶದಿಂದ ರಾಜ್ಯದ ಎಲ್ಲ ಜಿಲ್ಲೆ, ತಾಲ್ಲೂಕುಗಳಲ್ಲಿ ಇರುವ ಪ್ರವಾಸಿ ತಾಣಗಳ ಐತಿಹಾಸಿಕ, ಧಾರ್ಮಿಕ, ಪಾರಂಪರಿಕ, ಸಾಂಸ್ಕೃತಿಕ ಹಾಗೂ ಜಾನಪದ ಕಲಾವೈವಿಧ್ಯತೆಗಳ ಬಗ್ಗೆ ಸಂಪೂರ್ಣ ಮಾಹಿತಿಯನ್ನು ದೇಶ/ವಿದೇಶಿ ಪ್ರವಾಸಿಗರಿಗೆ ಪರಿಚಯಿಸಲು ಹಾಗೂ ಒಂದು ರಾಜ್ಯ-ಹಲವು ಜಗತ್ತುಗಳು ಎಂಬ ಪ್ರವಾಸೋದ್ಯಮ ಧ್ಯೇಯವನ್ನು ಉತ್ತೇಜಿಸಲು ನಾಡಿನ ಭವ್ಯ-ಸಂಸ್ಕೃತಿ ಹಾಗೂ ವೈವಿಧ್ಯತೆಗಳ ಕಲೆ-ವಾಸ್ತು ಶಿಲ್ಪಗಳನ್ನು ಪ್ರಚಾರಪಡಿಸುವ ಮೂಲಕ ಪ್ರವಾಸಿಗರನ್ನು ಕರ್ನಾಟಕದ ಪ್ರವಾಸಿ ಸ್ಥಳಗಳಿಗೆ ಸೆಳೆಯಲು ಸ್ಥಳೀಯ ಪ್ರವಾಸಿ ಸಂಪನ್ಮೂಲಗಳ ಬಗ್ಗೆ ಜ್ಞಾನ ಮತ್ತು ಅನುಭವ ಇರುವ ಪ್ರವಾಸಿ ಮಾರ್ಗದರ್ಶಿಗಳು ಅಗತ್ಯವಾಗಿರುವುದರಿಂದ, ಪ್ರವಾಸಿ ಮಾರ್ಗದರ್ಶಿ ತರಬೇತಿ ನೀಡಲು ಕೆ.ಟಿ.ಟಿ.ಎಫ್. ಕಾಯ್ದೆ 2016 ರನ್ವಯ ಜಿಲ್ಲಾ ಮಟ್ಟದಲ್ಲಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸ್ವೀಕರಿಸಲು ಕೊನೆಯ ದಿನ ಜುಲೈ 31 ಆಗಿರುತ್ತದೆ. ಅರ್ಜಿಯನ್ನು ಮಂಡ್ಯ ಪಿ.ಇ.ಎಸ್. ಇಂಜಿನಿಯರಿಂಗ್ ಕಾಲೇಜು ರಸ್ತೆ, ಪ್ರವಾಸೋದ್ಯಮ ಇಲಾಖೆ, ಉಪನಿರ್ದೇಶಕರ ಕಛೇರಿಯಲ್ಲಿ ಜೂನ್ 25 ರಿಂದ ಜುಲೈ 24 ರವರೆಗೆ ವಿತರಿಸಲಾಗುವುದು ಭರ್ತಿ ಮಾಡಿದ ಅರ್ಜಿಯನ್ನು ಎಲ್ಲಾ ಅಗತ್ಯ ಪ್ರಮಾಣ ಪತ್ರಗಳನ್ನು ಸ್ವಯಂ ಧೃಡೀಕರಣದೊಂದಿಗೆ ದ್ವಿ-ಪ್ರತಿಗಳಲ್ಲಿ ಜೂನ್ 25 ರಿಂದ ಜುಲೈ 31 ರೊಳಗೆ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿದೂ. ಸಂ: 08232-238377 ಸಂಪರ್ಕಿಸಬಹುದು.

# ಬಸವ ಜಯಂತಿ ಆಚರಣೆ

**ಗುಂಡ್ಲುಪೇಟೆ:** ತಾಲೂಕಿನ ವಿವಿಧ ವೀರಶೈವ ಲಿಂಗಾಯತ ಸಂಘಟನೆಗಳ ವತಿಯಿಂದ ವಿಜೃಂಭಣೆಯ ಬಸವ ಜಯಂತಿ ಆಚರಿಸಲಾಯಿತು. ಬಸವ ಜಯಂತಿ ಪ್ರಯುಕ್ತ ಪಟ್ಟಣದಲ್ಲಿ ಎತ್ತ ನೊಡಿದರು ಬಸವನ ಭಕ್ತರು, ಜಾನಪದ ಕಲಾ ತಂಡಗಳು, ಬಸವಣ್ಣ ನನ್ನ ಹಾಡಿ ಹೊಗಳುವ ಭಜನಾ ತಂಡಗಳು ಜೈ ಗುರು ಬಸವ ಎಂಬ ಉದ್ಘೋಷಗಳು ಕೇಳಿಬರುತ್ತಿದ್ದವು. ಇಲ್ಲಿನ ಜೆ.ಎಸ್.ಎಸ್ ಕಾಲೇಜು ಮುಂಬಾಗದಲ್ಲಿ ಬೆಳಿಗ್ಗೆ ತಾಲ್ಲೂಕಿನ ಎಲ್ಲಾ ಮಠಾದೀಶರು ಬಸವಣ್ಣನ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿದರು, ಶಾಸಕ ಗಣೇಶ್ ಪ್ರಸಾದ್ ಹಾಗೂ ಮಾಜಿ ಶಾಸಕರಾದ ನಿರಂಜನ್ ಕುಮಾರ್ ಮೆರವಣಿಗೆಗೆ ಚಾಲನೆ ನೀಡಿದರು. ಮೆರವಣಿಗೆಯಲ್ಲಿ ವೀರಗಾಸೆ, ಡೊಳ್ಳು ಕುಣಿತ, ಭಜನಾ ತಂಡಗಳು, ಬೀಸು ಕಂಸಾಳೆ, ನಂದಿ ಧ್ವಜ, ಭಂಡೆ ಮದ್ದಳೆಗಳ ಜೊತೆಗೆ ಡಿಜೆ ಹಾಗೂ ಅಲಂಕರಿಸಿದ ಎತ್ತುಗಳು, ಸೂರ್ಯ ಬೆಳ್ಳಿ ರಥದಲ್ಲಿ ಬಸವಣ್ಣನವರ ಪ್ರತಿಮೆ ಇಟ್ಟಿದ್ದು ಮೆರವಣಿಗೆಯಲ್ಲಿ ಆಕರ್ಷಣೀಯವಾಗಿ ಕಾಣುತ್ತಿದ್ದವು.



# ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

**ಗುಂಡ್ಲುಪೇಟೆ:** ಪಟ್ಟಣದ ಅಂಬೇಡ್ಕರ್ ಭವನದಲ್ಲಿ ತಾಲೂಕು ಆಡಳಿತ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಿಂದ ಐದು ಗ್ಯಾರಂಟಿ ಯೋಜನೆಯ ಫಲಾನುಭವಿಗಳ ಪ್ರಗತಿ ಪರಿಶೀಲನಾ ಸಭೆ, ಸ್ತ್ರೀ ಶಕ್ತಿ ವಾರ್ಷಿಕೋತ್ಸವ ಹಾಗೂ ಸ್ಮಾರ್ಟ್ ಫೋನ್ ವಿತರಣೆ, ನಿವೃತ್ತಿ ಹೊಂದಿರುವ ಕಾರ್ಯಕರ್ತೆಯರಿಗೆ ಸನ್ಮಾನ ಕಾರ್ಯಕ್ರಮ ನಡೆಯಿತು. ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಕೊಟ್ಟಿದ್ದ ಭರವಸೆಗಳನ್ನು ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಮೇಲೆ ಜಾರಿಮಾಡಿದೆ. ಈ ಯೋಜನೆಗಳಿಗಾಗಿ ಬಜೆಟ್‌ನಲ್ಲಿ ಸಾವಿರಾರು ಕೋಟಿ ರೂಪಾಯಿಗಳನ್ನು ಮೀಸಲಿಟ್ಟಿದೆ. ಯಾರೇ ಬದಲಾವಣೆಯಾದರೂ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವುದಿಲ್ಲ ಎಂದ ಶಾಸಕ ಗಣೇಶ್ ಪ್ರಸಾದ್ ಕಾಂಗ್ರೆಸ್ ಅಧಿಕಾರಕ್ಕೆ ಬಂದ ತಕ್ಷಣ ಐದು ಗ್ಯಾರಂಟಿಗಳನ್ನು ಜಾರಿಗೆ ತಂದಿದೆ. ಮಹಿಳೆಯರಿಗೆ ಆರ್ಥಿಕ ಸ್ವಾತಂತ್ರ್ಯದ ಗೃಹಲಕ್ಷ್ಮಿ, ಉಚಿತ ಪ್ರಯಾಣದ ಶಕ್ತಿ ಯೋಜನೆ, ಉಚಿತ ವಿದ್ಯುತ್ ನೀಡುವ ಗೃಹ ಜ್ಯೋತಿ, ನಿರುದ್ಯೋಗಿ ಪದವೀಧರರಿಗೆ ಯುವನಿಧಿ ಮತ್ತು ಹಸಿವು ಮುಕ್ತ ಕರ್ನಾಟಕದ ಧ್ಯೇಯದ ಅನ್ನ ಭಾಗ್ಯ ಯೋಜನೆಗಳನ್ನು ಜಾರಿಗೆ ತಂದಿದ್ದು ಅನುಷ್ಠಾನಗೊಳಿಸುವಾಗ ಸಾಕಷ್ಟು ತೊಡಕುಗಳು ಉಂಟಾಗಿತ್ತು. ಹಾಗಾಗಿ ಫಲಾನುಭವಿಗಳು ಆತಂಕಕ್ಕೆ ಒಳಗಾಗಬೇಡಿ ಆಗಸ್ಟ್ ತಿಂಗಳವರೆಗೆ ಎಲ್ಲರಿಗೂ ಗೃಹಲಕ್ಷ್ಮಿ ಹಣ ದೊರೆಯಲಿದೆ ಎಂದರು. ತಾಲೂಕಿನಲ್ಲಿ 60 ಸಾವಿರ ಮಹಿಳೆಯರು ಗೃಹ ಲಕ್ಷ್ಮಿ ಯೋಜನೆಯನ್ನು ನೊಂದಾಯಿಸಿದ್ದಾರೆ. ಇದರಲ್ಲಿ 4800 ಮಹಿಳೆಯರಿಗೆ ಬಂದಿಲ್ಲ ಎಂಬ ಮಾಹಿತಿ ಇದೆ ಇವರ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಿ ಖಾತೆಗೆ ಹಣ ಬರುವಂತೆ ಮಾಡಲಾಗುವುದು ಎಂದು ಶಾಸಕ ಗಣೇಶ್ ಪ್ರಸಾದ್ ತಿಳಿಸಿದರು.



# ರಂಗಭೂಮಿಯಲ್ಲಿ ಸಂಘಟಕರ ಪಾತ್ರ ಮುಖ್ಯ

**ಬೆಂಗಳೂರು:** ರಂಗದ ಹಿಂದೆ ನೂರಾರು ಜನ ವಿಜೃಂಭಿಸಿದರೆ, ರಂಗದ ಹಿಂದೆ ಕೆಲಸ ಮಾಡುವ ರಂಗ ಸಂಘಟಕರ ಪಾತ್ರ ಬಹಳ ಮುಖ್ಯವಾದದ್ದು ಎಂದು ಕರ್ನಾಟಕ ಅಕಾಡೆಮಿ ಮಾಜಿ ಸದಸ್ಯ ಸಿಎಂ ನರಸಿಂಹಮೂರ್ತಿ ಅಭಿಪ್ರಾಯಪಟ್ಟರು.



ಅವರು ಕನ್ನಡ ಭವನದಲ್ಲಿ ಸಂಸ ಥಿಯೇಟರ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಏರ್ಪಡಿಸಿದ್ದ ರಂಗಕರ್ಮಿ ಸೋಮಶೇಖರ್ ಅವರಿಗೆ 50 ವರ್ಷ ತುಂಬಿದ ಸಂದರ್ಭದಲ್ಲಿ ಆಯೋಜಿಸಿದ್ದ ಸೋಮಣ್ಣ 50 ಕಾರ್ಯಕ್ರಮದಲ್ಲಿ ಜನಪದ ಗಾಯನ, ನಾಟಕ ಪ್ರದರ್ಶನ ಹಾಗೂ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಮನುಷ್ಯ ಮನುಷ್ಯನಿಗೆ ಸಹಾಯ ಮಾಡುವ ಮೂಲಕ ರಂಗಭೂಮಿಯ ರಂಗಕರ್ಮಿಯಾಗಿ ಸೋಮಣ್ಣ ಅಭಿನಂದನೆಗೆ ಪಾತ್ರರಾಗಿದ್ದಾರೆ. ಸಂಸ ಥಿಯೇಟರ್ ಅಧ್ಯಕ್ಷರಾಗಿ, ಎಂಇಎಸ್ ರಂಗ ಶಾಲೆ, ಹಾಗೂ ಸೃಷ್ಟಿ ರಂಗ ಸಂಸ್ಥೆಯಲ್ಲಿ ಉತ್ತಮ ಸೇವೆ ಮಾಡಿದ್ದಾರೆ ಎಂದರು.

ರಂಗದ ಹಿಂದೆ ನೂರಾರು ಜನರಿದ್ದು, ಅವರೆಲ್ಲರ ಪರಿಶ್ರಮದ ಫಲವಾಗಿ ರಂಗಭೂಮಿ ತನ್ನ ಪ್ರಮುಖ್ಯತೆಯನ್ನು ಉಳಿಸಿಕೊಂಡು ಬಂದಿದೆ ಎಂದರು.

ಬಳ್ಳಾರಿ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ನಾಟಕ ಉಪನ್ಯಾಸಕರಾದ ಡಾ. ಅಣ್ಣಾಜಿ ಕೃಷ್ಣಾರೆಡ್ಡಿ ಮಾತನಾಡಿ, ಸೋತಾಗ ಸಾಂತ್ವನ ನುಡಿಗಳನ್ನು ಹೇಳುವ ಮೂಲಕ ಬದುಕನ್ನು ಮೇಲೆ ಎತ್ತುವ ಪ್ರತಿ ಮನುಷ್ಯರು ಅಭಿನಂದನೆಗೆ ಅರ್ಹರಾಗಿರುತ್ತಾರೆ. ಅಂತಹ ಸಾಲಿನಲ್ಲಿ ರಂಗಭೂಮಿಯ ತೆರೆಯ ಹಿಂದಿನ ಕಾರ್ಯ ಶಿಲ್ಪಿಯಾಗಿ ಸಂಸ ಥಿಯೇಟರ್ ಅಧ್ಯಕ್ಷರಾಗಿ ರಂಗಭೂಮಿಯಲ್ಲಿ ನಿರಂತರ ಸೇವೆಯನ್ನು ಮಾಡುತ್ತಾ ಬಂದಿರುವ ಸೋಮಣ್ಣನವರಿಗೆ 50ರ ಸಂಭ್ರಮವು ರಂಗಭೂಮಿಯ ಗೌರವವನ್ನು ಹೆಚ್ಚಿಸಿದೆ. ಇದು ಇಂದಿನ ಯುವ ರಂಗ ಕರ್ಮಿಗಳಿಗೆ ಮಾದರಿಯಾಗಲಿ ಎಂದು ಹೇಳಿದರು.

ಹಿರಿಯ ಯಕ್ಷಗಾನ ಭಾಗವತ ಕಲಾವಿದ ಮಂಜುನಾಥ ಭಟ್ ಅಧ್ಯಕ್ಷತೆ ವಹಿಸಿದ್ದರು. ಆರ್ಯಭಟ ಪ್ರಶಸ್ತಿ ಪುರಸ್ಕೃತ ರಂಗ ಕರ್ಮಿ ಶಶಿಕಾಂತ ಯಡಹಳ್ಳಿ ಅಭಿನಂದನ ಭಾಷಣ ಮಾಡಿದರು ಹಿರಿಯ ರಂಗಕರ್ಮಿ ದಾವಣಗೆರೆ ಎನ್ ಎಸ್ ರಾಜು, ರಂಗ ಸಂಘಟಕ ಸಂಸ ಸುರೇಶ್, ರಂಗ ನಿರ್ದೇಶಕಿ ನಿರ್ಮಲ ನಾದನ್ ಹಾಜರಿದ್ದರು.

ಕಾರ್ಯಕ್ರಮದ ಆರಂಭದಲ್ಲಿ ನಂಜಪ್ಪ ದೊಡ್ಡ ಮಧುರೆ ಮತ್ತು ಸಂಗಡಿಗರು ಜನಪದ ಗಾಯನ ಕಾರ್ಯಕ್ರಮವನ್ನು ನಡೆಸಿಕೊಟ್ಟರು. ಕೊನೆಯಲ್ಲಿ ರಂಗ ನಿರ್ದೇಶಕ ಗಿರೀಶ್ ಮೇಲುಕೋಟೆ ಇವರ ನಿರ್ದೇಶನದಲ್ಲಿ ಭಾಸನ ಕರ್ಣಭಾರ ನಾಟಕ ಪ್ರದರ್ಶನ ನಡೆಯಿತು.

# ಕನಗನಮರಡಿ ಗ್ರಾಪಂ ಅಧ್ಯಕ್ಷೆಯಾಗಿ ಪ್ರಮೀಳಾ

**ಪಾಂಡವಪುರ:** ತಾಲ್ಲೂಕಿನ ಕನಗನಮರಡಿ ಗ್ರಾಮ ಪಂಚಾಯಿತಿ ನೂತನ ಅಧ್ಯಕ್ಷೆಯಾಗಿ ರೈತ ಸಂಘ ಕಾಂಗ್ರೆಸ್ ಮೈತ್ರಿಕೂಟ ಬೆಂಬಲಿತ ಅಭ್ಯರ್ಥಿ ಪ್ರಮೀಳಾ ಹೇಮಣ್ಣ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.



ರೈತಸಂಘ-ಕಾಂಗ್ರೆಸ್ ಮೈತ್ರಿಕೂಟದಲ್ಲಿ ಏರ್ಪಟ್ಟಿದ್ದ ಅಧಿಕಾರ ಒಡಬಂಡಿಕೆಯ ಸೂತ್ರದನ್ವಯ ಗ್ರಾಮ ಪಂಚಾಯಿತಿಯ ಈ ಹಿಂದಿನ ಅಧ್ಯಕ್ಷೆ ಭಾಗ್ಯಮ್ಮ ಅವರ ರಾಜೀನಾಮೆಯಿಂದ ತೆರವಾದ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಿಗಧಿಯಾಗಿತ್ತು.

ನಂತರ ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ಅಧ್ಯಕ್ಷಗಾದಿ ಬಯಸಿ ರೈತಸಂಘ-ಕಾಂಗ್ರೆಸ್ ಮೈತ್ರಿಕೂಟದಿಂದ ಪ್ರಮೀಳಾ ಹೊರತುಪಡಿಸಿ ಬೇರೊಬ್ಬ ಸದಸ್ಯರು ನಾಮಪತ್ರವನ್ನು ಸಲ್ಲಿಸದ ಹಿನ್ನೆಲೆಯಲ್ಲಿ ಚುನಾವಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ತಾ.ಪಂ.ನ ನರೇಗಾ ಸಹಾಯಕ ನಿರ್ದೇಶಕ ಸುರೇಂದ್ರ ಅವರು ಪ್ರಮೀಳಾ ಅವರ ಅವಿರೋಧ ಆಯ್ಕೆಯನ್ನು ಘೋಷಿಸಿದರು. ಈ ವೇಳೆ ಮೈತ್ರಿಕೂಟದ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ವಿತರಿಸಿ ಸಂಭ್ರಮಿಸಿದರು.

ನೂತನ ಅಧ್ಯಕ್ಷೆ ಪ್ರಮೀಳಾ ಅವರನ್ನು ಅಭಿನಂದಿಸಿ ಮಾತನಾಡಿದ ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ, ಸರ್ಕಾರದ ಯೋಜನೆ, ಸೌಲಭ್ಯಗಳನ್ನು ಜನರಿಗೆ ತಲುಪಿಸುವ ಪ್ರಾಮಾಣಿಕ ಕೆಲಸವನ್ನು ನಾವೆಲ್ಲರೂ ಜತೆಗೂಡಿ ಮಾಡೋಣ ಎಂದರು.

ತಾಲೂಕಿನ ಕೆನ್ನಾಳು ಗ್ರಾ.ಪಂ.ವ್ಯಾಪ್ತಿಯಲ್ಲಿ ನಡೆಯುತ್ತಿರುವ ಸರ್ಕಾರಿ ಸೇವೆಗಳು ನಿಮ್ಮನೆ ಬಾಗಿಲಿಗೆ ಎಂಬ ವಿನೂತನ ಕಾರ್ಯಕ್ರಮ ಯಶಸ್ವಿಯಾಗಿ ನಡೆಯುತ್ತಿದೆ. ಆರಂಭದಲ್ಲಿ ಅರ್ಥಮಾಡಿಕೊಂಡು ಕೆಲಸ ಮಾಡಲು ಸ್ವಲ್ಪ ಕಷ್ಟವಾಗಿತ್ತು. ಇದೀಗ ಹಂತ ಹಂತವಾಗಿ ಬದಲಾವಣೆ ಮಾಡಿಕೊಡಿಕೊಂಡು ಸುಲಲಿತವಾಗಿ ಕೆಲಸ ಮಾಡುತ್ತಿದ್ದೇವೆ. ಕಂದಾಯ ಇಲಾಖೆಯಲ್ಲಿ ಆರ್‌ಟಿಸಿ ತಿದ್ದುಪಡಿ, ಆದಾಯ, ಜಾತಿ ಪ್ರಮಾಣ ಪತ್ರಗಳು, ಪೌತಿಖಾತೆಗಳು ಸೇರಿದಂತೆ ಅನೇಕ ಕೆಲಸ ಕಾರ್ಯಗಳು ಆಗಿವೆ. ಕೆನ್ನಾಳು ಗ್ರಾಮದಲ್ಲಿ ಸ್ವಾತಂತ್ರ್ಯ ನಂತರ ಇದೇ ಮೊದಲ ಬಾರಿಗೆ ಗ್ರಾಮಠಾಣಾ ವಿಸ್ತರಣೆ ಮಾಡುವ ಕೆಲಸ ಆರಂಭವಾಗಿದೆ. ಈ ಮೂಲಕ ಗ್ರಾಮದ ರೈತರಿಗೆ ಅನುಕೂಲ ಮಾಡಿಕೊಡಲಾಗಿದೆ. ವಿದ್ಯುತ್ ಇಲಾಖೆ ವತಿಯಿಂದ 35 ಕಂಬಗಳನ್ನು ಬದಲಾವಣೆ ಮಾಡಿದ್ದಾರೆ. ಸುಮಾರು 3 ಕಿ.ಮೀ.ವಿದ್ಯುತ್ ತಂತಿ ಬದಲಾವಣೆ ಹಾಗೂ 6 ಹೊಸ ವಿದ್ಯುತ್ ಪರಿವರ್ತಕಗಳನ್ನು ಅಳವಡಿಸಲಾಗಿದೆ. ಮುಂಬರುವ ದಿನಗಳಲ್ಲಿ ಸರ್ಕಾರಿ ಸೇವೆ ನಿಮ್ಮನೆ ಬಾಗಿಲಿಗೆ ಕಾರ್ಯಕ್ರಮ 5 ದಿನಗಳಲ್ಲಿ ಅನುಷ್ಠಾನಗೊಳಿಸಲು ಪ್ರಯತ್ನಿಸುವುದಾಗಿ ತಿಳಿಸಿದರು.

ಗ್ರಾ.ಪಂ.ಉಪಾಧ್ಯಕ್ಷ ರಂಗಸ್ವಾಮಿ, ಸದಸ್ಯರಾದ ಭಾಗ್ಯಮ್ಮ, .ಬಿ.ತಮ್ಮಣ್ಣ, ಎಂ.ಕೆ.ಸ್ವಾಮಿಗೌಡ, ಸುದರ್ಶನ್, ಈರಚಾರಿ, ಅಭಿ, ವಸಂತ, ಜಯಲಕ್ಷ್ಮಿ ಪಿಡಿಓ ಪುರುಷೋತ್ತಮ್, ಕಾರ್ಯದರ್ಶಿ ಜಯರಾಮು, ಮುಖಂಡರಾದ ಬಲರಾಮು, ಧರ್ಮರತ್ನಾಕರ, ಸೋಮಣ್ಣ, ಕೆ.ಜೆ.ಚನ್ನೇಗೌಡ, ಹೇಮಣ್ಣ, ಇತರರು ಇದ್ದರು.

# ಸಂಜೆ ಟಿಪ್ಸ್




## ಮ್ಯಾಕ್ಸ್ ಕಿಡ್ಸ್ ಫೆಸ್ಟಿವಲ್ ದೇಶವ್ಯಾಪಿ ಮಕ್ಕಳ ಕಲ್ಪನೆಗೆ ಕುಂಚ ನೀಡಿದೆ

ಜಾಗತಿಕ ಫ್ಯಾಷನ್ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ಮ್ಯಾಕ್ಸ್ ಫ್ಯಾಷನ್ 2024ರ ಬೇಸಿಗೆ ತನ್ನ ಜನಪ್ರಿಯ ಮ್ಯಾಕ್ಸ್ ಕಿಡ್ಸ್ ಫೆಸ್ಟಿವಲ್ ಅಭಿಯಾನ ಮತ್ತೆ ಬಂದಿರುವುದನ್ನು ಹೆಮ್ಮೆಯಿಂದ ಪ್ರಕಟಿಸಿದೆ. 14 ವರ್ಷಗಳ ಹಿಂದೆ ಇದರ ಪ್ರಾರಂಭದಿಂದಲೂ ಮ್ಯಾಕ್ಸ್ ಕಿಡ್ಸ್ ಫೆಸ್ಟಿವಲ್ ಕುಟುಂಬಗಳು ಕಾತುರದಿಂದ ಕಾಯುವ ಬೇಸಿಗೆಯ ಕಾರ್ಯಕ್ರಮವಾಗಿ ಮೈಲಿಗಲ್ಲು ಸಾಧಿಸಿದ್ದು ಮ್ಯಾಕ್ಸ್ ಅನ್ನು ದೇಶದ ಅತ್ಯಂತ ಪ್ರೀತಿಪಾತ್ರ ಫ್ಯಾಷನ್ ಬ್ರಾಂಡ್ ಆಗಿ ಅದರ ಸ್ಥಾನವನ್ನು ಗಟ್ಟಿಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ಇಂದು ಮಕ್ಕಳ ವಿಭಾಗವು ಮ್ಯಾಕ್ಸ್ ಒಟ್ಟು ಮಾರಾಟದ ನಾಲ್ಕನೇ ಒಂದರಷ್ಟು ಪಾಲು ಹೊಂದಿದೆ. ದೇಶವ್ಯಾಪಿ ನಡೆಯುವ ಈ ವಾರ್ಷಿಕ ಕಾರ್ಯಕ್ರಮವು ಕಲೆಯ ಮಾಧ್ಯಮದ ಮೂಲಕ ಮಕ್ಕಳು ಹಾಗೂ ಹದಿವಯಸ್ಕರಿಗೆ ಅವರ ಸೃಜನಶೀಲತೆಯನ್ನು ಸಂಭ್ರಮಿಸಲು ಆದ್ಯತೆ ನೀಡುತ್ತದೆ. ಈ ವರ್ಷದ ಆವೃತ್ತಿಯು 100ಕ್ಕೂ ಹೆಚ್ಚು ಮ್ಯಾಕ್ಸ್ ಮಳಿಗೆಗಳಲ್ಲಿ 21 ನಗರಗಳಲ್ಲಿ ಒಳಗೊಂಡು ಅಖಿಲ ಭಾರತ ಚಿತ್ರಕಲೆ ಮತ್ತು ಕಲರಿಂಗ್ ಸ್ಪರ್ಧೆ ನಡೆಸಲಿದೆ. ಮ್ಯಾಕ್ಸ್ ಫ್ಯಾಷನ್ ಇಂಡಿಯಾದ ಹೆಡ್ ಮಾರ್ಕೆಟಿಂಗ್ ಪಲ್ಲವಿ ಪಾಂಡೆ, ''ಮ್ಯಾಕ್ಸ್ ಕಿಡ್ಸ್ ಫೆಸ್ಟಿವಲ್ ನಮ್ಮ ಅತ್ಯಂತ ದೊಡ್ಡ ಹಾಗೂ ಪ್ರೀತಿಪಾತ್ರ ವಾರ್ಷಿಕ ಬ್ರಾಂಡ್ ಐಪಿಯಾಗಿದೆ. ಪ್ರತಿ ವರ್ಷ ಇದು ಬೃಹತ್ ಪ್ರಮಾಣದಲ್ಲಿ ಬೆಳೆಯುತ್ತಿದೆ ಮತ್ತು ನಮ್ಮ ಯುವ ಅಭಿಮಾನಿಗಳಿಗೆ ಸರಿಸಾಟಿ ಇರದ ಅನುಭವ ನೀಡುತ್ತಿದೆ. ನಾವು ಮಕ್ಕಳಲ್ಲಿ ಎಣೆಯಿರದ ಆಸಕ್ತಿ, ಸೃಜನಶೀಲತೆ ಮತ್ತು ಪ್ರಯತ್ನವಿದೆ ಎಂದು ಕಂಡುಕೊಂಡಿದ್ದೇವೆ, ಆದ್ದರಿಂದಲೇ ಈ ವರ್ಷ ನಾವು ನಿಜಕ್ಕೂ ಅದ್ಭುತ ರೀತಿಯಲ್ಲಿ ಅವರ ಅಸಾಧಾರಣ ಪ್ರತಿಭೆಯನ್ನು ಪ್ರದರ್ಶಿಸುತ್ತಿದ್ದೇವೆ. ಈ ಉತ್ಸವವು ಮಕ್ಕಳ ಕಲ್ಪನೆಗೆ ಜೀವ ತುಂಬುವ ಸಂಭ್ರಮವಾಗಿದೆ ಮತ್ತು ನಾವು ಅವರ ಧ್ವನಿಗಳನ್ನು ಮತ್ತು ಸೃಜನಶೀಲ ಅಭಿವ್ಯಕ್ತಿಗಳನ್ನು ಹಿಂದೆಂದೂ ಕಾಣದಂತೆ ಹೆಚ್ಚಿಸಲು ವೇದಿಕೆ ಒದಗಿಸಲು ಬದ್ಧರಾಗಿದ್ದೇವೆ'' ಎಂದರು.

## ಹಾಗಲಕಾಯಿ ಪಲ್ಯ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಸಣ್ಣ ಹಾಗಲಕಾಯಿ – 12 ರಿಂದ 15 ಈರುಳ್ಳಿ – 1 ಕಪ್ ಹಸಿಮೆಣಸು – 4 ರಿಂದ 5 ಶುಂಠಿ ಮತ್ತು ಬೆಳ್ಳುಳ್ಳಿ ಪೇಸ್ಟ್ – 1/2 ಚಮಚ ಹುಣಸೆ ಹಣ್ಣಿನ ಹುಳಿ ನೀರು – 1/2 ಕಪ್ ಅರಿಶಿನ – 1/4 ಚಮಚ ಕೆಂಪು ಮೆಣಸಿನ ಹುಡಿ – 1/2 ಚಮಚ ಆಲೂ ಹಾಗಲಕಾಯಿ ಪಲ್ಯ, ಸ್ಟೆಪ್ ಬೈ ಸ್ಟೆಪ್ ರೆಸಿಪಿಗರಮ್ ಮಸಾಲಾ – 1/2 ಚಮಚ ಅಮೆಚೂರ್ ಹುಡಿ – 1/2 ಚಮಚ ಎಣ್ಣೆ – ಎರಡು ಟೇಬಲ್ ಚಮಚ

### ಮಾಡುವ ವಿಧಾನ

ಹಾಗಲಕಾಯಿಯನ್ನು ತೊಳೆದುಕೊಳ್ಳಿ. ಇದರ ಸಿಪ್ಪೆಯನ್ನು ತೆಗೆದು ಎರಡು ತುಂಡುಗಳನ್ನಾಗಿ ಮಾಡಿಕೊಳ್ಳಿ. ಹಾಗಲಕಾಯಿಯಲ್ಲಿರುವ ಬೀಜವನ್ನು ಬೇರ್ಪಡಿಸಿ , ಈ ಸಮಯದಲ್ಲಿ, ನೀರನ್ನು ಕುದಿಸಿಕೊಂಡು ಇದಕ್ಕೆ ಕತ್ತರಿಸಿದ ಹಾಗಲಕಾಯಿಯನ್ನು ಹಾಕಿ. 15 ನಿಮಿಷಗಳ ಕಾಲ ಕುದಿಸಿಕೊಳ್ಳಿ. ಹೀಗೆ ಮಾಡುವುದರಿಂದ ಹಾಗಲಕಾಯಿ ಮೃದುವಾಗುತ್ತದೆ. ನಮೂದಿಸಿದ ಸಮಯದಲ್ಲಿ, ನೀರನ್ನು ಬಸಿದುಕೊಳ್ಳಿ. ಮತ್ತು ಹಾಗಲಕಾಯಿಯನ್ನು ಪಕ್ಕದಲ್ಲಿಡಿ. ತಳ ಆಳವಿರುವ ಪಾತ್ರೆಯಲ್ಲಿ ಎಣ್ಣೆ ಸೇರಿಸಿ. ಇದಕ್ಕೆ ಈರುಳ್ಳಿ, ಶುಂಠಿ ಮತ್ತು ಬೆಳ್ಳುಳ್ಳಿ ಪೇಸ್ಟ್ ಹಾಗೂ ಹಸಿಮೆಣಸನ್ನು ಹಾಕಿ ಇನ್ನು ಇದನ್ನು ಚೆನ್ನಾಗಿ ಮಗುಚಿಸಿಕೊಳ್ಳಿ, ತದನಂತರ ಮಸಾಲಾವನ್ನು ಹಾಕಿ ಮತ್ತು ಎಲ್ಲಾ ಸಾಮಾಗ್ರಿಯನ್ನು ಚೆನ್ನಾಗಿ ಮಗುಚಿಸಿಕೊಳ್ಳಿ ಇನ್ನು ಇದಕ್ಕೆ ಹುಳಿ ನೀರನ್ನು ಸೇರಿಸಿ ಈಗ, ಉಪ್ಪು ಮತ್ತು ನೀರನ್ನು ಮಿತವಾಗಿ ಹಾಕಿ ಸಣ್ಣ ಉರಿಯಲ್ಲಿ ಇದನ್ನು ಬೇಯಿಸಿಕೊಳ್ಳಿ ಸರಿ ಸುಮಾರು 10 ರಿಂದ 15 ನಿಮಿಷಗಳ ಕಾಲ ಬೇಯಿಸಿ ಪೂರ್ಣಗೊಂಡ ನಂತರ ಕೊತ್ತಂಬರಿ ಸೊಪ್ಪಿನಿಂದ ಅಲಂಕರಿಸಿ ರುಚಿಯಾದ ಹಾಗಲಕಾಯಿ ರೆಸಿಪಿ ಸಿದ್ಧವಾಗಿದೆ.

## ಓಟ್ಸ್ ಬಗ್ಗೆ ಎಷ್ಟುಗೊತ್ತು ನಿಮಗೆ?

### ಹೆಲ್ತ್ ಟಿಪ್ಸ್



ಓಟ್ಸ್ ಎಂಬುದು ಅತ್ಯಂತ ಹಳೆಯ ದವಸ ಧಾನ್ಯಗಳ ಪೈಕಿ ಒಂದು. ಇದರಲ್ಲಿ ನಮ್ಮ ದೇಹಕ್ಕೆ ಬೇಕಾಗುವ ಸಾಕಷ್ಟು ಮೈಕ್ರೋ ಹಾಗೂ ಮ್ಯಾಕ್ರೋ ಪೋಷಕಾಂಶಗಳಿವೆ. ಇವುಗಳಲ್ಲಿ ಪ್ರೊಟೀನ್ ಹೆಚ್ಚಿದ್ದು, ಇತರ ಧಾನ್ಯಗಳಿಂದ ಹೆಚ್ಚಿನ ಪ್ರಮಾಣದಲ್ಲಿ ನಾರಿನಂಶವೂ, ಪೋಷಕಾಂಶಗಳೂ ಇರುತ್ತವೆ.

ಪೋಷಕಾಂಶ ತಜ್ಞರ ಪ್ರಕಾರ, ಓಟ್ಸ್‌ನಲ್ಲಿ ಸಾಕಷ್ಟು ಕರಗಬಲ್ಲ ನಾರಿನಂಶವಿರುವುದರಿಂದ ಇದು ಕೊಲೆಸ್ಟೆರಾಲ್ ಮಟ್ಟವನ್ನು ತಗ್ಗಿಸಲು ನೆರವಾಗುತ್ತದೆ. ಅಷ್ಟೇ ಅಲ್ಲ, ದೇಹಕ್ಕೆ ಗ್ಲುಕೋಸ್ ಬೇಗನೆ ಸೇರದಂತೆಯೂ ಇವು ಮಾಡುತ್ತದೆ. ಕರುಳಿನಲ್ಲಿ ಆಹಾರ ಸುಲಭವಾಗಿ ಪ್ರವಹಿಸಲು ಕೂಡಾ ಇದು ನೆರವಾಗುತ್ತದೆ. ಇದರಲ್ಲಿರುವ ಆಂಟಿ ಆಕ್ಸಿಡೆಂಟ್ಗಳು ದೇಹದಲ್ಲಿ ಅಧಿಕ ರಕ್ತದೊತ್ತಡವನ್ನು ಕಡಿಮೆ ಮಾಡಲು ನೆರವಾಗುತ್ತದೆ.

ಈ ಓಟ್ಸ್ ಸೇವನೆಯಿಂದ ನಿಜವಾಗಿಯೂ ತೂಕ ಇಳಿಕೆಗೆ ಸಹಕಾರಿ. ಓಟ್ಸ್‌ನಲ್ಲಿ ಸಾಕಷ್ಟು ಪೋಷಕಾಂಶಗಳೂ, ನಾರಿನಂಶವೂ ಇರುವುದರಿಂದ ಇದರಿಂದ ತೂಕ ಇಳಿಯಬಹುದು ಎಂಬುದು ನಿಜವೇ ಆದರೂ, ಸರಿಯಾಗಿ ಹಿತಮಿತವಾಗಿ ಸೇವನೆ ಮಾಡಿದರೆ ಮಾತ್ರ ಇದು ಸಾಧಯ ಎಂಬುದೂ ಸತ್ಯವೇ. ಯಾಕೆಂದರೆ ಓಟ್ಸ್‌ನಲ್ಲಿ ಸ್ಟಾರ್ಚ್ ಕೂಡಾ ಇರುವುದರಿಂದ ಹಾಗೂ ಹೆಚ್ಚು ಕಾರ್ಬೋಹೈಡ್ರೇಟ್ ಇರುವ ಕಾರಣದಿಂದ ಹೆಚ್ಚು ಗ್ಲಿಸೆಮಿಕ್ ಇಂಡೆಕ್ಸ್ ಹೊಂದಿರುತ್ತದೆ. ಹಾಗಾಗಿ ದೇಹದಲ್ಲಿ ಸಕ್ಕರೆಯ ಪ್ರಮಾಣ ಏರುವ ಅಪಾಯವೂ ಇದೆ. ಹಿತಮಿತವಾಗಿ ಸೇವಿಸಿದರೆ ಮಾತ್ರ ಪ್ರಯೋಜನ ಪಡೆಯಬಹುದು ಎನ್ನುತ್ತಾರೆ.

ಓಟ್ಸ್‌ನ್ನು ನಾವು ಹೇಗೆ ಬಳಸುತ್ತೇವೆ ಎಂಬುದರಲ್ಲಿ ಸತ್ಯ ಅಡಗಿದೆ ಎನ್ನುತ್ತಾರೆ ತಜ್ಞರು. ಯಾಕೆಂದರೆ ಓಟ್ಸ್‌ನಿಂದ ಲಾಭ ಇರುವಷ್ಟೇ ಅಪಾಯವೂ ಇದೆ. ಮಾರುಕಟ್ಟೆಯಲ್ಲಿ ಈಗ ಸುಲಭವಾಗಿ ಬಗೆಬಗೆಯ ಫ್ಲೇವರ್ಗಳ ಮಸಾಲೆಗಳ ಜೊತೆಗೆ ಲಭ್ಯವಾಗುವ ಇನ್ಸ್ಟಂಟ್- ದಿಢೀರ್ ಓಟ್ಸ್‌ಗಳಲ್ಲಿ ಗ್ಲಿಸೆಮಿಕ್ ಇಂಡೆಕ್ಸ್ ಹೆಚ್ಚಿರುತ್ತದೆ. ಹಣ್ಣುಗಳನ್ನು ಸೇರಿಸಿ, ಇನ್ಸ್ಟಂಟ್ ಓಟ್ಸ್ ಮಾಡಿ ತಿನ್ನುವುದರಿಂದ ರಕ್ತದಲ್ಲಿ ಸಕ್ಕರೆ ದಿಢೀರ್ ಹೆಚ್ಚಾಗುವ ಸಾಧ್ಯತೆ ಹೆಚ್ಚಿದೆ. ಹಾಗಾದರೆ, ತೂಕ ಇಳಿಸುವ ಉದ್ದೇಶದಿಂದ ಓಟ್ಸ್ ತಿನ್ನಲು ಬಯಸುವ ಮಂದಿ ಯಾವ ಕ್ರಮದಲ್ಲಿ ತಿಂದರೆ ಲಾಭ ಪಡೆಯಬಹುದು ಎಂಬ ಪ್ರಶ್ನೆ ನಿಮ್ಮದಾಗಿದ್ದರೆ, ಉತ್ತರ ಇಲ್ಲಿದೆ. ಇನ್ಸ್ಟಂಟ್‌ಗಳ ಬದಲಾಗಿ ಸ್ಟೀಲ್ ಕಟ್ ಓಟ್ಸ್‌ಗಳ ಬಳಕೆ ಮಾಡುವುದು ಒಳ್ಳೆಯದು.

## ಕಪ್ಪು ತುಟಿಗಳಿಗೆ ಕಾರಣಗಳು

### ಬ್ಯೂಟಿ ಟಿಪ್ಸ್



ತುಟಿಗಳು ಕೇವಲ ಮೂರರಿಂದ ಐದು ಪದರಗಳ ಕೋಶಗಳಿಂದ ಆವೃತವಾಗಿವೆ, ಹೆಚ್ಚಿನ ಚರ್ಮವು ಸುಮಾರು 16 ಪದರಗಳಿಂದ ಮುಚ್ಚಲ್ಪಟ್ಟಿದೆ. ಇದರರ್ಥ ನಮ್ಮ ತುಟಿಗಳ ತೆಳುವಾದ ಚರ್ಮವು ಕತ್ತಲೆ, ಶುಷ್ಕತೆ, ಮಂದತೆ ಮತ್ತು ಬಣ್ಣಬಣ್ಣದಂತಹ ಹಾನಿಗೆ ಹೆಚ್ಚು ಗುರಿಯಾಗುತ್ತದೆ. ಲಿಪ್‌ಸ್ಟಿಕ್ ಅನ್ನು ಅನ್ವಯಿಸುವ ಹೊರಗಿನ ಭಾಗವನ್ನು ವರ್ಮಿಲಿಯನ್ ಎಂದು ಕರೆಯಲಾಗುತ್ತದೆ. ವರ್ಮಿಲಿಯನ್ ನಮ್ಮ ಚರ್ಮದ ಉಳಿದಂತೆ ಬೆವರು ಅಥವಾ ಎಣ್ಣೆ ಗ್ರಂಥಿಗಳನ್ನು ಹೊಂದಿಲ್ಲ. ರಕ್ಷಣಾತ್ಮಕ ತಡೆಗೋಡೆಗಳು ತೆಳುವಾದವು ಮತ್ತು ಆದ್ದರಿಂದ ನಮ್ಮ ತುಟಿಗಳು ಮಾಲಿನ್ಯ ಮತ್ತು UV ಹಾನಿಗೆ ಹೆಚ್ಚು ಒಳಗಾಗುತ್ತವೆ. ಹೆಚ್ಚಿನ ಮೆಲನಿನ್ ಉತ್ಪಾದನೆಯಿಂದಾಗಿ ತೇವಾಂಶದ ಕೊರತೆಯು ಬಣ್ಣಬಣ್ಣದ, ಗಾಢವಾದ, ಹೈಪರ್ಪಿಗ್ಮೆಂಟೆಡ್ ತುಟಿಗಳಿಗೆ ಕಾರಣವಾಗುತ್ತದೆ. ಸೂರ್ಯನಿಗೆ ಒಡ್ಡಿಕೊಳ್ಳುವುದು, ಧೂಮಪಾನ, ಗರ್ಭಧಾರಣೆ, ಕೆಲವು ಔಷಧಿಗಳು ಅಥವಾ ಇತರ ವೈದ್ಯಕೀಯ ಸಮಸ್ಯೆಗಳು ಸೇರಿದಂತೆ ವಿವಿಧ ಕಾರಣಗಳಿಂದ ಇದು ಸಂಭವಿಸುತ್ತದೆ. ಕಡಿಮೆ ತೇವಾಂಶವು ಒಣ ತುಟಿಗಳಿಗೆ ಕಾರಣವಾಗುತ್ತದೆ.

UV ಕಿರಣಗಳಿಂದ ಉಂಟಾಗುವ ಹಾನಿಯಿಂದ ನಮ್ಮ ಚರ್ಮವನ್ನು ರಕ್ಷಿಸಲು ನಾವು ಸಾಮಾನ್ಯವಾಗಿ ಸನ್ ಬ್ಲಾಕ್ ಅನ್ನು ಬಳಸುತ್ತೇವೆ. ಆದರೆ ನಾವು ಅತ್ಯಂತ ಸೂಕ್ಷ್ಮ ಭಾಗವಾದ ನಮ್ಮ ತುಟಿಗಳನ್ನು ಮರೆತುಬಿಡುತ್ತೇವೆ. ಯಾವುದೇ ತುಟಿ ರಕ್ಷಣೆಯಿಲ್ಲದೆ ಸೂರ್ಯನ ಕಿರಣಗಳಿಗೆ ಅತಿಯಾಗಿ ಒಡ್ಡಿಕೊಳ್ಳುವುದರಿಂದ ಮೆಲನಿನ್ನ ಅಧಿಕ ಉತ್ಪಾದನೆಯನ್ನು ಉತ್ತೇಜಿಸಬಹುದು, ಇದು ವರ್ಣದ್ರವ್ಯ ಅಥವಾ ಕಪ್ಪು ತುಟಿಗಳಿಗೆ ಕಾರಣವಾಗುತ್ತದೆ. ಧೂಮಪಾನವು ಕಪ್ಪು ತುಟಿಗಳ ಪ್ರಮುಖ ಅಪರಾಧಿಯಾಗಿದೆ. ಧೂಮಪಾನ ಮಾಡುವ ಜನರು ತುಟಿಗಳ ಸುತ್ತಲೂ ಕಪ್ಪು ರೇಖೆಯನ್ನು ಹೊಂದಿರುತ್ತಾರೆ. ಆರೋಗ್ಯಕರ ಚರ್ಮ ಮತ್ತು ಕೂದಲನ್ನು ಕಾಪಾಡಿಕೊಳ್ಳುವಲ್ಲಿ ಜಲಸಂಚಯನವು ಪ್ರಮುಖ ಪಾತ್ರ ವಹಿಸುತ್ತದೆ ಎಂದು ನಮಗೆಲ್ಲರಿಗೂ ತಿಳಿದಿದೆ. ಆದರೆ ನಮ್ಮ ಪೌಟ್ನ ಸುಂದರವಾದ ಗುಲಾಬಿ ಬಣ್ಣ ಕಾಪಾಡಿಕೊಳ್ಳಲು ಜಲಸಂಚಯನ ಮುಖ್ಯವಾಗಿದೆ. ನೀರಿನ ಕೊರತೆಯು ಒಣ, ಒಡೆದ ಮತ್ತು ಕಿರಿಕಿರಿಯುಂಟುಮಾಡುವ ತುಟಿಗಳಿಗೆ ಕಾರಣವಾಗಬಹುದು.

ಆದ್ದರಿಂದ ಪ್ರತಿದಿನ ಕನಿಷ್ಠ ಎಂಟು ಲೋಟ ನೀರು ಕುಡಿಯುವುದು ಮತ್ತು ಚಳಿಗಾಲದಲ್ಲಿ ಇನ್ನೂ ಹೆಚ್ಚು ಕುಡಿಯುವುದು ಮುಖ್ಯ.

ಚಳಿಗಾಲದಲ್ಲಿ ವಿಪರೀತ ಶುಷ್ಕತೆಯಿಂದ ನಮ್ಮ ತುಟಿಗಳು ಹೆಚ್ಚು ಬಳಲುತ್ತವೆ. ಒಣ ತುಟಿಗಳು ಕಪ್ಪು ಮತ್ತು ವರ್ಣದ್ರವ್ಯದ ತುಟಿಗಳಿಗೆ ಪ್ರಮುಖ ಕಾರಣವಾಗಿದೆ. ಆದ್ದರಿಂದ, ನಮ್ಮ ದೇಹವನ್ನು ಒಳಗಿನಿಂದ ಹೈಡ್ರೇಟ್ ಮಾಡುವುದರಿಂದ ಒಣ ತುಟಿಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ಡಾರ್ಕ್ ತುಟಿಗಳಿಗೆ ಇತರ ಕಾರಣಗಳು ವಿಟಮಿನ್ ಕೊರತೆ, ಮೇಕ್‌ಅಪ್, ಲಿಪ್ಸ್ಟಿಕ್ ಅಥವಾ ಟೂತ್‌ಪೇಸ್ಟ್ ಅಲರ್ಜಿಗಳು ಮತ್ತು ಯಾವುದೇ ಕಿರಿಕಿರಿ ಅಥವಾ ಗಾಯದಂತಹ ವೈದ್ಯಕೀಯ ಕಾರಣಗಳಿಂದಾಗಿರಬಹುದು. ನೀವು ಹೆಚ್ಚಿನ ಡೋಸೇಜ್ ಔಷಧಿಗಳನ್ನು ಸೇವಿಸಿದಾಗ ತುಟಿಗಳ ಮೇಲೆ ಕಪ್ಪು ಕಲೆಗಳು ಅಥವಾ ಹೈಪರ್ಪಿಗ್ಮೆಂಟೇಶನ್ ಉಂಟಾಗಬಹುದು.

ಗರ್ಭಾವಸ್ಥೆಯಲ್ಲಿ, ಕೆಲವು ಮಹಿಳೆಯರು ತುಟಿಗಳ ಮೇಲೆ ಕತ್ತಲೆ ಮತ್ತು ಮೊಲೆತೊಟ್ಟುಗಳು, ಹಣೆ ಮತ್ತು ಕುತ್ತಿಗೆಯ ಮೇಲೆ ಕಪ್ಪು ತೇಪೆಗಳನ್ನು ಸಹ ಅನುಭವಿಸಬಹುದು. ಆದಾಗ್ಯೂ, ಈ ಪ್ರದೇಶಗಳು ಸಾಮಾನ್ಯವಾಗಿ ಗರ್ಭಧಾರಣೆಯ ನಂತರ ತಮ್ಮ ನೈಸರ್ಗಿಕ ಬಣ್ಣಕ್ಕೆ ಮರಳುತ್ತವೆ. ಶುಷ್ಕತೆಯ ಸಮಸ್ಯೆಯನ್ನು ಪರಿಹರಿಸುತ್ತದೆ.

## ಬಿಜೆಪಿ ಸಂಸದೆ ಕಂಗನಾ ರ ಎಮರ್ಜೆನ್ಸಿ ಬಿಡುಗಡೆ ದಿನಾಂಕ ಘೋಷಣೆ



ಬಿಜೆಪಿ ಸಂಸದ ಕಂಗನಾ ರಣಾವತ್ ಅಭಿನಯದ ದಿವಂಗತ ಮಾಜಿ ಪ್ರಧಾನಿ ಇಂದಿರಾ ಗಾಂಧಿ ಕುರಿತ ಸಿನಿಮಾ ಎಮರ್ಜೆನ್ಸಿ ಬಿಡುಗಡೆ ದಿನಾಂಕ ಘೋಷಣೆಯಾಗಿದೆ. ಕಂಗನಾ ರಣಾವತ್ ನಿರ್ಮಾಣ ಹಾಗೂ ನಿರ್ದೇಶನದ ಮಾಜಿ ಪ್ರಧಾನಿ ಇಂದಿರಾಗಾಂಧಿ ಕುರಿತಾದ ಎಮರ್ಜೆನ್ಸಿ ಸಿನಿಮಾ ಬಿಡುಗಡೆ ದಿನಾಂಕ ಘೋಷಣೆಯಾಗಿದ್ದು ಸ್ವತಃ ಕಂಗನಾ ಇಂದಿರಾಗಾಂಧಿ ಪಾತ್ರದಲ್ಲಿ ನಟಿಸಿದ್ದಾರೆ.

ಹಿಮಾಚಲ ಪ್ರದೇಶದ ಮಂಡಿ ಲೋಕಸಭಾ ಕ್ಷೇತ್ರದಿಂದ ಚುನಾವಣೆಗೆ ಸ್ಪರ್ಧಿಸಿ ಭಾರಿ ಅಂತರದಿಂದ ಗೆಲುವು ಸಾಧಿಸಿದ ಬಿಜೆಪಿ ಸಂಸದ ಕಂಗನಾ ತಮ್ಮ ನಿರ್ಮಾಣ ಹಾಗೂ ನಿರ್ದೇಶನದಲ್ಲಿ ಎಮರ್ಜೆನ್ಸಿ ಸಿನಿಮಾ ನಿರ್ಮಾಣ ಮಾಡಿದ್ದಾರೆ.

ಈ ಸಿನಿಮಾ ಲೋಕಸಭೆ ಚುನಾವಣೆಗೂ ಮುನ್ನ ತೆರೆ ಕಾಣಬೇಕಿತ್ತು ಆದರೆ ಚುನಾವಣೆ ಹಿನ್ನೆಲೆ ಸಿನಿಮಾ ಬಿಡುಗಡೆಯನ್ನು ಮುಂದೂಡಲಾಗಿತ್ತು ಇದೀಗ ಸಿನಿಮಾದ ಬಿಡುಗಡೆ ದಿನಾಂಕವನ್ನು ಘೋಷಣೆ ಮಾಡಿದ್ದಾರೆ.

ಎಮರ್ಜೆನ್ಸಿ ಸಿನಿಮಾವನ್ನು ಸಂಸದೆ ಕಂಗನ ನಿರ್ಮಾಣ ಮಾಡಿ ನಿರ್ದೇಶಿಸಿದ್ದು, ಸೆಪ್ಟಂಬರ್ 6 ರಂದು ತೆರೆ ಕಾಣಲಿದೆ. ಸಿನಿಮಾದಲ್ಲಿ ಇಂದಿರಾಗಾಂಧಿಯ ಪಾತ್ರದಲ್ಲಿ ಕಂಗನ ಕಾಣಿಸಿಕೊಂಡಿದ್ದಾರೆ. ಈ ಕುರಿತು ಕಂಗನಾ ರಣಾವತ್ ತಮ್ಮ ಟ್ವಿಟರ್ ಖಾತೆಯಲ್ಲಿ ಬಿಡುಗಡೆ ದಿನಾಂಕವನ್ನು ಘೋಷಣೆ ಮಾಡಿದ್ದು, ಭಾರತ ಪ್ರಜಾಪ್ರಭುತ್ವದ ಕರಾಳ ಅಧ್ಯಾಯಕ್ಕೆ 50 ವರ್ಷದ ಹಿನ್ನೆಲೆ ಎಮರ್ಜೆನ್ಸಿ ಸಿನಿಮಾ ಬಿಡುಗಡೆಯ ದಿನಾಂಕವನ್ನು ಘೋಷಿಸುತ್ತಿದ್ದೇನೆ ಎಂದು ಬರೆದು ಕೊಂಡಿದ್ದಾರೆ

ನಾನು ವಿಲಿಯಂ ಷೇಕ್ಸ್ಪಿಯರ್ನ 'ಮ್ಯಾಕ್ಬೆತ್' ನಿಂದ ಆಳವಾಗಿ ಸ್ಫೂರ್ತಿ ಪಡೆದಿದ್ದೇನೆ, ತುರ್ತು ಪರಿಸ್ಥಿತಿಯ ಮೂಲತತ್ವವು ನೈತಿಕ ನಿರ್ಬಂಧಗಳಿಂದ ಮಹತ್ವಾಕಾಂಕ್ಷೆಯು ಅನಿಯಂತ್ರಿತವಾಗಿ ಹೋದಾಗ ಉಂಟಾಗುವ ವಿನಾಶವಾಗಿದೆ, ಇದು ನಿಸ್ಸಂದೇಹವಾಗಿ ಭಾರತೀಯ ಪ್ರಜಾಪ್ರಭುತ್ವದ ಅತ್ಯಂತ ಸಂವೇದನಾಶೀಲ ಅಧ್ಯಾಯವಾಗಿದೆ ಮತ್ತು 6 ನೇ ಸೆಪ್ಟೆಂಬರ್ 20 ರಂದು ವಿಶ್ವದಾದ್ಯಂತ ಬಿಡುಗಡೆಗಾಗಿ ನಾನು ಕಾತರದಿಂದ ಕಾಯುತ್ತಿದ್ದೇನೆ. ಚಿತ್ರದಲ್ಲಿ ಮಾಜಿ ಪ್ರಧಾನಿ ಇಂದಿರಾಗಾಂಧಿ ಪಾತ್ರದಲ್ಲಿ ನಟಿಸಿರುವ ನಟಿ ತಿಳಿಸಿದ್ದಾರೆ.

ಎಕ್ಸ್ ಪೋಸ್ಟ್‌ನಲ್ಲಿ, ರನೌತ್ ಅವರು ಸ್ವತಂತ್ರ ಭಾರತದ ಕರಾಳ ಅಧ್ಯಾಯದ 50 ನೇ ವರ್ಷದ ಆರಂಭ ವನ್ನು ಗುರುತಿಸಲು ತನ್ನ ಚಲನಚಿತ್ರ ತುರ್ತು ಬಿಡುಗಡೆಯನ್ನು ಘೋಷಿಸುತ್ತಿರುವುದಾಗಿ ಹೇಳಿದ್ದಾರೆ.

ದಿ ಹಿಸ್ಟರಿ ಆಫ್ ಇಂಡಿಯನ್ ಡೆಮಾಕ್ರಸಿಯ ಅತ್ಯಂತ ವಿವಾದಾತ್ಮಕ ಸಂಚಿಕೆಯ ಸ್ಫೋಟಕ ಸಾಗಾ ಎಂದು ಅವರು ಸೇರಿಸಿದರು.

ಎಮರ್ಜೆನ್ಸಿ ಚಿತ್ರದಲ್ಲಿ ಅನುಪಮ್ ಖೇರ್, ಮಹಿಮಾ ಚೌಧರಿ, ಮಿಲಿಂದ್ ಸೋಮನ್, ಶ್ರೇಯಸ್ ತಲ್ಪಾಡೆ, ವಿಶಾಕ್ ನಾಯರ್ ಮತ್ತು ದಿವಂಗತ ಸತೀಶ್ ಕೌಶಿಕ್ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ. ಇದನ್ನು ಜೀ ಸ್ಟುಡಿಯೋಸ್ ಮತ್ತು ರಣಾವತ್ ಅವರ ಮಣಿಕರ್ಣಿಕಾ ಫಿಲಂಸ್ ನಿರ್ಮಿಸಿದೆ.

## ಅಮೆಜಾನ್‌ನ ಕಾರಿಗಾರ್ ಕಾರ್ಯಕ್ರಮ ನೆರವಿನಲ್ಲಿ ಚನ್ನಪಟ್ಟಣದ ಮೀರ್ ಅದಿಲ್ ಸ್ಪೂರ್ತಿದಾಯಕ ಪಯಣ



ಬೆಂಗಳೂರಿಗೆ ಸಮೀಪ ಇರುವ ಸುಂದರ ಪಟ್ಟಣವಾಗಿರುವ ಚನ್ನಪಟ್ಟಣದ ಹೃದಯಭಾಗದ ಪ್ರದೇಶದಲ್ಲಿನ ಗಾಳಿಯಲ್ಲಿ ಕೆತ್ತಿದ ಮರದ ಪರಿಮಳವು ಆವರಿಸಿಕೊಂಡಿದೆ. ಸಾಂಪ್ರದಾಯಿಕ ಮರದ ಆಟಿಕೆಗಳನ್ನು ತಯಾರಿಸುವ ಕಳೆದ ಎಂಟು ದಶಕಗಳಿಂದ ಪರಂಪರಾಗತ ಕರಕುಶಲತೆಯನ್ನು ತನ್ನೆಲ್ಲ ಸದಸ್ಯರಿಗೆ ಪರಂಪರಾಗತವಾಗಿ ದಾಟಿಸುತ್ತ ಬಂದಿರುವ ವಿಶಿಷ್ಟ ಕುಟುಂಬವೊಂದು ಇಲ್ಲಿ ನೆಲೆಸಿದೆ. ಈ ವಿಶಿಷ್ಟ ಕುಟುಂಬದ ಸದಸ್ಯರ ಯಶೋಗಾಥೆಯು ಅವರ ಪರಿಶ್ರಮ, ಪ್ರಗತಿ ಮತ್ತು ಅಮೆಜಾನ್ ಕಾರಿಗಾರ್ ಕಾರ್ಯಕ್ರಮದಿಂದ (ಂಟಚಿದಂಟಿ' ಏಚಿಡಿಚಿಜಿಡಿ ಠಿಡಿಂರಡಿಚಿಟ) ಗಮನಾರ್ಹವಾಗಿ ಪ್ರಭಾವಿತವಾಗಿದೆ.

ನಾವು ವಿಶ್ವ ಎಂಎಸ್‌ಎಂಇ ದಿನ 2024 ಆಚರಿಸುತ್ತಿರುವಾಗ, ಅವರ ಯಶೋಗಾಥೆ ಆಲಿಸಲು ಹೆಚ್ಚು ಅರ್ಹವಾಗಿದೆ.

ಆದಿಲ್ ಅವರ ತಾತ ಬಹಳ ವರ್ಷಗಳ ಹಿಂದೆಯೇ ಮರದ ಆಟಿಕೆ ಪರಿಕರಗಳನ್ನು ತಯಾರಿಸಲು ಪ್ರಾರಂಭಿಸಿದ್ದರು, ಅವರು ತಮ್ಮ ಕುಟುಂಬದ ಸದಸ್ಯರಿಗೆ ಆಟಿಕೆಗಳನ್ನು ತಯಾರಿಸುವ ಕೌಶಲಗಳ ಜೊತೆಗೆ ಕರಕುಶಲತೆಯ ಮೇಲಿನ ಪ್ರೀತಿಯನ್ನೂ ವರ್ಗಾಯಿಸಿದ್ದರು. ಈ ಸಂಪ್ರದಾಯವು ಕುಟುಂಬದ ಇತರ ಸದಸ್ಯರ ಮೂಲಕ ಮುಂದುವರೆಯಿತು. ಈಗ ಆದಿಲ್ ಅವರು ಆಧುನಿಕ ಕಾಲಘಟ್ಟದ ಸವಾಲುಗಳನ್ನು ಎದುರಿಸುತ್ತಲೇ ಮರದ ಆಟಿಕೆಗಳ ವಹಿವಾಟನ್ನು ಮುಂದುವರೆಸಿಕೊಂಡು ಹೋಗುತ್ತಿದ್ದಾರೆ. ಅವರು ಮಾಂಟೆಸ್ಸರಿ ಆಟಿಕೆಗಳು, ಶೈಕ್ಷಣಿಕ ಆಟಿಕೆಗಳು, ಮರದ ಸದ್ದು ಮಾಡುವ ಗಿಲಿಕೆ ಮತ್ತು ಒಂದರ ಮೇಲೊಂದು ಪೇರಿಸುವ ಉಂಗುರಗಳನ್ನು ತಯಾರಿಸುವಲ್ಲಿ ಪರಿಣತಿ ಹೊಂದಿದ್ದಾರೆ, ಇವೆಲ್ಲವುಗಳನ್ನು ಚನ್ನಪಟ್ಟಣದ ನುರಿತ ಕುಶಲಕರ್ಮಿಗಳು ಬಹಳ ಕಾಳಜಿಯಿಂದ ತಯಾರಿಸುತ್ತಾರೆ.

2021ರಲ್ಲಿ ಕೋವಿಡ್-19 ಪಿಡುಗು ಸಂಭವಿಸಿದಾಗ, ಈ ಮರದ ಆಟಿಕೆಗಳಿಗೆ ಬೇಡಿಕೆಯು ಗಮನಾರ್ಹವಾಗಿ ಕುಸಿಯಿತು, ಇದು ಅನೇಕ ಸಾಂಪ್ರದಾಯಿಕ ಕುಶಲಕರ್ಮಿಗಳ ಜೀವನೋಪಾಯಕ್ಕೇನೆ ಬೆದರಿಕೆ ಒಡ್ಡಿತು. ಆದಿಲ್ ಮತ್ತು ಅವರ ತಂಡವು ಬದುಕಲು ಮತ್ತು ಬೆಳೆಯಲು ಡಿಜಿಟಲ್ ಮಾರುಕಟ್ಟೆಯತ್ತ ಗಮನ ಹರಿಸಿತು. ಅವರು ಅಮೆಜಾನ್ನ ಕಾರಿಗಾರ್ ಕಾರ್ಯಕ್ರಮಕ್ಕೆ ಸೇರ್ಪಡೆಗೊಂಡರು. ಸಾಂಪ್ರದಾಯಿಕ ಭಾರತೀಯ ಕುಶಲಕರ್ಮಿಗಳು ಹೆಚ್ಚಿನ ಗ್ರಾಹಕರನ್ನು ತಲುಪಲು ಈ ಕಾರ್ಯಕ್ರಮವು ನೆರವಾಗುತ್ತಿದೆ.

ಕಾರಿಗಾರ್ ತಂಡದ ನೆರವಿನಿಂದ ಆದಿಲ್ ಅವರ ಮರದ ಆಟಿಕೆಗಳ ಮಾರಾಟವು ಅಮೆಜಾನ್ನಲ್ಲಿ ಸುಗಮವಾಗಿ ನಡೆಯತೊಡಗಿತು. ಆನ್ಲೈನ್ ಮಾರಾಟವನ್ನು ಮುನ್ನಡೆಸುವಲ್ಲಿ ಈ ಕಾರ್ಯಕ್ರಮ ನೀಡುವ ಬೆಂಬಲವು ತುಂಬ ಮಹತ್ವದಾಗಿತ್ತು. ಈ ಕಾರ್ಯಕ್ರಮಕ್ಕೆ ಸೇರಿದಾಗಿನಿಂದ, ಆದಿಲ್ ಅವರ ವಹಿವಾಟು ಮೂರು ಪಟ್ಟು ಬೆಳೆದಿದೆ, ಆಧುನಿಕ ಖರೀದಿದಾರರ ಜೊತೆಗೆ ಸಾಂಪ್ರದಾಯಿಕ ಕರಕುಶಲಗಳನ್ನು ಸಂಪರ್ಕಿಸುವಲ್ಲಿ ಈ ಕಾರ್ಯಕ್ರಮವು ಅದೆಷ್ಟು ಪರಿಣಾಮಕಾರಿಯಾಗಿದೆ ಎಂಬುದನ್ನು ಇದು ತೋರಿಸುತ್ತದೆ.

ಸದ್ಯಕ್ಕೆ ಆದಿಲ್ ಅವರ ವಹಿವಾಟಿನಲ್ಲಿ ಸುಮಾರು 80 ಕುಶಲಕರ್ಮಿಗಳು ದುಡಿಯುತ್ತಿದ್ದಾರೆ. ಇವರಲ್ಲಿ ಶೇ 40ರಷ್ಟು ಮಹಿಳೆಯರು ಇದ್ದಾರೆ. ಈ ಕುಶಲಕರ್ಮಿಗಳಲ್ಲಿ ಹೆಚ್ಚಿನವರು ಗ್ರಾಮೀಣ ಪ್ರದೇಶದಿಂದ ಬಂದವರಾಗಿದ್ದಾರೆ. ತಮ್ಮ ಈ ಕೆಲಸದ ಮೂಲಕವೇ ಸ್ಥಿರ ಆದಾಯ ಕಂಡುಕೊಂಡಿದ್ದಾರೆ. ಈ ವಹಿವಾಟಿನಲ್ಲಿ ಆದಿಲ್ ಅವರ ತಾಯಿ ಪ್ರಮುಖ ಪಾತ್ರವನ್ನು ನಿರ್ವಹಿಸುತ್ತಿದ್ದಾರೆ. ಪ್ರತಿಯೊಂದು ಆಟಿಕೆಯು ಉತ್ತಮ ಗುಣಮಟ್ಟದ್ದಾಗಿದೆ ಮತ್ತು ಸುರಕ್ಷಿತವಾಗಿದೆ ಎಂಬುದನ್ನು ಖಚಿತಪಡಿಸಿಕೊಳ್ಳಲು ಗುಣಮಟ್ಟ ನಿಯಂತ್ರಣ ನೋಡಿಕೊಳ್ಳುವ ಅವರು ದಾಸ್ತಾನುಗಳನ್ನೂ ನಿರ್ವಹಿಸುತ್ತಾರೆ.ಚನ್ನಪಟ್ಟಣದಲ್ಲಿ ಇರುವ ಅವರ ಅಂಗಡಿಯ ವಹಿವಾಟು ಈಗ ಭಾರತದಾದ್ಯಂತ ವಿಸ್ತರಿಸಿದೆ. ಅಮೆಜಾನ್ನ 20,000 ಪಿನ್ ಕೋಡ್ಗಳಿಗೆ ಆದಿಲ್ ಅವರ ಆಟಿಕೆಗಳು ರವಾನೆಯಾಗುತ್ತವೆ. ಇವರ ಉತ್ಪನ್ನಗಳು ವಿಶೇಷವಾಗಿ ಕರ್ನಾಟಕ, ಮಹಾರಾಷ್ಟ್ರ ಮತ್ತು ಕೇರಳದಲ್ಲಿ ಬಹು ಜನಪ್ರಿಯವಾಗಿವೆ. ಅವರು ತಮ್ಮ ಕರಕುಶಲತೆಯನ್ನು ವಿಶ್ವದಾದ್ಯಂತ ಹಂಚಿಕೊಳ್ಳುವ ಮೂಲಕ ಜಾಗತಿಕವಾಗಿಯೂ ಮಾರಾಟ ಮಾಡಬೇಕು ಎನ್ನುವುದು ಅವರ ಬಯಕೆಯಾಗಿದೆ.

ಚನ್ನಪಟ್ಟಣದ ಆಟಿಕೆಗಳು ಭಾರತದಲ್ಲಿ ಮಾತ್ರವಲ್ಲದೆ ಅಂತರರಾಷ್ಟ್ರೀಯ ಮಟ್ಟದಲ್ಲಿಯೂ ಜನಪ್ರಿಯವಾಗಿವೆ. ಅಮೆರಿಕದ ಮಾಜಿ ಪ್ರಥಮ ಮಹಿಳೆ ಮಿಷೆಲ್ ಒಬಾಮಾ ಅವರು ಕೂಡ ತಮ್ಮ ಕುಟುಂಬದ ಚಿಣ್ಣರಿಗಾಗಿ ಈ ವಿಶಿಷ್ಟ ಆಟಿಕೆಗಳನ್ನು ಖರೀದಿಸಿದ್ದರು. ಭೂತಾನ್ನ ರಾಜಕುಮಾರನು ತನ್ನ ಬಾಲ್ಯದಲ್ಲಿಯೇ ಚನ್ನಪಟ್ಟಣದ ವಿಶೇಷ ಆಟಿಕೆಗಳನ್ನು ಬಳಸಲು ಆರಂಭಿಸಿದ್ದನು. ಇದು ಇಲ್ಲಿಯ ಆಟಿಕೆಗಳ ಜಾಗತಿಕ ಆಕರ್ಷಣೆಗೆ ನಿದರ್ಶನವಾಗಿದೆ.

ತಮ್ಮ ಯಶಸ್ಸಿಗೆ ಆದಿಲ್ ಅವರು ಅಮೆಜಾನ್ನ ಸೆಲ್ಲರ್ ಫ್ಲೆಕ್ಸ್ ಮತ್ತು ಎಫ್ಬಿಎ ಕಾರ್ಯಕ್ರಮಗಳೇ ಕಾರಣ ಎಂದು ಹೇಳುತ್ತಾರೆ. ಈ ಎರಡೂ ಕಾರ್ಯಕ್ರಮಗಳು ಆಟಿಕೆಗಳ ಸಾಗಣೆ ಪ್ರಕ್ರಿಯೆಗಳನ್ನು ಗಮನಾರ್ಹವಾಗಿ ಸುಧಾರಿಸಿವೆ. ವಹಿವಾಟು ವಿಸ್ತರಣೆಗೊಳ್ಳುತ್ತಿದ್ದಂತೆಯೇ ಅವರು ಚನ್ನಪಟ್ಟಣದ ಆಟಿಕೆ ಪರಿಕರಗಳ ಕರಕುಶಲತೆಯನ್ನು ಜೀವಂತವಾಗಿಡಲು, ಕುಶಲಕರ್ಮಿಗಳಿಗೆ ಉದ್ಯೋಗಗಳನ್ನು ಒದಗಿಸಲು ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಸಂರಕ್ಷಿಸಲು ಹೆಚ್ಚಿನ ಬದ್ಧತೆ ತೋರಿದ್ದಾರೆ.ಅಮೆಜಾನ್, ದೇಶಿ ಸಾಂಪ್ರದಾಯಿಕ ಕುಶಲಕರ್ಮಿಗಳಿಗೆ ಹೇಗೆ ಸಹಾಯ ಮಾಡುತ್ತಿದೆ ಎಂಬುದಕ್ಕೆ ವಿಶ್ವ ಎಂಎಸ್‌ಎಂಇ ದಿನ ಆದಿಲ್ ಮತ್ತು ಅವರ ಕುಶಲಕರ್ಮಿಗಳ ಯಶೋಗಾಥೆಯು ಉತ್ತಮ ಉದಾಹರಣೆಯಾಗಿದೆ.



## ಜಯಶ್ರೀ.ಬಿ.ಆರ್

ಖ್ಯಾತ ಜ್ಯೋತಿಷಿ

ದೂರವಾಣಿ–9964739507

www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಯತ್ನ ಕಾರ್ಯಾನುಕೂಲ, ಮಿತ್ರರಲ್ಲಿ ಸ್ನೇಹ ವೃದ್ಧಿ, ಧಾರ್ಮಿಕ ಕಾರ್ಯಗಳಲ್ಲಿ ಭಾಗಿ, ಪರರಿಗೆ ಉಪಕಾರ ಮಾಡುವಿರಿ.

**ವೃಷಭ:** ಕುಟುಂಬ ಸೌಖ್ಯ, ಸಂತಾನ ಪ್ರಾಪ್ತಿ, ಯಾರನ್ನು ಹೆಚ್ಚಾಗಿ ನಂಬಬೇಡಿ, ಭಯಭೀತಿ ನಿವಾರಣೆ.

**ಮಿಥುನ:** ಪ್ರಭಾವಿ ವ್ಯಕ್ತಿಗಳ ಭೇಟಿ, ಭೂ ಲಾಭ, ಪ್ರಜಾಸೇವೆಯಲ್ಲಿ ಭಾಗಿ, ಮಹಿಳೆಯರಿಗೆ ವಸ್ತ್ರಾಭರಣ ಪ್ರಾಪ್ತಿ, ಮನಶಾಂತಿ.

**ಕಟಕ:** ಸ್ವಲ್ಪ ಹಣ ಬಂದರೂ ಉಳಿಯುವುದಿಲ್ಲ, ಆರೋಗ್ಯ ವೃದ್ಧಿ, ವಾಹನ ಖರೀದಿ, ವಿವಾಹ ಯೋಗ, ಮಾತಾ ಪಿತ್ರರಲ್ಲಿ ಪ್ರೀತಿ.

**ಸಿಂಹ:** ವ್ಯಾಪಾರದಲ್ಲಿ ನಿರೀಕ್ಷಿತ ಆದಾಯ, ದ್ರವ್ಯ ಲಾಭ, ವಿದ್ಯಾಭ್ಯಾಸಕ್ಕಾಗಿ ದೂರ ಪ್ರಯಾಣ.

**ಕನ್ಯಾ:** ರಾಜ ಸನ್ಮಾನ, ವಾಹನ ಖರೀದಿ, ಕುಟುಂಬದಲ್ಲಿ ಪ್ರೀತಿ ವಾತ್ಸಲ್ಯ, ಸುಖ ಭೋಜನ, ಅಮೂಲ್ಯ ವಸ್ತುಗಳ ಖರೀದಿ.

**ತುಲಾ:** ಮಾನಸಿಕ ಅಶಾಂತಿ, ವಿಪರೀತ ವ್ಯಸನ, ಸಾಮಾನ್ಯ ಸೌಖ್ಯಕ್ಕೆ ದಕ್ಕೆ, ವ್ಯಾಪಾರಕ್ಕೆ ದೃಷ್ಟಿ ದೋಷ.

**ವೃಶ್ಚಿಕ:** ಉತ್ತಮ ಪ್ರಗತಿ, ಶುಭ ಕಾರ್ಯಗಳಲ್ಲಿ ಭಾಗಿ, ಸ್ಥಳ ಬದಲಾವಣೆ, ಶತ್ರುಗಳಿಂದ ತೊಂದರೆ.

**ಧನಸ್ಸು:** ಕೆಲಸ ಕಾರ್ಯಗಳಲ್ಲಿ ಪ್ರಗತಿ, ದೇವತಾ ಕಾರ್ಯಗಳಲ್ಲಿ ಭಾಗಿ, ಶೀಘ್ರದಲ್ಲಿ ಶುಭ ಸುದ್ದಿ, ಉತ್ತಮ ಪ್ರಗತಿ, ಧನ ಲಾಭ.

**ಮಕರ:** ಆದಾಯಕ್ಕಿಂತ ಖರ್ಚು ಜಾಸ್ತಿ, ಭೂ ವ್ಯವಹಾರಗಳಲ್ಲಿ ಅಲ್ಪ ಲಾಭ, ಶತ್ರುಭಾದೆ, ಉದ್ಯೋಗದಲ್ಲಿ ಬಡ್ತಿ, ಸುಖ ಭೋಜನ.

**ಕುಂಭ:** ಸಾರ್ವಜನಿಕ ಕ್ಷೇತ್ರದಲ್ಲಿ ಮನ್ನಣೆ, ಆರ್ಥಿಕ ಪರಿಸ್ಥಿತಿ ಬಿಕ್ಕಟ್ಟು, ಮನಕ್ಲೇಶ, ಅಕಾಲ ಭೋಜನ, ಕೆಲಸದಲ್ಲಿ ಒತ್ತಡ.

**ಮೀನ:** ಸ್ತ್ರೀ ಸೌಖ್ಯ, ಅನಿರೀಕ್ಷಿತ ಖರ್ಚು, ಪುಣ್ಯ ಕ್ಷೇತ್ರ ದರ್ಶನ, ಆಲಸ್ಯ ಮನೋಭಾವ, ಆಕಸ್ಮಿಕ ಲಾಭ, ಶ್ರಮಕ್ಕೆ ತಕ್ಕ ಫಲ.

## ಡ್ರಗ್ ದುರುಪಯೋಗ, ಅಕ್ರಮ ಸಾಗಾಣಿಕೆ ವಿರುದ್ಧದ ಅಂತಾರಾಷ್ಟ್ರೀಯ ದಿನ

ಜೂನ್ 26 ರಂದು ಯುನೈಟೆಡ್ ನೇಷನ್ಸ್ ಘೋಷಿಸಿದಂತೆ ಡ್ರಗ್ ದುರುಪಯೋಗ ಮತ್ತು ಅಕ್ರಮ ಸಾಗಣೆ ವಿರುದ್ಧ ಅಂತರರಾಷ್ಟ್ರೀಯ ದಿನವನ್ನು ಆಚರಿಸಲಾಗುತ್ತದೆ. ಮಾದಕ ವ್ಯಸನವನ್ನು ಪರಿಶೀಲಿಸಲು ಮತ್ತು ಮಾದಕವಸ್ತು ಕಳ್ಳಸಾಗಣೆಯನ್ನು ತಡೆಗಟ್ಟಲು ಕ್ರಮಗಳು ಮತ್ತು ಸಹಕಾರವನ್ನು ನಿರ್ಧರಿಸಲು ವಾರ್ಷಿಕವಾಗಿ ದಿನವನ್ನು ಆಚರಿಸಲಾಗುತ್ತದೆ. ಮಾದಕ ವ್ಯಸನದಿಂದ ಬಳಲುತ್ತಿರುವವರಿಗೆ ಪುನರ್ವಸತಿ ಕಲ್ಪಿಸಲು ಮತ್ತು ಯಾವುದೇ ಮಾದಕ ದ್ರವ್ಯಗಳನ್ನು ಸೇವಿಸುವುದಿಲ್ಲ ಅಥವಾ ಕಾನೂನುಬಾಹಿರವಾಗಿ ವ್ಯಾಪಾರ ಮಾಡದಂತೆ ಖಚಿತಪಡಿಸಿಕೊಳ್ಳಲು ಒಟ್ಟಾಗಿ ಕೆಲಸ ಮಾಡುವ ವ್ಯಕ್ತಿಗಳು, ಸಮುದಾಯಗಳು ಮತ್ತು ಸಂಸ್ಥೆಗಳಿಂದ ಈ ದಿನವನ್ನು ಬೆಂಬಲಿಸಲಾಗುತ್ತದೆ. ಡ್ರಗ್ ದುರುಪಯೋಗದ ಕುರಿತು ಸಂಪನ್ಮೂಲಗಳು ಅಥವಾ ಮಾಹಿತಿಯನ್ನು ಹಂಚಿಕೊಳ್ಳುವಷ್ಟು ಸರಳವಾದದ್ದು ಯಾರಾದರೂ ಹಾನಿಕಾರಕ ಔಷಧಿಗಳ ಕಡೆಗೆ ತಿರುಗುವುದನ್ನು ತಡೆಯಬಹುದು. ಇದು ಜೀವನ-ದೃಢೀಕರಣದ ಕ್ರಮವಾಗಿದ್ದು, ಪೀಳಿಗೆಯ ಜನರು ಮಾದಕ ವ್ಯಸನದಿಂದ ಉಂಟಾಗುವ ದೀರ್ಘಕಾಲೀನ ಹಾನಿಯನ್ನು ತಡೆಯಬಹುದು. ಡ್ರಗ್ ದುರುಪಯೋಗ ಮತ್ತು ಅಕ್ರಮ ಕಳ್ಳಸಾಗಣೆ ವಿರುದ್ಧ ಅಂತರರಾಷ್ಟ್ರೀಯ ದಿನವು ಅಂತರರಾಷ್ಟ್ರೀಯ ಮಟ್ಟದಲ್ಲಿ ನಡೆಯುವ ವಿಶ್ವಸಂಸ್ಥೆಯ ವೀಕ್ಷಣೆಯಾಗಿದೆ. ಈ ದಿನದಂದು, ಮಾದಕ ದ್ರವ್ಯ ಸೇವನೆ ಮತ್ತು ಅಕ್ರಮ ಮಾದಕ ದ್ರವ್ಯ ವ್ಯಾಪಾರದ ವಿರುದ್ಧ ಪ್ರತಿಪಾದಿಸುವುದು ಕಾರ್ಯಸೂಚಿಯಾಗಿದೆ. ಇದನ್ನು 1989 ರಿಂದ ವಾರ್ಷಿಕವಾಗಿ ಆಚರಿಸಲಾಗುತ್ತದೆ. ದಿನಾಂಕ ಜೂನ್ 26 ರಂದು ಲಿನ್ ಜೆಕ್ಸು ಅವರು ಗುವಾಂಗ್ಡಾಂಗ್ನ ಹ್ಯೂಮೆನ್ನಲ್ಲಿ ಅಫೀಮು ವ್ಯಾಪಾರವನ್ನು ಕಿತ್ತುಹಾಕಿದ ನೆನಪಿಗಾಗಿ. ಈ ಘಟನೆಯು ಜೂನ್ 25, 1839 ರಂದು ಚೀನಾದಲ್ಲಿ ಮೊದಲ ಅಫೀಮು ಯುದ್ಧದ ಕೆಲವೇ ದಿನಗಳ ಮೊದಲು ನಡೆಯಿತು. ವಿಶ್ವಸಂಸ್ಥೆಯು ಡಿಸೆಂಬರ್ 7 1987 ರಂದು ವೀಕ್ಷಣೆಯನ್ನು ಸ್ಥಾಪಿಸಿತು. ಜೂನ್ 26, 1987 ರಂದು, ವಿಯೆನ್ನಾದಲ್ಲಿ ಡ್ರಗ್ ದುರುಪಯೋಗ ಮತ್ತು ಕಾನೂನುಬಾಹಿರ ಕಳ್ಳಸಾಗಣೆ ಕುರಿತ ಅಂತರರಾಷ್ಟ್ರೀಯ ಸಮ್ಮೇಳನದಲ್ಲಿ, ಮಾದಕ ದ್ರವ್ಯ ಸೇವನೆ ಮತ್ತು ಅಕ್ರಮ ಕಳ್ಳಸಾಗಣೆ ವಿರುದ್ಧದ ಹೋರಾಟದ ಸ್ಮರಣಾರ್ಥ ವಾರ್ಷಿಕ ದಿನವನ್ನು ಆಚರಿಸಬೇಕೆಂದು ಶಿಫಾರಸು ಮಾಡಲಾಯಿತು. ಅಕ್ರಮ ಕಳ್ಳಸಾಗಣೆ ಮತ್ತು ಮಾದಕ ವ್ಯಸನದ ವಿರುದ್ಧ ಸಕ್ರಿಯ ಪ್ರಚಾರದ ವಿರುದ್ಧ ಕಟ್ಟುನಿಟ್ಟಿನ ನಿರ್ಬಂಧಗಳ ಹೊರತಾಗಿಯೂ, ಎರಡೂ ಪ್ರವರ್ಧಮಾನಕ್ಕೆ ಬರುತ್ತಿವೆ. ವಿಶ್ವಸಂಸ್ಥೆಯ 2007 ರ ವಿಶ್ವ ಔಷಧ ವರದಿಯು ಅಕ್ರಮ ಮಾದಕವಸ್ತು ಕಳ್ಳಸಾಗಣೆಯಿಂದ ಬರುವ ಆದಾಯವು 300 ಶತಕೋಟಿ ಎಂದು ಹೇಳಿದೆ.

ಮಾದಕ ವ್ಯಸನ ಮತ್ತು ಅಕ್ರಮ ಸಾಗಾಟದ ವಿರುದ್ಧ ಅಂತಾರಾಷ್ಟ್ರೀಯ ದಿನದಂದು, ಪ್ರಚಾರಗಳು, ರ್ಯಾಲಿಗಳು ಮತ್ತು ಪೋಸ್ಟರ್ ತಯಾರಿಕೆಯು ಮಾದಕ ದ್ರವ್ಯ ಸೇವನೆಯ ಬಗ್ಗೆ ಜಾಗೃತಿ ಮೂಡಿಸುವಲ್ಲಿ ಸಮುದಾಯವನ್ನು ತೊಡಗಿಸಿಕೊಳ್ಳುವ ಅತ್ಯಂತ ಸಾಮಾನ್ಯ ಮಾರ್ಗವಾಗಿದೆ. ವಿಶ್ವ ಔಷಧ ವರದಿಯ ಅಂಕಿಅಂಶಗಳನ್ನು ಸಹ ಈ ದಿನದಲ್ಲಿ ಚರ್ಚಿಸಲಾಗಿದೆ ಮತ್ತು ಸಮಸ್ಯೆಗಳನ್ನು ಹೇಗೆ ನಿವಾರಿಸುವುದು ಎಂಬುದರ ಕುರಿತು ಸರ್ಕಾರಗಳಿಗೆ ಪ್ರಾಯೋಗಿಕ ಪರಿಹಾರಗಳನ್ನು ಒದಗಿಸುತ್ತದೆ.

# ಪ್ರತಿ ಪಕ್ಷದ ನಾಯಕರಾಗಿ ರಾಹುಲ್ ಗಾಂಧಿ ಆಯ್ಕೆ

**ದೆಹಲಿ:** ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಅವರನ್ನು ಲೋಕಸಭೆಯಲ್ಲಿ ಪ್ರತಿ ಪಕ್ಷದ ನಾಯಕರನ್ನಾಗಿ ನೇಮಿಸಲಾಗಿದೆ ಎಂದು ಪಕ್ಷದ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಪ್ರತಿ ಪಕ್ಷಗಳ ನಾಯಕರ ಸಭೆಯ ನಂತರ ಪ್ರಕಟಿಸಿದ್ದಾರೆ ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷರು ಸ್ಪೀಕರ್ ಭರ್ತೃಹರಿ ಮಹತಾಬ್ ಅವರಿಗೆ ಅವರಿಗೆ ಪತ್ರ ಬರೆದು ರಾಹುಲ್ ಗಾಂಧಿ ಅವರನ್ನು ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕರನ್ನಾಗಿ ನೇಮಕ ಮಾಡುವ ನಿರ್ಧಾರವನ್ನು ತಿಳಿಸಲಾಗಿದೆ.

ಇತರ ಪದಾಧಿಕಾರಿಗಳನ್ನು ನಂತರ ನಿರ್ಧರಿಸಲಾಗುವುದು ಎಂದು ವೇಣುಗೋಪಾಲ್ ಹೇಳಿದ್ದಾರೆ.



ಜೂನ್ 9 ರಂದು ನಡೆದ ಕಾಂಗ್ರೆಸ್ ಕಾರ್ಯಕಾರಿ ಸಮಿತಿ (ಸಿಡಬ್ಲ್ಯುಸಿ) ರಾಹುಲ್ ಗಾಂಧಿ ಅವರನ್ನು ಲೋಕಸಭೆಯಲ್ಲಿ ಪ್ರತಿ ಪಕ್ಷದ ನಾಯಕರನ್ನಾಗಿ ನೇಮಿಸುವ ನಿರ್ಣಯವನ್ನು ಅಂಗೀಕರಿಸಿತ್ತು. ಸಿಡಬ್ಲ್ಯುಸಿ ಸಭೆಯ ನಂತರ, ರಾಹುಲ್ ಗಾಂಧಿ ಅವರು ನಿರ್ಧಾರ ತೆಗೆದುಕೊಳ್ಳುವ ಮೊದಲು ಯೋಚಿಸಲು ಸ್ವಲ್ಪ ಸಮಯ ಬೇಕು ಎಂದು ಕೋರಿದ್ದರು.

18 ನೇ ಲೋಕಸಭೆಯ ಸ್ಪೀಕರ್ ಹುದ್ದೆಗಾಗಿ ಮತ ದಾನ ನಡೆಯುವ ಕೆಲವೇ ಗಂಟೆಗಳ ಮೊದಲು ಈ ನಿರ್ಧಾರವನ್ನು ಪ್ರಕಟಿಸಲಾಗಿದೆ. ಸಂಪ್ರದಾಯದಂತೆ ಪ್ರತಿ ಪಕ್ಷದ ಸದಸ್ಯರೊಬ್ಬರಿಗೆ ಉಪಸಭಾಪತಿ ಹುದ್ದೆ ನೀಡಲು ಬಿಜೆಪಿ ನಿರಾಕರಿಸಿದ ಬಳಿಕ ಕಾಂಗ್ರೆಸ್ ಮತ್ತು ಬಿಜೆಪಿ ಬಣದ ನಡುವೆ ಮತ ಸಮರ ಶುರುವಾಗಿದೆ.

# ನೀಟ್ ಪರೀಕ್ಷೆಯನ್ನು ಮರು ನಡೆಸಲು ಒತ್ತಾಯಿಸಿದ ಸಂಸದ ಪಪ್ಪು ಯಾದವ್

**ನವದೆಹಲಿ:** ಸಂಸದ ಪಪ್ಪು ಯಾದವ್ ಪ್ರಮಾಣ ವಚನದ ಕೊನೆಯಲ್ಲಿ ನೀಟ್ ಪರೀಕ್ಷೆಯನ್ನು ಮರು ನಡೆಸುವಂತೆ ಒತ್ತಾಯಿಸಿದರು.



ಬಿಹಾರದ ಪೂರ್ಣಿಯಾ ಕ್ಷೇತ್ರದಿಂದ ಗೆದ್ದಿರುವ ಪಪ್ಪು ಯಾದವ್ ಪಪ್ಪು ಯಾದವ್ ಅವರು ಭೋಜ್ಪುರಿ ಭಾಷೆಯಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

ಈ ವೇಳೆ ರೀನೀಟ್ ಎಂಬ ಟೀಶರ್ಟ್ ಧರಿಸಿರುವುದು ಕಂಡುಬಂತು. ಪ್ರಣಾಮ್ ಪೂರ್ಣಿಯಾ, ಪ್ರಣಾಮ್ ಬಿಹಾರ್, ಸಲಾಮ್ ಬಿಹಾರ್, ಜೋಹರ್ ಬಿಹಾರ್ ಎಂದು ಹೇಳುತ್ತಾ ಪ್ರಮಾಣ ವಚನ ಸ್ವೀಕರಿಸಿದ್ದಾರೆ.

ತಮ್ಮ ಪ್ರಮಾಣ ವಚನದ ಕೊನೆಯಲ್ಲಿ ಅವರಿಗೆ ಧನ್ಯವಾದ ಅರ್ಪಿಸಿ ನೀಟ್ ಪರೀಕ್ಷೆಯನ್ನು ಮರು ನಡೆಸುವಂತೆ ಒತ್ತಾಯಿಸಿದರು. ಅಲ್ಲಿಯೂ ನಿಂತು ಬಿಹಾರಕ್ಕೆ ವಿಶೇಷ ಸ್ಥಾನಮಾನ ನೀಡುವಂತೆ ಒತ್ತಾಯಿಸಿದರು. ಸೀಮಾಂಚಲ್ ಜಿಂದಾಬಾದ್, ಮಾನವತಾವಾದ ಚಿರಾಯುವಾಗಲಿ ಎಂಬ ಘೋಷಣೆಗಳನ್ನು ಕೂಗಿದರು.

ಈ ವೇಳೆ ಹಂಗಾಮಿ ಸ್ಪೀಕರ್ ಮತ್ತು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಘೋಷಣೆಗಳನ್ನು ನಿಲ್ಲಿಸುವಂತೆ ಕೇಳಿಕೊಂಡರು. ಆಗ ಪಪ್ಪು ಯಾದವ್, ನೀವು ಅನುಗ್ರಹದಿಂದ ಬದುಕಬೇಕು. ನಾನು ಸ್ವತಂತ್ರವಾಗಿ ಗೆದ್ದೆ. ನಾನು 6 ಬಾರಿ ಸಂಸದನಾಗಿದ್ದೇನೆ. ನನಗೆ ಕಲಿಸುವಿರಾ ಎಂದು ಹೇಳಿದ್ದಾರೆ.



# ಜಿಮ್ ಮಾಡುವಾಗ ಆಯತಪ್ಪಿ ಕಟ್ಟಡದಿಂದ ಬಿದ್ದ ಮಹಿಳೆ ಸಾವು

**ಜಕಾರ್ತ:** ಟ್ರೆಡ್‌ಮಿಲ್‌ನಲ್ಲಿ ಜಿಮ್ ಮಾಡುತ್ತಿದ್ದಾಗ ಆಯತಪ್ಪಿ ಮೂರನೇ ಮಹಡಿಯ ಕಿಟಕಿಯಿಂದ ಕೆಳಗೆ ಬಿದ್ದು ಮಹಿಳೆಯೊಬ್ಬರು ಮೃತಪಟ್ಟಿರುವ ಘಟನೆ ಇಂಡೋನೇಶ್ಯಾದಲ್ಲಿ ವರದಿಯಾಗಿದೆ. ಕಟ್ಟಡವೊಂದರ 3ನೇ ಮಹಡಿಯಲ್ಲಿರುವ ಜಿಮ್ನಲ್ಲಿ ತೆರೆದ ಕಿಟಕಿಯ ಬಳಿ 22 ವರ್ಷದ ಮಹಿಳೆ ಟ್ರೆಡ್ಮಿಲ್(ಚಲಿಸುವ ಸಾಧನ)ನಲ್ಲಿ ದೈಹಿಕ ಕಸರತ್ತು ಮಾಡುತ್ತಿದ್ದಾಗ ಆಯತಪ್ಪಿ ಕಿಟಕಿಯಿಂದ ಕೆಳಗೆ ಬೀಳುತ್ತಿರುವ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ. ತಕ್ಷಣ ತುರ್ತು ಸೇವಾಪಡೆ ಮಹಿಳೆಯನ್ನು ಆಸ್ಪತ್ರೆಗೆ ಕರೆದೊಯ್ದರೂ ತಲೆಗೆ ತೀವ್ರ ಏಟು ಬಿದ್ದ ಕಾರಣ ಆಸ್ಪತ್ರೆಗೆ ದಾಖಲಿಸುವ ಮುನ್ನವೇ ಮೃತಪಟ್ಟಿದ್ದಾರೆ ಎಂದು ಮೂಲಗಳನ್ನು ಉಲ್ಲೇಖಿಸಿ 'ನ್ಯೂಯಾರ್ಕ್ ಪೋಸ್ಟ್' ವರದಿ ಮಾಡಿದೆ.



# ಪಾಕಿಸ್ತಾನದಲ್ಲಿ ಕಾಣಿಸಿಕೊಂಡಿದೆ ಕಾಂಗೋ ವೈರಸ್



**ಪಾಕಿಸ್ತಾನ:** ಪಾಕಿಸ್ತಾನದ ಕ್ವೆಟ್ಟಾದಲ್ಲಿ ಕಾಂಗೋ ವೈರಸ್ನ ಹೊಸ ಪ್ರಕರಣ ಬೆಳಕಿಗೆ ಬಂದಿದೆ. 32 ವರ್ಷದ ವ್ಯಕ್ತಿಗೆ ಸೋಂಕು ತಗುಲಿದ್ದು, ಫಾತಿಮಾ ಜಿನ್ನಾ ಆಸ್ಪತ್ರೆಯ ಪ್ರತ್ಯೇಕ ವಾರ್ಡ್ಗೆ ದಾಖಲಿಸಲಾಗಿದೆ. ಪಾಕಿಸ್ತಾನದಲ್ಲಿ ಈ ಹಿಂದೆ ಕಾಂಗೋ ವೈರಸ್ನಿಂದ ರೋಗಿಯೊಬ್ಬರು ಸಾವನ್ನಪ್ಪಿದ ಪ್ರಕರಣವೂ ಬೆಳಕಿಗೆ ಬಂದಿತ್ತು.ಅಷ್ಟಕ್ಕೂ ಪಾಕಿಸ್ತಾನದಲ್ಲಿ ಆತಂಕಕ್ಕೆ ಕಾರಣವಾಗಿರುವ ಈ ಕಾಯಿಲೆ ಯಾವುದು ಇದರ ಲಕ್ಷಣಗಳೇನು ಎಂಬುದನ್ನೆಲ್ಲ ನೋಡೋಣ. ಕ್ರಿಮಿಯನ್ ಕಾಂಗೊ ಹೆಮರಾಜಿಕ್ ಜ್ವರ ಒಂದು ರೀತಿಯ ವೈರಲ್ ಫೀವರ್. ಸಾಮಾನ್ಯವಾಗಿ ಕೀಟಗಳ ಮೂಲಕ ಹರಡುತ್ತದೆ. ಕೀಟವನ್ನು ಸಾಯಿಸಿದಾಗ ವೈರಸ್ ನಮ್ಮ ರಕ್ತಪ್ರವಾಹಕ್ಕೆ ಪ್ರವೇಶಿಸುತ್ತದೆ. ಸಂಪರ್ಕದ ಮೂಲಕವೂ ಇದು ಹರಡಬಹುದು. ಈ ವೈರಸ್ ಸಾಂಕ್ರಾಮಿಕವಾಗಿರುವುದರಿಂದ ಬಹಳ ಅಪಾಯಕಾರಿ. ಈ ಕಾಯಿಲೆಯಿಂದ ಸಂಭವಿಸುವ ಮರಣ ಪ್ರಮಾಣವು 10 – 40 ಪ್ರತಿಶತದಷ್ಟಿದೆ.

ಕಾಂಗೋ ವೈರಸ್ ಆಫ್ರಿಕಾ, ಬಾಲ್ಕನ್ಸ್, ಮಧ್ಯಪ್ರಾಚ್ಯ ಮತ್ತು ಏಷ್ಯಾದಾದ್ಯಂತ ಸ್ಥಳೀಯ ರೋಗವಾಗಿದೆ. ಇದನ್ನು ಮೊದಲು ಕ್ರಿಮಿಯನ್ ಪರ್ಯಾಯ ದ್ವೀಪದಲ್ಲಿ 1944 ರಲ್ಲಿ ಕಂಡುಹಿಡಿಯಲಾಯಿತು. ಆಗ ಇದಕ್ಕೆ ಕ್ರಿಮಿಯನ್ ಹೆಮರಾಜಿಕ್ ಜ್ವರ ಎಂದು ಹೆಸರಿಸಲಾಯಿತು. ನಂತರ ಇದಕ್ಕೆ ಕಾಂಗೋ ಎಂಬ ಹೆಸರು ಬಂದಿದೆ.

**ಕಾಂಗೋ ಜ್ವರದ ಲಕ್ಷಣಗಳು:** ಕಾಂಗೋ ವೈರಸ್ ಸೋಂಕಿನಿಂದ ಹಠಾತ್ ಜ್ವರ ಕಾಣಿಸಿಕೊಳ್ಳುತ್ತದೆ. ಸ್ನಾಯು ನೋವು, ತಲೆತಿರುಗುವಿಕೆ, ಕುತ್ತಿಗೆ ನೋವು, ಬೆನ್ನು ನೋವು, ತಲೆನೋವು, ಕಣ್ಣು ನೋವು ಮತ್ತು ಫೋಟೊಫೋಬಿಯಾ ಕೂಡ ಉಂಟಾಗಬಹುದು.

# ಕೀನ್ಯಾ ಸಂಸತ್ತಿಗೆ ನುಗ್ಗಲು ಯತ್ನ: ಪೊಲೀಸರಿಂದ ದಾಳಿ

**ನೈರೋಬಿ:** ಮಂಗಳವಾರಕೀನ್ಯಾಸಂಸತ್ತಿಗೆ ಮುತ್ತಿಗೆ ಹಾಕಲು ಪ್ರಯತ್ನಿಸುತ್ತಿದ್ದ ಪ್ರತಿಭಟನಾಕಾರರ ಮೇಲೆ ಪೊಲೀಸರು ಗುಂಡು ಹಾರಿಸಿದ್ದು ಕನಿಷ್ಠ ಐವರು ಪ್ರತಿಭಟನಾಕಾರರು ಸಾವಿಗೀಡಾಗಿದ್ದಾರೆ. ಪೊಲೀಸ್ ಫೈರಿಂಗ್ನಲ್ಲಿ ಹಲವಾರು ಮಂದಿ ಗಾಯಗೊಂಡಿದ್ದು ಸಂಸತ್ತಿನ ಕಟ್ಟಡದ ವಿಭಾಗಗಳು ಸುಟ್ಟುಹೋಗಿವೆ. ಪ್ರತಿಭಟನಾಕಾರರು ಮಣಿಯದೆ ಸಂಸತ್ತಿನ ಆವರಣಕ್ಕೆ ಮುತ್ತಿಗೆ ಹಾಕುವ ವೇಳೆ ಪೊಲೀಸರನ್ನೇ ಓಡಿಸಿದ್ದಾರೆ. ಸಂಸತ್ ಕಟ್ಟಡದ ಒಳಗಿನಿಂದ ಬೆಂಕಿ ಹೊತ್ತಿ ಉರಿಯುತ್ತಿರುವುದು ವಿಡಿಯೊದಲ್ಲಿ ಕಾಣಿಸಿದೆ. ಅಶ್ರುವಾಯು ಮತ್ತು ಜಲ ಫಿರಂಗಿ ಬಳಸಿ ಜನರನ್ನು ಚದುರಿಸಲು ವಿಫಲವಾದ ನಂತರ ಪೊಲೀಸರು ಗುಂಡು ಹಾರಿಸಿದ್ದಾರೆ.



ಸಂಸತ್ತಿನ ಹೊರಗೆ ಕನಿಷ್ಠ ಐದು ಪ್ರತಿಭಟನಾಕಾರರ ಶವಗಳು ಸಿಕ್ಕಿವೆ ಎಂದು ರಾಯಿಟರ್ಸ್ ವರದಿ ಮಾಡಿದ್ದಾರೆ. ಕನಿಷ್ಠ 10 ಮಂದಿಯನ್ನು ಗುಂಡಿಕ್ಕಿ ಕೊಲ್ಲಲಾಗಿದೆ ಎಂದು ಆರೋಗ್ಯ ಕಾರ್ಯಕರ್ತ ವಿವಿಯನ್ ಅಚಿಸ್ಟಾ ಹೇಳಿದ್ದಾರೆ. 50 ಕ್ಕೂ ಹೆಚ್ಚು ಜನರು ಗುಂಡೇಟಿನಿಂದ ಗಾಯಗೊಂಡಿದ್ದಾರೆ ಎಂದು ಇನ್ನೊಬ್ಬ ಆರೋಗ್ಯ ಕಾರ್ಯಕರ್ತ ರಿಚರ್ಡ್ ನ್ಗುಮೊ ಹೇಳಿದ್ದಾರೆ. ಅವರು ಗಾಯಗೊಂಡ ಇಬ್ಬರು ಪ್ರತಿಭಟನಾಕಾರರನ್ನು ಸಂಸತ್ತಿನ ಹೊರಗೆ ಆಂಬ್ಯುಲೆನ್ಸ್ ಕರೆದೊಯ್ಯುತ್ತಿದ್ದರು.

ನಾವು ಸಂಸತ್ತನ್ನು ಮುಚ್ಚಲು ಬಯಸುತ್ತೇವೆ. ಪ್ರತಿಯೊಬ್ಬ ಸಂಸದರು ಕೆಳಗಿಳಿದು ರಾಜೀನಾಮೆ ನೀಡಬೇಕು, ನಮಗೆ ಹೊಸ ಸರ್ಕಾರ ಬೇಕು ಎಂದು ಸಂಸತ್ತಿಗೆ ಪ್ರವೇಶಿಸಲು ಪ್ರಯತ್ನಿಸುತ್ತಿರುವ ಪ್ರತಿಭಟನಾಕಾರ ಡೇವಿಸ್ ತಫಾರಿ ಹೇಳಿರುವುದಾಗಿ ರಾಯಿಟರ್ಸ್ ವರದಿ ಮಾಡಿದೆ.

ದೇಶಾದ್ಯಂತ ಹಲವಾರು ಇತರ ನಗರಗಳು ಮತ್ತು ಪಟ್ಟಣಗಳಲ್ಲಿ ಪ್ರತಿಭಟನೆಗಳು ಮತ್ತು ಘರ್ಷಣೆಗಳು ನಡೆದವು.

ಸಂಸತ್ತು ಹಣಕಾಸು ಮಸೂದೆಯನ್ನು ಅನುಮೋದಿಸಿದ್ದು, ಅದನ್ನು ಸಂಸದರ ಮೂರನೇ ಅಂಗೀಕಾರಕ್ಕೆ ವರ್ಗಾಯಿಸಿತು. ಮುಂದಿನ ಹಂತವು ಶಾಸನವನ್ನು ರಾಷ್ಟ್ರಪತಿಗಳಿಗೆ ಸಹಿ ಮಾಡಲು ಕಳುಹಿಸುವುದು. ಅವರು ಯಾವುದೇ ಆಕ್ಷೇಪಣೆಗಳನ್ನು ಹೊಂದಿದ್ದರೆ ಅದನ್ನು ಸಂಸತ್ತಿಗೆ ಹಿಂತಿರುಗಿಸಬಹುದು.

# ಡಕ್ವರ್ತ್ ಲೂಯಿಸ್ ನಿಯಮದ ಸಹ ಸೃಷ್ಟಿಕರ್ತ 'ಫ್ರಾಂಕ್ ಡಕ್ವರ್ತ್' ಇನ್ನಿಲ್ಲ



**ದೆಹಲಿ:** ಮಳೆ ಪೀಡಿತ ಕ್ರಿಕೆಟ್ ಪಂದ್ಯಗಳ ಫಲಿತಾಂಶಗಳನ್ನು ನಿರ್ಧರಿಸಲು ಬಳಸುವ ಡಕ್ವರ್ತ್-ಲೂಯಿಸ್-ಸ್ಟರ್ನ್ ವಿಧಾನದ ಆವಿಷ್ಕಾರಕರಲ್ಲಿ ಒಬ್ಬರಾದ ಫ್ರಾಂಕ್ ಡಕ್ವರ್ತ್ ಜೂನ್ 21 ರಂದು ತಮ್ಮ 84ನೇ ವಯಸ್ಸಿನಲ್ಲಿ ನಿಧನರಾಗಿದ್ದಾರೆ. ಡಕ್ವರ್ತ್, ಸಹ ಸಂಖ್ಯಾಶಾಸ್ತ್ರಜ್ಞ ಟೋನಿ ಲೂಯಿಸ್ ಅವರೊಂದಿಗೆ ಮಳೆ ಅಥವಾ ಇತರ ಅಂಶಗಳಿಂದ ಅಡ್ಡಿಪಡಿಸಿದ ಸೀಮಿತ ಓವರ್ಗಳ ಪಂದ್ಯಗಳಲ್ಲಿ ನ್ಯಾಯಯುತ ಫಲಿತಾಂಶವನ್ನ ಖಚಿತಪಡಿಸಿಕೊಳ್ಳಲು ಡಿಎಲ್ ಎಸ್ ವಿಧಾನವನ್ನ ರೂಪಿಸಿದರು. ಈ ವಿಧಾನವು ಮೊದಲು 1997ರಲ್ಲಿ ಅಂತರರಾಷ್ಟ್ರೀಯ ಕ್ರಿಕೆಟ್ನಲ್ಲಿ ಕಾಣಿಸಿಕೊಂಡಿತು ಮತ್ತು 2001ರಲ್ಲಿ ಅಂತರರಾಷ್ಟ್ರೀಯ ಕ್ರಿಕೆಟ್ ಕೌನ್ಸಿಲ್ ಅಧಿಕೃತವಾಗಿ ಅಳವಡಿಸಿಕೊಂಡಿತು. ಅಂದ್ಹಾಗೆ, ಅಫ್ಘಾನಿಸ್ತಾನ ಮತ್ತು ಬಾಂಗ್ಲಾದೇಶ ನಡುವಿನ 2024ರ ಟಿ20 ವಿಶ್ವಕಪ್ 2024ರ ಸೂಪರ್ 8 ಪಂದ್ಯವು ಮಳೆಯಿಂದಾಗಿ ಡಕ್ವರ್ತ್-ಲೂಯಿಸ್ ನಿಯಮಗಳನ್ನ ಅನ್ವಯಿಸಿತು.

# ವಿಕಿಲೀಕ್ಸ್ ಸ್ಥಾಪಕ ಅಸ್ಸಾಂಜ್ ಜೈಲಿಂದ ಬಿಡುಗಡೆ



**ಲಂಡನ್:** ಅಮೆರಿಕದ ರಕ್ಷಣಾ ರಹಸ್ಯಗಳನ್ನು ಬಹಿರಂಗಪಡಿಸಿದ ಆರೋಪ ಎದುರಿಸುತ್ತಿದ್ದ ವಿಕಿಲೀಕ್ಸ್ ಸಂಸ್ಥೆ ಸ್ಥಾಪಕ ಜೂಲಿಯನ್ ಅಸ್ಸಾಂಜ್ ಜೈಲಿನಿಂದ ಬಿಡುಗಡೆಯಾಗಿದ್ದಾರೆ. ಇಂಗ್ಲೆಂಡ್ನ ಜೈಲಲ್ಲಿದ್ದ ಅವರು ಈಗ ಆಸ್ಟ್ರೇಲಿಯಾಗೆ ವಾಪಸಾಗಿದ್ದಾರೆ. 2019ರಲ್ಲಿ ಅವರು ಲಂಡನ್ನಲ್ಲಿದ್ದ ಈಕ್ವೆಡಾರ್ ರಾಯಭಾರ ಕಚೇರಿಯಲ್ಲಿ ಆಶ್ರಯ ಪಡೆದಿದ್ದರು. ನಂತರ ಅವರನ್ನು ಇಂಗ್ಲೆಂಡ್ನ ಕಿರು ಸೆಲ್ನಲ್ಲಿ ಇರಿಸಲಾಗಿತ್ತು. ಅವರನ್ನು ತನಗೆ ಹಸ್ತಾಂತರಿಸಬೇಕೆಂದು ಅಮೆರಿಕ ವಾದಿಸುತ್ತಿತ್ತು. ಇದನ್ನು ಅಸ್ಸಾಂಜ್ ವಿರೋಧಿಸಿದ್ದರು.ಇಂತಹ ಪ್ರಕರಣದಲ್ಲಿ ಹೇರಲಾಗುವ 62 ತಿಂಗಳ (5 ವರ್ಷ 2 ತಿಂಗಳು) ಜೈಲು ಶಿಕ್ಷೆಯನ್ನು ಈಗಾಗಲೇ ಅಸ್ಸಾಂಜ್ ಇಂಗ್ಲೆಂಡ್ ಜೈಲಿನಲ್ಲಿ ಕಳೆದಿದ್ದಾರೆ. ಹಾಗಾಗಿ ಅವರನ್ನು ಬಿಡುಗಡೆ ಮಾಡಬಹುದು ಅಮೆರಿಕದ ಕಾನೂನು ಸಚಿವಾಲಯ ಪತ್ರವನ್ನು ಲಂಡನ್ನ ಹೈಕೋರ್ಟ್‌ಗೆ ಕಳುಹಿಸಿದೆ. ಇದರ ಆಧಾರದ ಮೇಲೆ ಅವರಿಗೆ ಜಾಮೀನು ಲಭಿಸಿದೆ.

# ಸಿಬಿಐನಿಂದ ಕೇಜ್ರಿವಾಲ್ ಬಂಧನ



**ನವದೆಹಲಿ:** ಮದ್ಯ ನೀತಿ ಅಕ್ರಮಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ದೆಹಲಿ ಮುಖ್ಯಮಂತ್ರಿ, ಅರವಿಂದ್ ಕೇಜ್ರಿವಾಲ್ ಅವರನ್ನು ಕೇಂದ್ರ ತನಿಖಾ ದಳದ (ಸಿಬಿಐ) ಅಧಿಕಾರಿಗಳು ಮಂಗಳವಾರ ತಿಹಾರ್ ಜೈಲಿನಿಂದ ಬಂಧಿಸಿದ್ದಾರೆ. ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಅರವಿಂದ್ ಕೇಜ್ರಿವಾಲ್ ಅವರ ಜಾಮೀನು ಅರ್ಜಿಯನ್ನು ಸುಪ್ರೀಂ ಕೋರ್ಟ್ ವಿಚಾರಣೆ ನಡೆಸುವ ಒಂದು ದಿನ ಮೊದಲು ಈ ಬೆಳವಣಿಗೆ ನಡೆದಿದೆ. ಸೋಮವಾರ ಸಿಬಿಐ ಅರವಿಂದ್ ಕೇಜ್ರಿವಾಲ್ ಅವರನ್ನು ತಿಹಾರ್ ಜೈಲಿನಲ್ಲಿ ಪರೀಕ್ಷಿಸಿತ್ತು. ಅಬಕಾರಿ ನೀತಿ ಪ್ರಕರಣಕ್ಕೆ ಸಂಬಂಧಿಸಿದ ಅವರ ಹೇಳಿಕೆ ದಾಖಲಿಸಿತ್ತು. ಸಿಬಿಐ ಅರವಿಂದ್ ಕೇಜ್ರಿವಾಲ್ ಅವರನ್ನು ನಾಳೆ ವಿಚಾರಣಾ ನ್ಯಾಯಾಲಯಕ್ಕೆ ಹಾಜರುಪಡಿಸಲಿದೆ. ಸುದ್ದಿ ಸಂಸ್ಥೆಗಳ ಜತೆ ಮಾತನಾಡಿದ ಎಎಪಿಯ ರಾಜ್ಯಸಭಾ ಸಂಸದ ಸಂಜಯ್ ಸಿಂಗ್ 'ಅರವಿಂದ್ ಕೇಜ್ರಿವಾಲ್ ಅವರಿಗೆ ಸುಪ್ರೀಂ ಕೋರ್ಟ್‌ನಿಂದ ಜಾಮೀನು ಸಿಗುವ ನೂರಕ್ಕೆ ನೂರರಷ್ಟು ಸಾಧ್ಯತೆ ಇರುವ ಸಮಯದಲ್ಲಿ ದೆಹಲಿ ಸಿಬಿಐ ಮೂಲಕ ಕೇಂದ್ರ ಪಿತೂರಿ ನಡೆಸುತ್ತಿದೆ ಎಂದು ಮೂಲಗಳು ನನಗೆ ತಿಳಿಸಿವೆ. ಇಡೀ ದೇಶ ಇದನ್ನು ನೋಡುತ್ತಿದೆ. ಅರವಿಂದ್ ಕೇಜ್ರಿವಾಲ್ ಅವರ ಪರವಾಗಿ ಒಗ್ಗಟ್ಟಾಗಿ ನಿಂತಿದೆ ಎಂದು ಹೇಳಿದರು.

# ಪ್ರತಿಷ್ಠಿತ ನ್ಯೂಯಾರ್ಕ್ ಟೈಮ್ಸ್ ವೃತ್ತದಲ್ಲಿ ಕಿಂಗ್ ಕೊಹ್ಲಿ ಪ್ರತಿಮೆ




**ಅಮೆರಿಕ:** ಟೀಮ್ ಇಂಡಿಯಾದ ಮಾಜಿ ನಾಯಕ ರನ್ ಮಷಿನ್ ಖ್ಯಾತಿಯ ವಿರಾಟ್ ಕೊಹ್ಲಿಯವರ ಪ್ರತಿಮೆ ಇದೀಗ ಅಮೆರಿಕದ ನ್ಯೂಯಾರ್ಕ್ ನಗರದ ಟೈಮ್ಸ್‌ಸ್ಕ್ವೇರ್ ನಲ್ಲಿ ಅನಾವರಣಗೊಳಿಸಲಾಗಿದೆ. 2028 ರಲ್ಲಿ ಲಾಸ್ ಏಂಜಲೀಸ್ ಒಲಿಂಪಿಕ್ಸ್‌ನಲ್ಲಿ ಕ್ರಿಕೆಟ್ ಸೇರ್ಪಡೆಗೊಳ್ಳುವಲ್ಲಿ ಕೊಹ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಇದೇ ಕಾರಣದಿಂದ ಕೊಹ್ಲಿಯ ಪ್ರತಿಮೆಯನ್ನು ಬ್ರಾಂಡ್ ಅಂಬಾಸಿಡರ್ ಆಗಿರುವ ಮ್ಯಾಟ್ರೆಸ್ ಕಂಪನಿಯೊಂದರ ಮಾರ್ಕೆಟಿಂಗ್ ಅಭಿಯಾನದ ಭಾಗವಾಗಿ ನಿರ್ಮಿಸಲಾಗಿದೆ. ಹಾಸಿಗೆಗಳಿಂದ ಒದಗಿಸಲಾದ ಸೌಕರ್ಯವನ್ನು ಹೈಲೈಟ್ ಮಾಡಲು ಪ್ರತಿಮೆಯನ್ನು ಸ್ಥಾಪಿಸಲಾಗಿದೆ. ಈ ವಿಡಿಯೋವನ್ನು ಮ್ಯಾಟ್ರೆಸ್ ಕಂಪನಿ ಹಂಚಿಕೊಂಡಿದ್ದು, ಎಲ್ಲೆಡೆ ವೈರಲ್ ಆಗುತ್ತಿದೆ.

# ವಿಮಾನದ ಕಿಟಕಿಯಿಂದ ಯಾವುದೇ ಚಿತ್ರ ತೆಗೆಯಬೇಡಿ: ಚೀನಾ ಎಚ್ಚರಿಕೆ

**ಚೀನಾ:** ದೇಶದ ನಾಗರಿಕ- ಸೇನಾ ವಿಮಾನ ನಿಲ್ದಾಣಗಳಲ್ಲಿ ವಿಮಾನ ಟೇಕಾಫ್ ಹಾಗೂ ಇಳಿಯುವ ವೇಳೆ ಕಿಟಕಿ ಮೂಲಕ ಚಿತ್ರಗಳನ್ನು ತೆಗೆಯದಂತೆ ಚೀನಾದ ಉನ್ನತ ಬೇಹುಗಾರಿಕೆ ಸಂಸ್ಥೆ ಪ್ರಯಾಣಿಕರಿಗೆ ಎಚ್ಚರಿಕೆ ನೀಡಿದೆ. ವಿದೇಶಿ ಪ್ರಯಾಣಿಕರೊಬ್ಬರು ಕಿಟಕಿಯ ಪರದೆ ಸರಿಸಿ ಚಿತ್ರ ತೆಗೆದಿರುವುದನ್ನು ಪತ್ತೆ ಮಾಡಿದ ಬೆನ್ನಲ್ಲೇ, ಈ ನಿರ್ದೇಶನ ನೀಡಿದೆ ಎಂದು ಮಾಧ್ಯಮ ಸಂಸ್ಥೆಯೊಂದು ವರದಿ ಮಾಡಿದೆ.



ನಾಗರಿಕ-ಸೇನಾ ವಿಮಾನ ನಿಲ್ದಾಣದ ಮೂಲಕ ಪ್ರಯಾಣಿಸುವ ವೇಳೆ ಕಿಟಕಿ ಪರದೆ ಮುಚ್ಚುವ ಜೊತೆಗೆ ಎಲ್ಲ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಚೀನಾ ರಾಜ್ಯ ಭದ್ರತಾ ಸಚಿವಾಲಯವು 'ವಿ-ಚಾಟ್ 'ನಲ್ಲಿ ಹೇಳಿದೆ.

'ಅನಧಿಕೃತವಾಗಿ ಚಿತ್ರ, ವಿಡಿಯೊಗಳನ್ನು ತೆಗೆದು ಆನ್ಲೈನ್ ಮೂಲಕ ಅಪ್ಲೋಡ್ ಮಾಡುವಂತಿಲ್ಲ. ಸೇನಾ ಸೌಲಭ್ಯಗಳ ಕುರಿತು ಗೋಪ್ಯತೆಯನ್ನು ಕಾಪಾಡುವ ನಿಟ್ಟಿನಲ್ಲಿ ವಿಶ್ವದಾದ್ಯಂತ ಪ್ರಮಾಣಿತ ವಿಧಾನಕ್ಕೆ ಅನುಗುಣವಾಗಿ ನಡೆದುಕೊಳ್ಳಬೇಕು' ಎಂದು ಹಾಂಗ್ಕಾಂಗ್ ಮೂಲದ 'ಸೌತ್ ಚೈನಾ ಮಾರ್ನಿಂಗ್ ಪೋಸ್ಟ್' ವರದಿ ಮಾಡಿದೆ.

ಸ್ಥಳೀಯ ಮಾಧ್ಯಮಗಳ ಪ್ರಕಾರ, ಪೂರ್ವ ಚೀನಾದ ಯಿವು ಪಟ್ಟಣದಿಂದ ಬೀಜಿಂಗ್ಗೆ ತೆರಳುವ ವೇಳೆ ವಿದೇಶಿ ಪ್ರಯಾಣಿಕರೊಬ್ಬರು ಮೊಬೈಲ್ ಬಳಸಿ ಸೇನಾ-ನಾಗರಿಕ ವಿಮಾನ ನಿಲ್ದಾಣದ ಚಿತ್ರಗಳನ್ನು ತೆಗೆದಿದ್ದರು. ವಿಮಾನದಲ್ಲಿದ್ದ ಸಹ ಪ್ರಯಾಣಿಕರೊಬ್ಬರು ತಕ್ಷಣವೇ ಅಧಿಕಾರಿಗಳ ಗಮನಕ್ಕೆ ತಂದಿದ್ದು ಬಳಿಕ ಪೊಲೀಸರಿಗೂ ಮಾಹಿತಿ ನೀಡಿದ್ದರು. ಆ ಬಳಿಕ ಈ ಕ್ರಮ ತೆಗೆದುಕೊಳ್ಳಲಾಗಿದೆ.

# ಉಕ್ರೇನ್ ಜಂಟಿ ಪಡೆಗಳ ಕಮಾಂಡರ್ ಬದಲಾವಣೆ

**ಕೀವ್:** ಉಕ್ರೇನ್ ಸಶಸ್ತ್ರ ಪಡೆಗಳ ಜಂಟಿ ಪಡೆಗಳ ಕಮಾಂಡರ್ ಲೆ.ಜ. ಯೂರಿ ಸೊಡೋಲ್ ಅವರ ಸ್ಥಾನದಲ್ಲಿ ಬ್ರಿಗೇಡಿಯರ್ ಜನರಲ್ ಆಂಡ್ರಿಯ್ ಹಿನಟೋವ್ರನ್ನು ನೇಮಕಗೊಳಿಸಿರುವುದಾಗಿ ಉಕ್ರೇನ್ ಅಧ್ಯಕ್ಷ ವೊಲೊದಿಮಿರ್ ಝೆಲೆನ್ಸ್ಕಿ ಹೇಳಿದ್ದಾರೆ.

ಈ ಕ್ರಮಕ್ಕೆ ಅವರು ಯಾವುದೇ ಕಾರಣವನ್ನು ನೀಡಿಲ್ಲ.

ಹೆಸರಿಸಲಾಗದ ಜನರಲ್ ಒಬ್ಬರಿಂದಾಗಿ ರಶ್ಯ ವಿರುದ್ಧದ ಯುದ್ಧದಲ್ಲಿ ಉಕ್ರೇನ್ಗೆ ನಿರಂತರ ಹಿನ್ನಡೆಯಾಗುತ್ತಿದೆ ಮತ್ತು ಹಲವಾರು ಯೋಧರು ಸಾವನ್ನಪ್ಪಿದ್ದಾರೆ ಎಂದು ಉಕ್ರೇನ್ನ ಅಝೋವ್ ತುಕಡಿಯ ಮುಖ್ಯಸ್ಥ ಬೊಹ್ಡಾನ್ ಕ್ರೊಟೆವೆಚ್ ಆರೋಪಿಸಿದ ಕೆಲವೇ ಗಂಟೆಗಳ ಬಳಿಕ ಅಧ್ಯಕ್ಷ ಝೆಲೆನ್ಸ್ಕಿ ಈ ಕ್ರಮ ಕೈಗೊಂಡಿರುವುದಾಗಿ ವರದಿಯಾಗಿದೆ.



ನಾನು ಯಾರ ಬಗ್ಗೆ ಹೇಳುತ್ತಿದ್ದೇನೆ ಎಂಬುದನ್ನು ಎಲ್ಲಾ ಮಿಲಿಟರಿ ಸಿಬಂದಿಗಳೂ ಅರಿತುಕೊಂಡಿದ್ದಾರೆ, ಯಾಕೆಂದರೆ ಅವರು ಮಾಡಿದ ಕೆಲಸಕ್ಕಾಗಿ 99%ದಷ್ಟು ಮಿಲಿಟರಿ ಅವರನ್ನು ದ್ವೇಷಿಸುತ್ತಿದೆ. ಅವರ ಚಟುವಟಿಕೆಗಳ ಬಗ್ಗೆ ತನಿಖೆ ನಡೆಸುವಂತೆ ಉಕ್ರೇನ್ ರಾಷ್ಟ್ರೀಯ ತನಿಖಾ ಸಮಿತಿಗೆ ಮನವಿ ಮಾಡಿದ್ದೇನೆ' ಎಂದು ಕ್ರೊಟೆವೆಚ್ ಟ್ವೀಟ್ (ಎಕ್ಸ್) ಮಾಡಿದ್ದರು. ಸೊಡೋಲ್ರನ್ನು ಬದಲಾವಣೆ ಮಾಡಿರುವ ಆದೇಶ ವರದಿಯಾಗುತ್ತಿದ್ದಂತೆಯೇ ಮತ್ತೊಂದು ಪೋಸ್ಟ್ ಮಾಡಿರುವ ಕ್ರೊಟೆವೆಚ್ 'ಹಿನಟೋವ್ ಉತ್ತಮ ಅಧಿಕಾರಿ. ಮುಂಚೂಣಿ ಕ್ಷೇತ್ರದಿಂದ ಉತ್ತಮ ಸುದ್ದಿ ಬರಬಹುದು ಎಂದು ನಿರೀಕ್ಷಿಸುತ್ತಿದ್ದೇನೆ' ಎಂದಿದ್ದಾರೆ.

# ಇಸ್ರೇಲ್ ದಾಳಿಯಲ್ಲಿ ಹಮಾಸ್ ಮುಖ್ಯಸ್ಥರ 10 ಸಂಬಂಧಿಕರ ಬಲಿ

**ಗಾಝಾ:** ಗಾಝಾದ ಮೇಲೆ ಮಂಗಳವಾರ ಇಸ್ರೇಲ್ ಪಡೆ ನಡೆಸಿದ ಬಾಂಬ್ ದಾಳಿಯಲ್ಲಿ ಹಮಾಸ್ನ ರಾಜಕೀಯ ವಿಭಾಗದ ಮುಖ್ಯಸ್ಥ ಇಸ್ಮಾಯಿಲ್ ಹನಿಯೆಹ್ ಅವರ ಸಹೋದರಿ ಸೇರಿದಂತೆ 10 ಸಂಬಂಧಿಕರು ಮೃತಪಟ್ಟಿರುವುದಾಗಿ ಗಾಝಾದ ಅಧಿಕಾರಿಗಳು ಹೇಳಿದ್ದಾರೆ. ಉತ್ತರ ಗಾಝಾದ ಅಲ್-ಶತಿ ನಿರಾಶ್ರಿತರ ಶಿಬಿರದ ಮೇಲೆ ಮಂಗಳವಾರ ಬೆಳಿಗ್ಗೆ ನಡೆದ ದಾಳಿಯಲ್ಲಿ ಹನಿಯೆಹ್ ಅವರ ಸಹೋದರಿ ಸಹಿತ 10 ಸಂಬಂಧಿಕರು ಸಾವನ್ನಪ್ಪಿದ್ದು ಹಲವರು ಗಾಯಗೊಂಡಿದ್ದಾರೆ ಎಂದು ಗಾಝಾದ ನಾಗರಿಕ ಭದ್ರತಾ ಏಜೆನ್ಸಿಯ ವಕ್ತಾರ ಮಹ್ಮೂದ್ ಬಸಾಲ್ರನ್ನು ಉಲ್ಲೇಖಿಸಿ ಎಎಫ್ಪಿ ಸುದ್ದಿಸಂಸ್ಥೆ ವರದಿ ಮಾಡಿದೆ.



# ಪೇಪರ್ ನೋಡದೇ ಪ್ರಮಾಣ ವಚನ ಸ್ವೀಕರಿಸಿದ ಕಿರಿಯ ಸಂಸದೆ



**ನವದೆಹಲಿ:** ಅತ್ಯಂತ ಕಿರಿಯ ಸಂಸದರಲ್ಲಿ ಒಬ್ಬರಾಗಿರುವ ಶಾಂಭವಿ ಚೌಧರಿ ಅವರು ಪೇಪರ್ ಅನ್ನು ನೋಡದೇ ಪ್ರಮಾಣ ವಚನ ಸ್ವೀಕರಿಸಿದ್ದಾರೆ.

18ನೇ ಲೋಕಸಭೆಯಲ್ಲಿ ಅತ್ಯಂತ ಕಿರಿಯ ಸಂಸದರಲ್ಲಿ ಒಬ್ಬರಾಗಿರುವ ಶಾಂಭವಿ ಚೌಧರಿ ಅವರು ಸಂಸತ್ತಿನಲ್ಲಿ ಹಿಂದಿಯಲ್ಲಿ ಸಂಸದರಾಗಿ ಪ್ರಮಾಣ ವಚನ ಸ್ವೀಕರಿಸಿದರು.

ಸಮಾರಂಭದ ವೀಡಿಯೋದಲ್ಲಿ ಶಾಂಭವಿ ಚೌದರಿ ಸೀರೆಯನ್ನು ಧರಿಸಿ ಪೇಪರ್ಗಳನ್ನು ನೋಡದೆ ಪ್ರಮಾಣ ವಚನ ಸ್ವೀಕರಿಸಿದ್ದಾರೆ.

ಚಿರಾಗ್ ಪಾಸ್ವಾನ್ ಅವರ ಎಲ್ಜೆಪಿ ಪ್ರಕ್ಷದ ಶಾಂಭವಿ ಬಿಹಾರದ ಸಮಸ್ತಿಪುರದ ಪ್ರತಿನಿಧಿಯಾಗಿದ್ದಾರೆ. ಅವರು ಸಮಸ್ತಿಪುರದ ಮೊದಲ ಮಹಿಳಾ ಸಂಸದರಾಗಿದ್ದಾರೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಲವ್, ಬ್ರೇಕಪ್ ಬಗ್ಗೆ ಸ್ಫೋಟಕ ವಿಚಾರ ಬಿಚ್ಚಿಟ್ಟ 'ಕಿರಾತಕ' ನಟಿ



ಯಶ್‌ಗೆ 'ಕಿರಾತಕ' ಚಿತ್ರದಲ್ಲಿ ನಾಯಕಿಯಾಗಿ ನಟಿಸಿದ್ದ ಓವಿಯಾ ಈಗ ಚಿತ್ರರಂಗದಲ್ಲಿ ಬೇಡಿಕೆ ಕಮ್ಮಿಯಾಗಿದೆ. ಸದಾ ಒಂದಲ್ಲಾ ಒಂದು ವಿಚಾರಗಳ ಮೂಲಕ ಸದ್ದು ಮಾಡುವ ನಟಿ ಓವಿಯಾ ಈಗ ತಮ್ಮ ರಿಲೇಷನ್ ಶಿಪ್, ಬ್ರೇಕಪ್ ಬಗ್ಗೆ ಸಂದರ್ಶನವೊಂದರಲ್ಲಿ ಮುಕ್ತವಾಗಿ ಮಾತನಾಡಿದ್ದಾರೆ.

ಪ್ರೀತಿಯಲ್ಲಿ ಬಿದ್ದು ಮೋಸ ಹೋಗ್ತಾರೆ. ನಾನು ಕೂಡ ಈ ಮೊದಲು ರಿಲೇಷನ್‌ಶಿಪ್‌ನಲ್ಲಿದ್ದೆ. ಅದ್ಯಾವುದೂ ಕೈಗೂಡಲಿಲ್ಲ. ಕೆಲವರು ಹಣಕ್ಕಾಗಿ ಮೋಸ ಮಾಡುತ್ತಾರೆ. ಇನ್ಮುಂದೆ ಲಿವಿಂಗ್ ಟುಗೆದರ್ ಸಂಬಂಧವನ್ನು ನಾನು ನಂಬುವುದಿಲ್ಲ. ನಿಮಗೆ ಅನಿಸಿದನ್ನು ನೀವು ಮಾಡಿ ಎಂದಿದ್ದಾರೆ. ಪರ್ಸನಲ್ ವಿಚಾರಕ್ಕೆ ನಾವೆಂದೂ ತೊಂದರೆ ಕೊಡಬಾರದು ಎಂದು 'ಕಿರಾತಕ' ನಟಿ ಓವಿಯಾ ಮುಕ್ತವಾಗಿ ಮಾತನಾಡಿದ್ದಾರೆ.

ಕನ್ನಡದ ಕಿರಾತಕ, ಮಿಸ್ಟರ್ ಮೊಮ್ಮಗ ಸಿನಿಮಾದಲ್ಲಿ ಓವಿಯಾ ನಟಿಸಿದ್ದಾರೆ. ತಮಿಳಿನಲ್ಲಿ ಕಲಾವಾಣಿ, ಮರೀನಾ, 90 ಎಂಎಲ್ ಸೇರಿದಂತೆ ಹಲವು ಸಿನಿಮಾಗಳಲ್ಲಿ ನಟಿಸಿದ್ದಾರೆ. ಸದ್ಯ ಹೊಸ ಸಿನಿಮಾ ಅವಕಾಶಗಳಿಗಾಗಿ ಎದುರು ನೋಡ್ತಿದ್ದಾರೆ.

# ಆಯುಷ್ಮಾನ್‌ಗೆ ರಶ್ಮಿಕಾ ಮಂದಣ್ಣ ಹೀರೋಯಿನ್



ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣ ಅದೃಷ್ಟ ಖುಲಾಯಿಸಿದೆ. 'ಅನಿಮಲ್' ಸಿನಿಮಾ ಸಕ್ಸಸ್ ಆದ್ಮೇಲೆ ಸಾಲು ಸಾಲು ಸಿನಿಮಾ ಅವಕಾಶಗಳು ಅರಸಿ ಬರುತ್ತಿವೆ. 'ಸಿಖಂದರ್' ಬಳಿಕ ಮತ್ತೊಂದು ಬಂಪರ್ ಅವಕಾಶ ರಶ್ಮಿಕಾಗೆ ಸಿಕ್ಕಿದೆ.

ಬಾಲಿವುಡ್ ನಟ ಆಯುಷ್ಮಾನ್ ಖುರಾನಾಗೆ ರಶ್ಮಿಕಾ ನಾಯಕಿಯಾಗಿ ಫೈನಲ್ ಆಗಿದ್ದಾರೆ. 'ಮುಂಜ್ಯ' ಚಿತ್ರದ ನಿರ್ದೇಶಕ ಆದಿತ್ಯಾ ಸರ್ಪೋದರ್ ಡೈರೆಕ್ಷನ್‌ನಲ್ಲಿ ಸಿನಿಮಾ ಮೂಡಿ ಬರಲಿದೆ.

ಹಾರರ್ ಕಾಮಿಡಿಯಲ್ಲಿ ಈ ಸಿನಿಮಾ ಮೂಡಿ ಬರಲಿದ್ದು, ರಶ್ಮಿಕಾ ಪಾತ್ರಕ್ಕೆ ಭಾರೀ ಪ್ರಾಮುಖ್ಯತೆ ಇದೆಯಂತೆ. ನವೆಂಬರ್‌ನಿಂದ ಸಿನಿಮಾ ಶೂಟಿಂಗ್ ಶುರು ಆಗಲಿದೆ ಎನ್ನಲಾಗಿದೆ. ಮೊದಲ ಬಾರಿಗೆ ಆಯುಷ್ಮಾನ್ ಖುರಾನಾ ಮತ್ತು ರಶ್ಮಿಕಾ ಮಂದಣ್ಣ ನಟಿಸುತ್ತಿರುವ ಕಾರಣ ಚಿತ್ರದ ಬಗ್ಗೆ ಫ್ಯಾನ್ಸ್‌ಗೆ ಭಾರೀ ನಿರೀಕ್ಷೆಯಿದೆ.

ಅಂದಹಾಗೆ, ಪುಷ್ಪ 2, ಅನಿಮಲ್ 2, ಸಿಖಂದರ್, ರೈನ್‌ಬೋ, ದಿ ಗರ್ಲ್‌ಫ್ರೆಂಡ್ ಸಿನಿಮಾ ಸೇರಿದಂತೆ ಹಲವು ಚಿತ್ರಗಳು ರಶ್ಮಿಕಾ ಕೈಯಲ್ಲಿವೆ.

# ಬೇರೆ ಧರ್ಮದವರನ್ನು ಮದುವೆ ಆದಿರಿ ಎಂದು ಟೀಕಿಸಿದವರಿಗೆ ಸೋನಾಕ್ಷಿ ಕೊಟ್ಟರು ಖಡಕ್ ಉತ್ತರ

ಬಾಲಿವುಡ್ ನಟಿ ಸೋನಾಕ್ಷಿ ಸಿನ್ಹಾ ಅವರು ಝಹೀರ್ ಇಕ್ಬಾಲ್ ನ ಮದುವೆ ಆಗಿದ್ದು ಸಾಕಷ್ಟು ಚರ್ಚೆ ಹುಟ್ಟುಹಾಕಿದೆ. ಈ ಮದುವೆಯನ್ನು ಒಪ್ಪಲ್ಲ ಎಂದು ಅನೇಕ ಹಿಂದೂಗಳು ಹೇಳಿದ್ದಾರೆ. ಮದುವೆ ಫೋಟೋಗಳನ್ನು ಶೇರ್ ಮಾಡುವಾಗ ಇವರಿಗೆ ಭಯ ಶುರುವಾಗಿದೆ. ಈ ಕಾರಣದಿಂದಲೇ ಕಮೆಂಟ್ ಗಳನ್ನು ಆಫ್ ಮಾಡಿ ಫೋಟೋ ಹಂಚಿಕೊಳ್ಳಲಾಗಿದೆ. ಈಗ ತಮಗೆ ಬರುತ್ತಿರುವ ಕಮೆಂಟ್ ಗಳ ಬಗ್ಗೆ, ಈ ಮದುವೆ ಬಗ್ಗೆ ಪರೋಕ್ಷವಾಗಿ ಒಂದೇ ಲೈನ್ ನಲ್ಲಿ ಮಾತನಾಡಿದ್ದಾರೆ ಸೋನಾಕ್ಷಿ ಸಿನ್ಹಾ.



ಸೋನಾಕ್ಷಿ ಸಿನ್ಹಾ ಅವರು ಬಾಲಿವುಡ್ ನಲ್ಲಿ ಗುರುತಿಸಿಕೊಂಡವರು. ಮೊದಲಿನಷ್ಟು ಬೇಡಿಕೆ ಈಗ ಅವರಿಗೆ ಉಳಿದಿಲ್ಲ. ಆದಾಗ್ಯೂ ಅಲ್ಲೊಂದು ಇಲ್ಲೊಂದು ಸಿನಿಮಾ ಒಪ್ಪಿಕೊಂಡು ನಟಿಸುತ್ತಾರೆ. ವೆಬ್ ಸೀರಿಸ್ ಲೋಕದಲ್ಲಿ ಅವರು ಗಮನ ಸೆಳೆಯುತ್ತಿದ್ದಾರೆ. ಅವರ ತಂದೆ ಶತ್ರುಘ್ನ ಸಿನ್ಹಾ ನಟ ಹಾಗೂ ರಾಜಕಾರಣಿ. ಈ ಕಾರಣದಿಂದ ಅವರು ಬೇರೆ ಧರ್ಮದವರನ್ನು ಮದುವೆ ಆಗಿದ್ದು ಅನೇಕರ ಕೋಪಕ್ಕೆ ಕಾರಣವಾಗಿದೆ. ಸಾಕಷ್ಟು ನೆಗೆಟಿವಿಟಿ ಅವರಿಗೆ ಸಿಗುತ್ತಿದೆ.

ಸೋನಾಕ್ಷಿ ಪರ ಪೋಸ್ಟ್ ಮಾಡಿದವರೇ ಕಡಿಮೆ ಹೀಗಿರುವಾಗ ವ್ಯಕ್ತಿಯೋರ್ವ ಸೋನಾಕ್ಷಿ ಹಾಗೂ ಝಹೀರ್ ಅವರ ಫೋಟೋವನ್ನು ಗ್ರಾಫಿಕ್ಸ್ ರೀತಿ ಪೋಸ್ಟ್ ಮಾಡಿದ್ದರು. ಜೊತೆಗೆ, 'ಪ್ರೀತಿ ಜಗತ್ತಿನ ಸಾರ್ವತ್ರಿಕ ಧರ್ಮ' ಎಂದು ಬರೆಯಲಾಗಿದೆ. ಇದನ್ನು ಸೋನಾಕ್ಷಿ ರೀ ಪೋಸ್ಟ್ ಮಾಡಿಕೊಂಡಿದ್ದಾರೆ. ಅಲ್ಲದೆ, ಈ ಪೋಸ್ಟ್‌ಗೆ 'ನಿಜವಾದ ಶಬ್ದಗಳು, ಥ್ಯಾಂಕ್ ಯೂ' ಎಂದು ಅವರು ಬರೆದುಕೊಂಡಿದ್ದಾರೆ.

ಸೋನಾಕ್ಷಿ ಮನೆಯ ಎದುರು ಕೆಲವರು ಪ್ರತಿ ಭಟನೆ ನಡೆಸುತ್ತಾ, ಈ ಮದುವೆಯನ್ನು 'ಲವ್ ಜಿಹಾದ್' ಎಂದು ಕರೆದಿದ್ದಾರೆ. ಇದನ್ನು ಶತ್ರುಘ್ನ ಸಿನ್ಹಾ ಅವರು ಖಂಡಿಸಿದ್ದಾರೆ. ಈ ರೀತಿಯ ಪ್ರತಿಭಟನೆ ಸರಿ ಅಲ್ಲ ಎಂದು ಹೇಳಿದ್ದಾರೆ. ಸೋನಾಕ್ಷಿ ಸಿನ್ಹಾ ಮದುವೆ ವಿಚಾರದಲ್ಲಿ ಆರಂಭದಲ್ಲಿ ಶತ್ರುಘ್ನ ಅವರು ವಿರೋಧ ವ್ಯಕ್ತಪಡಿಸಿದ್ದರು. ಆ ಬಳಿಕ ಅವರು ಮದುವೆಯನ್ನು ಬೆಂಬಲಿಸಿದರು. ಸಾಕಷ್ಟು ಖಾಸಗಿಯಾಗಿ ಈ ಮದುವೆ ನಡೆಯಿತು. ಈ ಜೋಡಿ ಬರೋಬ್ಬರಿ ಏಳು ವರ್ಷಗಳ ಕಾಲ ಡೇಟಿಂಗ್ ಮಾಡುತ್ತಿತ್ತು. ಕುಟುಂಬ ಹಾಗೂ ಗೆಳೆಯರಿಗಾಗಿ ಈ ದಂಪತಿ ದೊಡ್ಡ ಮಟ್ಟದಲ್ಲಿ ಪಾರ್ಟಿ ಆಯೋಜನೆ ಮಾಡಿತ್ತು. ಸಲ್ಮಾನ್ ಖಾನ್, ಕಾಜೋಲ್, ವಿದ್ಯಾ ಬಾಲನ್, ರೇಖಾ, ಹುಮಾ ಖುರೇಶಿ, ಅದಿತಿ ರಾವ್ ಹೈದರಿ ಮೊದಲಾದವರು ಈ ಕಾರ್ಯಕ್ರಮದಲ್ಲಿ ಭಾಗಿ ಆಗಿದ್ದರು.



## ತಮಿಳಿನಲ್ಲಿ ಬಿಗ್ ಚಾನ್ಸ್ ಗಿಟ್ಟಿಸಿಕೊಂಡ ಕೊಡಗಿನ ಕುವರಿ

# ಅಕ್ಷಿತಾ

ಕನ್ನಡದ ನಟ, ನಟಿಯರು ಬೇರೆ ಭಾಷೆಗಳಲ್ಲಿ ಮಿಂಚುವುದು ಹೊಸತೇನಲ್ಲ. ಆದರೆ, ಬೇರೆ ಭಾಷೆಗಳಲ್ಲಿ ಜನಪ್ರಿಯತೆ ದಕ್ಕಿದ ಮೇಲೂ ಕನ್ನಡತನವನ್ನೇ ಧ್ಯಾನಿಸುತ್ತಾ, ತಾಯ್ನೆಲದ ಪ್ರೇಕ್ಷಕರನ್ನು ಚೆಂದದ ಪಾತ್ರಗಳ ಮೂಲಕ ತಾಕೋದನ್ನೇ ಪ್ರಧಾನ ಆದ್ಯತೆಯಾಗಿಸಿಕೊಂಡವರ ಸಂಖ್ಯೆ ಕಡಿಮೆಯಿದೆ. ಆ ಸಾಲಿಗೆ ಅಕ್ಷಿತಾ ಬೋಪಯ್ಯ ಸೇರಿದ್ದಾರೆ.





ಕನ್ನಡದ ಒಂದಷ್ಟು ಸಿನಿಮಾಗಳಲ್ಲಿ ನಾಯಕಿಯಾಗಿ ನಟಿಸಿ ಪ್ರೇಕ್ಷಕರ ಮನಗೆದ್ದಿರುವ ಅಕ್ಷಿತಾ, ಕಾಲದ ಸೆಳವಿಗೆ ಸಿಕ್ಕು ತಮಿಳು ಸೀರಿಯಲ್ ಜಗತ್ತಿಗೆ ಅಡಿಯಿರಿಸಿದ್ದರು. ಈವತ್ತಿಗೆ ಆಕೆಯ ಪಾಲಿಗೆ ತಮಿಳು ಕಿರುತೆರೆಯಲ್ಲಿ ದೊಡ್ಡ ಮಟ್ಟದ ಗೆಲುವು ಸಿಕ್ಕಿದೆ. ದೊಡ್ಡ ಸಂಖ್ಯೆಯ ಅಭಿಮಾನಿ ಬಳಗವನ್ನೂ ಸಂಪಾದಿಸಿಕೊಂಡಿರುವ ಅಕ್ಷಿತಾ ಈಗ ತಮಿಳು ಚಿತ್ರವೊಂದರ ಮೂಲಕ ನಾಯಕಿಯಾಗಿ ಬಡ್ತಿ ಪಡೆದುಕೊಂಡಿದ್ದಾರೆ.

ಬ್ರಹ್ಮಚಾರಿ, ಈ ಲವ್ ಯೂ, ಶಿವಾರ್ಜುನ ಮುಂತಾದ ಚಿತ್ರಗಳ ಮೂಲಕ ಅಕ್ಷಿತಾ ಕನ್ನಡದ ಪ್ರೇಕ್ಷಕರಿಗೆಲ್ಲ ಪರಿಚಿತರಾಗಿದ್ದಾರೆ. ಈ ನಡುವೆ ತಮಿಳು ಸೀರಿಯಲ್‌ಗಳಲ್ಲಿ ನಾಯಕಿಯಾಗಿ ನಟಿಸುವ ಮೂಲಕ ಭಾರೀ ಜನಪ್ರಿಯತೆಯನ್ನೂ ಪಡೆದುಕೊಂಡಿದ್ದಾರೆ. ಹಾಗೆ ಅಕ್ಷಿತಾ ನಟಿಸುತ್ತಿದ್ದ ಪ್ರಸಿದ್ಧ ತಮಿಳು ಧಾರಾವಾಹಿ ನಾಲಕ್ಕು ತಿಂಗಳ ಹಿಂದೆ ಮುಕ್ತಾಯಗೊಂಡಿತ್ತು. ಅದಾದ ನಂತರ ಸೀರಿಯಲ್ಲುಗಳ ಅವಕಾಶವಿದ್ದರೂ ಕೂಡಾ ಅಕ್ಷಿತಾರ ಆಸಕ್ತಿ ಹೊರಳಿಕೊಂಡಿದ್ದದ್ದು ಸಿನಿಮಾ ರಂಗದತ್ತ. ತಮಿಳು ಕಿರುತೆರೆ ಜಗತ್ತಿನ ಮುಖ್ಯ ನಾಯಕಿಯಾಗಿ ದಾಖಲಾಗಿದ್ದ ಅಕ್ಷಿತಾ, ಸಿನಿಮಾದಲ್ಲಿ ನಟಿಸುವ ಮೂಲಕ ಏಕತಾನತೆಯನ್ನು ದಾಟಿಕೊಳ್ಳುವ ನಿರ್ಧಾರ ಮಾಡಿದ್ದರು.

ಅಂಥಾ ಹೊತ್ತಿನಲ್ಲಿ ತಮಿಳಿನಲ್ಲೊಂದು ಚೆಂದದ ಅವಕಾಶ ಸಿಕ್ಕಿದೆ. ಕನ್ನಡದ 'ಸಿದ್ಲಿಂಗು–2' ಚಿತ್ರವನ್ನು ನಿರ್ಮಾಣ ಮಾಡಿದ್ದ ಬ್ಯಾನರಿನಲ್ಲಿಯೇ ಈ ಚಿತ್ರವೂ ತಯಾರಾಗುತ್ತಿದೆ. ಇದು ತಮಿಳು ಮತ್ತು ತೆಲುಗು ಭಾಷೆಗಳಲ್ಲಿ ಏಕಕಾಲದಲ್ಲಿಯೇ ರೂಪುಗೊಳ್ಳಲಿದೆ. ವಿಶೇಷವೆಂದರೆ, ಅಕ್ಷಿತಾ ಬಯಸಿದಂಥಾ ಪಾತ್ರವೇ ಇಲ್ಲಿ ಸಿಕ್ಕಿದೆ. ಸದ್ಯದ ಮಟ್ಟಿಗೆ ಈ ಸಿನಿಮಾ ಬಗೆಗಾಗಲಿ, ಅಕ್ಷಿತಾರ ಪಾತ್ರದ ಬಗೆಗಾಗಲಿ ಹೆಚ್ಚೇನೂ ಮಾಹಿತಿ ಜಾಹೀರು ಮಾಡುವಂತಿಲ್ಲ. ಆದರೆ, ಒಂದೊಳ್ಳೆಯ ತಂಡ, ಹೊಸತೆನ್ನಿಸುವಂಥಾ ಕಥಾನಕದೊಂದಿಗೆ ಈ ಸಿನಿಮಾ ತಯಾರಾಗುತ್ತಿರುವ ಬಗ್ಗೆ ಅಕ್ಷಿತಾರೊಳಗೊಂದು ಖುಷಿ ಇದೆ. ಸದ್ಯ ಕೊಡಗಿನ ಸುತ್ತಮುತ್ತ ಸದರಿ ಸಿನಿಮಾದ ಚಿತ್ರೀಕರಣ ಸಂಪೂರ್ಣಗೊಂಡಿದೆ.

# ಅಂತಾರಾಷ್ಟ್ರೀಯ ಕ್ರಿಕೆಟಿಗೆ ಡೇವಿಡ್ ವಾರ್ನರ್ ನಿವೃತ್ತಿ




ಆಸ್ಟ್ರೇಲಿಯಾ ಸ್ಟಾರ್ ಕ್ರಿಕೆಟಿಗ ಡೇವಿಡ್ ವಾರ್ನರ್ ಅಂತಾರಾಷ್ಟ್ರೀಯ ಕ್ರಿಕೆಟಿಗೆ ಗುಡ್‌ಬೈ ಹೇಳಿದ್ದಾರೆ. ಬಾಂಗ್ಲಾದೇಶ ವಿರುದ್ಧ ನಡೆದ ಸೂಪರ್ 8 ಪಂದ್ಯದಲ್ಲಿ ಅಫ್ಘಾನಿಸ್ತಾನ ರೋಚಕ 8 ರನ್‌ಗಳ ಜಯ ಸಾಧಿಸುವುದರೊಂದಿಗೆ ಡೇವಿಡ್ ವಾರ್ನರ್ ಅಂತಾರಾಷ್ಟ್ರೀಯ ಕ್ರಿಕೆಟ್ ಬದುಕು ಅಂತ್ಯವಾಗಿದೆ.

ಡೇವಿಡ್ ವಾರ್ನರ್ ಅಧಿಕೃತವಾಗಿ ಎಲ್ಲಿಯೂ ನಿವೃತ್ತಿ ನಿರ್ಧಾರವನ್ನು ಪ್ರಕಟಿಸಿಲ್ಲ. ಆದರೆ ಟಿ20 ವಿಶ್ವಕಪ್ ಕ್ರಿಕೆಟ್ ಆರಂಭಕ್ಕೂ ಮುನ್ನ ಈ ವಿಶ್ವಕಪ್ ನಲ್ಲಿ ನಾನು ಕೊನೆಯ ಬಾರಿ ಆಸ್ಟ್ರೇಲಿಯಾದ ಜರ್ಸಿ ಧರಿಸಿ ಆಡಲಿದ್ದೇನೆ ಎಂದು ಹೇಳುವ ಮೂಲಕ ನಿವೃತ್ತಿಯ ಸುಳಿವು ನೀಡಿದ್ದರು.

ಡೇವಿಡ್ ವಾರ್ನರ್ ಅಂತಾರಾಷ್ಟ್ರೀಯ ಕ್ರಿಕೆಟಿಗೆ ನಿವೃತ್ತಿ ಹೇಳಿದರೂ ಎಲ್ಲಾ ಮಾದರಿಯ ಕ್ರಿಕೆಟಿಗೆ ನಿವೃತ್ತಿ ಹೇಳುತ್ತಾರಾ ಇಲ್ಲವೋ ಎನ್ನುವುದು ಸ್ಪಷ್ಟವಾಗಿಲ್ಲ. ಸದ್ಯ ಐಪಿಎಲ್‌ನಲ್ಲಿ ಡೇವಿಡ್ ವಾರ್ನರ್ ಡೆಲ್ಲಿ ಕ್ಯಾಪಿಟಲ್ಸ್ ತಂಡದ ಪರ ಆಡುತ್ತಿದ್ದಾರೆ. ಸೋಮವಾರ ನಡೆದ ಪಂದ್ಯದದಲ್ಲಿ ಆಸ್ಟ್ರೇಲಿಯಾ ವಿರುದ್ಧ ಭಾರತ 24 ರನ್‌ಗಳಿಂದ ಗೆದ್ದುಕೊಂಡಿತ್ತು. ಒಂದು ವೇಳೆ ಇಂದಿನ ಪಂದ್ಯದಲ್ಲಿ ಅಫ್ಘಾನಿಸ್ತಾನ ಒಂದು ವೇಳೆ ಸೋತಿದ್ದರೆ ರನ್ ರೇಟ್ ಆಧಾರದಲ್ಲಿ ಆಸ್ಟ್ರೇಲಿಯಾ ಸೆಮಿ ಫೈನಲ್ ಪ್ರವೇಶಿಸುವ ಸಾಧ್ಯತೆ ಇತ್ತು. ಆದರೆ ಅಫ್ಘಾನಿಸ್ತಾನ ಬಾಂಗ್ಲಾ ವಿರುದ್ಧ ಗೆಲ್ಲುವ ಮೂಲಕ ಆಸ್ಟ್ರೇಲಿಯಾ ಸೆಮಿ ಪ್ರವೇಶದ ಬಾಗಿಲು ಬಂದ್ ಆಗಿದೆ.

ಭಾರತದ ವಿರುದ್ಧ ಪಂದ್ಯದಲ್ಲಿ ಆರಂಭಿಕ ಆಟಗಾರರಾಗಿ ಕಣಕ್ಕೆ ಇಳಿದಿದ್ದ ಡೇವಿಡ್ ವಾರ್ನರ್ 6 ರನ್ ಗಳಿಸಿ ವಿಕೆಟ್ ಒಪ್ಪಿಸಿದ್ದರು. 37 ವರ್ಷದ ಡೇವಿಡ್ ವಾರ್ನರ್ 161 ಏಕದಿನ ಪಂದ್ಯಗಳ 159 ಇನ್ನಿಂಗ್ಸ್‌ನಲ್ಲಿ 6,932 ರನ್ ಹೊಡೆದಿದ್ದಾರೆ. 112 ಟೆಸ್ಟ್ ಪಂದ್ಯಗಳ 205 ಇನ್ನಿಂಗ್ಸ್‌ನಲ್ಲಿ 8,786 ರನ್ ಚಚ್ಚಿದ್ದಾರೆ. 110 ಟಿ20 ಪಂದ್ಯಗಳ 110 ಇನ್ನಿಂಗ್ಸ್‌ನಲ್ಲಿ 3,277 ರನ್ ಬಾರಿಸಿದ್ದಾರೆ.

# ಮೊದಲ ಬಾರಿ ಸೆಮಿಗೆ ಪ್ರವೇಶ

## ಅಫ್ಘಾನ್ ಸಾಧನೆಯ ಹಿಂದಿದೆ ಭಾರತದ ನೆರವು




ಟಿ20 ವಿಶ್ವಕಪ್ ಕ್ರಿಕೆಟ್‌ನಲ್ಲಿ ಬಾಂಗ್ಲಾದೇಶದ ವಿರುದ್ಧ ಗೆಲುವು ಸಾಧಿಸಿ ಮೊದಲ ಬಾರಿಗೆ ಸೆಮಿಫೈನಲ್ ಪ್ರವೇಶಿಸಿದ್ದ ಅಫ್ಘಾನಿಸ್ತಾನ ತಂಡದ ಸಾಧನೆಯ ಹಿಂದೆ ಬಿಸಿಸಿಐ ಪಾಲಿದೆ.

ಹೌದು. ಆಂತರಿಕ ಕಿತ್ತಾಟದಿಂದ ನಲುಗಿ ಹೋಗಿದ್ದ ಅಫ್ಘಾನಿಸ್ತಾನಕ್ಕೆ ಆರ್ಥಿಕ ಸಹಕಾರ ನೀಡಿ ಆಟಗಾರರನ್ನು ಬಿಸಿಸಿಐ ಪ್ರೋತ್ಸಾಹಿಸಿದ ಪರಿಣಾಮ ಕ್ರಿಕೆಟ್ ಟೂರ್ನಿಗಳಲ್ಲಿ ಅಫ್ಘಾನ್ ಆಟಗಾರರು ಅತ್ಯುತ್ತಮ ಪ್ರದರ್ಶನ ನೀಡುತ್ತಿದ್ದಾರೆ.

ಈ ಹಿಂದೆ ಪಾಕಿಸ್ತಾನದಲ್ಲಿ ಅಫ್ಘಾನಿಸ್ತಾನ ತಂಡಕ್ಕೆ ತರಬೇತಿ ಸಿಕ್ಕಿತ್ತು. ಆದರೆ ತರಬೇತಿ ಅಷ್ಟೇನು ಚೆನ್ನಾಗಿ ಸಿಗದ ಕಾರಣ ಬಿಸಿಸಿಐ 2015ರಲ್ಲಿ ಅಫ್ಘಾನಿಸ್ತಾನ ತಂಡಕ್ಕೆ ನೆರವು ನೀಡಲು ಆರಂಭಿಸಿತು. ಗ್ರೇಟರ್ ನೋಯ್ಡಾದಲ್ಲಿರುವ ವಿಜಯ್ ಸಿಂಗ್ ಸ್ಪೋರ್ಟ್ಸ್ ಕಾಂಪ್ಲೆಕ್ಸ್ ಅಫ್ಘಾನಿಸ್ತಾನದ ಹೋಮ್ ಗ್ರೌಂಡ್ ಆಗಿತ್ತು. ಶಾರ್ಜಾದಿಂದ ನೋಯ್ಡಾಕ್ಕೆ ಶಿಫ್ಟ್ ಆಗಿದ್ದ ಅಫ್ಘಾನಿಸ್ತಾನ 2017ರಲ್ಲಿ ಗ್ರೇಟರ್ ನೋಯ್ಡಾದಲ್ಲೇ ಐರ್ಲೆಂಡ್ ವಿರುದ್ಧ ಸರಣಿ ಆಡಿತ್ತು.

ಅಫ್ಘಾನಿಸ್ತಾನ ಡೆಹ್ರಾಡೂನ್‌ನಲ್ಲಿ ಬಾಂಗ್ಲಾದೇಶದ ವಿರುದ್ಧ ಟಿ20 ಸರಣಿ ಸಹ ಆಯೋಜಿಸಿತ್ತು. ಟೀಂ ಇಂಡಿಯಾದ ಮಾಜಿ ಆಟಗಾರರಾದ ಲಾಲ್‌ಚಂದ್ ರಜಪುತ್ ಮತ್ತು ಮನೋಜ್ ಪ್ರಭಾಕರ್ ಅವರು ಕೋಚ್ ಆಗಿ ಮಾರ್ಗದರ್ಶನ ಸಹ ನೀಡಿದ್ದರು. ಸಂಬಂಧ ಮತ್ತಷ್ಟು ಉತ್ತಮವಾಗುತ್ತಿದ್ದಂತೆ ಬೆಂಗಳೂರಿನಲ್ಲಿ ನಡೆದ ಟೆಸ್ಟ್ ಪಂದ್ಯಕ್ಕೆ ಬಿಸಿಸಿಐ ಅಫ್ಘಾನಿಸ್ತಾನದ ಅಧ್ಯಕ್ಷರಾಗಿದ್ದ ಅಶ್ರಫ್ ಘನಿ ಅವರನ್ನು ಆಹ್ವಾನಿಸಿತ್ತು. ಅಂದು ಅಶ್ರಫ್ ಘನಿ ಟ್ವೀಟ್ ಮಾಡಿ ಅಫ್ಘಾನ್ ಆಟಗಾರರಿಗೆ ತಮ್ಮ ಕೌಶಲ್ಯವನ್ನು ತೋರಿಸಲು ವೇದಿಕೆಯನ್ನು ನೀಡಿದ್ದಕ್ಕಾಗಿ ನಾನು ನಮ್ಮ ಭಾರತೀಯ ಸ್ನೇಹಿತರಿಗೆ ಕೃತಜ್ಞನಾಗಿದ್ದೇನೆ ಎಂದು ಬರೆದು ಧನ್ಯವಾದ ತಿಳಿಸಿದ್ದರು.

ಭಾರತ ಸರ್ಕಾರ ಅಫ್ಘಾನಿಸ್ತಾನದಲ್ಲಿ ಕ್ರಿಕೆಟ್‌ಗೆ ಪ್ರೋತ್ಸಾಹ ನೀಡಲು 1 ಮಿಲಿಯನ್ ಡಾಲರ್ ನೀಡಿತ್ತು. ಈ ಹಣದಲ್ಲಿ ಕಂದಹಾರ್‌ನಲ್ಲಿ ನಿರ್ಮಾಣವಾದ ಕ್ರಿಕೆಟ್ ಕ್ರೀಡಾಂಗಣವನ್ನು ಭಾರತದ ರಾಯಭಾರಿ 2018ರ ಏಪ್ರಿಲ್‌ನಲ್ಲಿ ಉದ್ಘಾಟಿಸಿದ್ದರು. ಸ್ನೇಹದ ಭಾಗವಾಗಿ 2019ರಲ್ಲಿ ಅಮುಲ್ ಕಂಪನಿ ಅಫ್ಘಾನಿಸ್ತಾನದ ಮುಖ್ಯ ಪ್ರಾಯೋಜಕತ್ವ ವಹಿಸಿಕೊಂಡಿದೆ. ಕಳೆದ 2 ದಶಕಗಳಿಂದ ಅಮುಲ್ ತನ್ನ ಹಾಲಿನ ಪುಡಿ ಮತ್ತು ಮಗುವಿನ ಆಹಾರವನ್ನು ಅಫ್ಘಾನಿಸ್ತಾನಕ್ಕೆ ರಫ್ತು ಮಾಡುತ್ತಿದೆ.

ಐಪಿಎಲ್‌ನಲ್ಲಿ ಪಾಕ್ ಆಟಗಾರರಿಗೆ ನಿರ್ಬಂಧವಿದ್ದರೆ ಅಫ್ಘಾನ್ ಆಟಗಾರರು ಬಿಡ್‌ನಲ್ಲಿ ಪಾಲ್ಗೊಳ್ಳಲು ಅವಕಾಶವಿದೆ. ಅದರಲ್ಲೂ ಸ್ಪಿನ್ನರ್ ರಶೀದ್ ಖಾನ್ ಅವರಿಗೆ ಭಾರತದಲ್ಲಿ ಭಾರೀ ಸಂಖ್ಯೆಯಲ್ಲಿ ಅಭಿಮಾನಿಗಳಿದ್ದಾರೆ. ಈ ಹಿಂದೆ ಹಾರ್ದಿಕ್ ಪಾಂಡ್ಯ ಅನುಪಸ್ಥಿತಿಯಲ್ಲಿ ರಶೀದ್ ಖಾನ್ ಅವರು ಗುಜರಾತ್ ಟೈಟಾನ್ಸ್ ತಂಡವನ್ನು ಮುನ್ನಡೆಸಿದ್ದರು. ದೆಹಲಿಯಲ್ಲಿ ಇಂಗ್ಲೆಂಡ್ ವಿರುದ್ಧ ನಡೆದ ವಿಶ್ವಕಪ್ ಪಂದ್ಯದ ವೇಳೆ ಅಫ್ಘಾನಿಸ್ತಾನ ತಂಡವನ್ನು ಅಭಿಮಾನಿಗಳು ಹುರಿದುಂಬಿಸಿದ್ದರು. ಪ್ರೇಕ್ಷಕರ ಅಭಿಮಾನಕ್ಕೆ ರಶೀದ್ ಖಾನ್ ಸಾಮಾಜಿಕ ಜಾಲತಾಣದಲ್ಲಿ ಕೃತಜ್ಞತೆ ವ್ಯಕ್ತಪಡಿಸಿದ್ದರು.

ಐಪಿಎಲ್‌ನಲ್ಲಿ ಆಡಿದ ರಶೀದ್, ಅಜ್ಮತುಲ್ಲಾ ಒಮರ್ಜಾಯ್, ನೂರ್ ಅಹ್ಮದ್, ಫಜಲ್ಹಕ್ ಫಾರೂಕಿ, ನವೀನ್ ಉಲ್ ಹಕ್, ಮೊಹಮ್ಮದ್ ನಬಿ, ರಹಮಾನುಲ್ಲಾ ಗುರ್ಬಾಜ್ ಮತ್ತು ಗುಲಬ್‌ದಿನ್ ನೈಬ್ ಟಿ20 ತಂಡದಲ್ಲಿ ಸ್ಥಾನ ಪಡೆದಿದ್ದಾರೆ.

# ಭಾರತವನ್ನು ಜಾಗತಿಕ ಜ್ಞಾನ ಶಕ್ತಿಯನ್ನಾಗಿ ಮಾಡುವಲ್ಲಿ ಯುವಕರ ಪಾತ್ರ ಪ್ರಮುಖ

**ದಾವಣಗೆರೆ:** ಭಾರತದ ಸಾಂಸ್ಕೃತಿಕ ವೈಭವವನ್ನು ಮರುಸ್ಥಾಪಿಸಲು ಮತ್ತು ಭಾರತವನ್ನು ಜಾಗತಿಕ ಜ್ಞಾನ ಶಕ್ತಿಯನ್ನಾಗಿ ಮಾಡಲು, ನಮ್ಮ ಯುವಕರ ಕೌಶಲ್ಯ, ಪ್ರತಿಭೆ ಮತ್ತು ಶಕ್ತಿಯನ್ನು ಬಳಸಿಕೊಳ್ಳಲು ನಾವು ಸಂಘಟಿತ ಪ್ರಯತ್ನಗಳನ್ನು ಮಾಡಬೇಕಾಗುತ್ತದೆ. ಇದರಲ್ಲಿ ಯುವಕರ ಪಾತ್ರವು ಮುಖ್ಯವಾಗಿದೆ ಎಂದು ಕರ್ನಾಟಕದ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಹೇಳಿದರು.

ಸೆಂಟ್ ಅಲೋಶಿಯಸ್ ಇಂಟರ್ನ್ಯಾಷನಲ್ ಸ್ಕೂಲ್ ಮತ್ತು ಪಿಯು ಹರಿಹರ ಸೆಂಟ್ ಅಲೋಶಿಯಸ್ ಇಂಟರ್ನ್ಯಾಷನಲ್ ಸ್ಕೂಲ್ ಉದ್ಘಾಟನಾ ಸಮಾರಂಭ ಹಾಗೂ ಸಂತ ಅಲೋಶಿಯಸ್ ಅವರ 457ನೇ ಜಯಂತ್ಯೋತ್ಸವದಲ್ಲಿ ಭಾಗವಹಿಸಿ ಅವರು ಮಾತನಾಡಿದರು.



ವ್ಯಕ್ತಿಯ ಬೆಳವಣಿಗೆ ಮತ್ತು ಸಮಾಜದ ಉನ್ನತಿಯಲ್ಲಿ ಶಿಕ್ಷಣದ ಕೊಡುಗೆ ಮುಖ್ಯವಾಗಿದೆ. ಸ್ವಾಮಿ ವಿವೇಕಾನಂದ ಜೀ ಅವರು ನಮಗೆ ಚಾರಿತ್ರ್ಯವನ್ನು ನಿರ್ಮಿಸುವ, ಮಾನಸಿಕ ಬೆಳವಣಿಗೆಯನ್ನು ಅಭಿವೃದ್ಧಿಪಡಿಸುವ, ಬುದ್ಧಿವಂತಿಕೆಯನ್ನು ಅಭಿವೃದ್ಧಿಪಡಿಸುವ ಮತ್ತು ಮನುಷ್ಯನು ತನ್ನ ಸ್ವಂತ ಕಾಲಿನ ಮೇಲೆ ನಿಲ್ಲುವಂತೆ ಮಾಡುವ ಶಿಕ್ಷಣದ ಅಗತ್ಯವಿದೆ ಎಂದು ಹೇಳಿದ್ದಾರೆ. ಅವರ ದಾರಿಯಲ್ಲಿ ಯುವ ಪೀಳಿಗೆ ಮುಂದುವರಿಯಬೇಕು ಎಂದು ಕರೆ ನೀಡಿದರು.

ಪ್ರಾಚೀನ ಕಾಲದಲ್ಲಿ, ನಮ್ಮ ದೇಶ ಭಾರತವನ್ನು ವಿಶ್ವ ಗುರು ಎಂದು ಕರೆಯಲಾಗುತ್ತಿತ್ತು. ನಳಂದ, ತಕ್ಷಶಿಲಾ, ವಿಕ್ರಮಶಿಲಾ ಮುಂತಾದ ವಿಶ್ವದರ್ಜೆಯ ಶಿಕ್ಷಣ ಸಂಸ್ಥೆಗಳಿದ್ದವು. ನಳಂದಾ ವಿಶ್ವವಿದ್ಯಾಲಯವು ಭಾರತದ ಶ್ರೀಮಂತ ಶೈಕ್ಷಣಿಕ ಪರಂಪರೆಯ ಸಂಕೇತವಾಗಿದೆ ಮತ್ತು ಜಾಗತಿಕ ಜ್ಞಾನ ಮತ್ತು ಸಂಸ್ಕೃತಿಗೆ ಕೊಡುಗೆಯಾಗಿದೆ. ನಳಂದ ವಿಶ್ವವಿದ್ಯಾಲಯವನ್ನು ಪುನರುಜ್ಜೀವನಗೊಳಿಸುವ ಪ್ರಯತ್ನದಲ್ಲಿ, ನಳಂದ ಮಹಾವಿಹಾರದ ಬಳಿ ಕೆಲವು ಸಮಯದ ಹಿಂದೆ ಹೊಸ ನಳಂದ ವಿಶ್ವವಿದ್ಯಾಲಯವನ್ನು ಸ್ಥಾಪಿಸಲಾಯಿತು ಎಂದು ತಿಳಿಸಿದರು.

ಹೊಸ ಸೈಂಟ್ ಅಲೋಶಿಯಸ್ ಇಂಟರ್ನ್ಯಾಷನಲ್ ಸ್ಕೂಲ್, ಆಧುನಿಕ ಸೌಲಭ್ಯಗಳನ್ನು ಹೊಂದಿದ್ದು, ನಮ್ಮ ಪ್ರಾಚೀನ ಶಿಕ್ಷಣ ಪದ್ಧತಿ ಮತ್ತು ಆಧುನಿಕ ಶಿಕ್ಷಣ ವ್ಯವಸ್ಥೆಯನ್ನು ಅಳವಡಿಸಿಕೊಂಡು ಶಿಕ್ಷಣವನ್ನು ನೀಡುತ್ತದೆ ಎಂದು ನನಗೆ ವಿಶ್ವಾಸವಿದೆ. ವಿದ್ಯಾರ್ಥಿಗಳಿಗೆ ಮಾನವೀಯ ಮತ್ತು ಉತ್ತಮ ಚಿಂತನೆ, ಉದ್ಯಮಶೀಲತೆ ಮತ್ತು ಜ್ಞಾನೋದಯ ಶಿಕ್ಷಣವನ್ನು ಒದಗಿಸಲು ಕೆಲಸ ಮಾಡುತ್ತದೆ ಎಂಬ ಭರವಸೆ ಇದೆ ಎಂದರು.

ಇಂದು ದೇಶ ಮತ್ತು ಪ್ರಪಂಚದಲ್ಲಿ ಪರಿಸರ ಅಸಮತೋಲನದ ಗಂಭೀರ ಸಮಸ್ಯೆ ಇದೆ. ಪರಿಸರವನ್ನು ರಕ್ಷಿಸುವ ಮತ್ತು ಸುಧಾರಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ನೀರು, ಅರಣ್ಯ ಮತ್ತು ವಾಯು ಸಂರಕ್ಷಣೆಗೆ ಶ್ರಮಿಸುವ ಅಗತ್ಯವಿದೆ. ಶಿಕ್ಷಣವನ್ನು ಕೌಶಲ್ಯ ಮತ್ತು ನೈತಿಕ ಮೌಲ್ಯಗಳೊಂದಿಗೆ ಜೋಡಿಸುವ ಮೂಲಕ ಹೊಸ ಭಾರತ, ಉತ್ತಮ ಭಾರತವನ್ನು ರಚಿಸುವ ದೃಷ್ಟಿಯ ಕಡೆಗೆ ಜೆಸ್ಯೂಟ್ ಸಂಸ್ಥೆಗಳು ಕೆಲಸ ಮಾಡುತ್ತವೆ ಎಂದು ಹಾರೈಸಿದರು.

ಪ್ರಾಂತೀಯ ಫಾದರ್ ಡಿಯೋನಿಸಿಯಸ್ ವಾಜ್, ಬಿಷಪ್ ವಂದನೀಯ ಡಾ. ಫ್ರಾನ್ಸಿಸ್, ಮಂಗಳೂರು ಜೆಸ್ಯೂಟ್ ಎಜುಕೇಷನಲ್ ಸೊಸೈಟಿ ಉಪಾಧ್ಯಕ್ಷ ಫಾದರ್ ಮೆಲ್ವಿನ್ ಪಿಂಟೋ ಸೇರಿದಂತೆ ಮುಂತಾದ ಗಣ್ಯರು ಉಪಸ್ಥಿತರಿದ್ದರು.

# ಎರಡೂವರೆ ವರ್ಷದ ಬಳಿಕ ಸಚಿವರ ಬದಲಾವಣೆ ಆಗಬೇಕು

**ಬೆಂಗಳೂರು:** ಎರಡೂವರೆ ವರ್ಷ ಆದ ನಂತರ ಸಚಿವರ ಬದಲಾವಣೆ ಆಗಬೇಕು ಎಂಬ ಹೇಳಿಕೆಗೆ ಈಗಲೂ ನಾನು ಬದ್ಧ ಎಂದು ಸಚಿವ ಕೆಹೆಚ್ ಮುನಿಯಪ್ಪ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಈ ಕುರಿತು ಮಾತನಾಡಿದ ಅವರು, ಹೆಚ್ಚುವರಿ ಡಿಸಿಎಂ ವಿಚಾರ ಹೈಕಮಾಂಡ್ ಗೆ ಬಿಟ್ಟಿದ್ದು. ಅವರು ತೀರ್ಮಾನ ಮಾಡಲಿ. ನಾನು ಆಕಾಂಕ್ಷಿ ಅಲ್ಲ. ನಾನು ಮಾತನಾಡಿ ಗೊಂದಲ ಮಾಡುವುದಿಲ್ಲ. ಎಲ್ಲರಿಗೂ ಜವಾಬ್ದಾರಿ ಕೊಟ್ಟಿದ್ದಾರೆ. ನಾನು ಹೈಕಮಾಂಡ್ ಕೊಟ್ಟ ಜವಾಬ್ದಾರಿ ನಿಭಾಯಿಸುತ್ತೇನೆ. ಸಚಿವರ ಹೈಕಮಾಂಡ್ ಭೇಟಿ ನನ್ನ ಗಮನಕ್ಕೆ ಬಂದಿಲ್ಲ. ನಾನು ಯಾವುದಕ್ಕೂ ಡಿಮ್ಯಾಂಡ್ ಇಟ್ಟಿಲ್ಲ. ನಮ್ಮ ಸಾಮರ್ಥ್ಯ ನೋಡಿ ಹೈಕಮಾಂಡ್ ಜವಾಬ್ದಾರಿ ಕೊಟ್ಟಿದ್ದಾರೆ. ನಾನು ಈಗಲೂ ಕೂಡ ಎರಡೂವರೆ ವರ್ಷಕ್ಕೆ ಸಚಿವರ ಬದಲಾವಣೆ ಹೇಳಿಕೆಗೆ ಬದ್ಧ. ಸದ್ಯ ಸಚಿವ ಸಂಪುಟ ಬದಲಾವಣೆ ಸದ್ಯಕ್ಕೆ ಅವಶ್ಯಕತೆ ಇಲ್ಲ ಎಂದರು.



ನಾವು ಗುಣಮಟ್ಟದ ಅಕ್ಕಿ ಕೊಡುತ್ತಿದ್ದೇವೆ. ಡಿಬಿಟಿ ಪ್ರತಿ ತಿಂಗಳು ಕೊಡುತ್ತೇವೆ. ಜುಲೈ ತಿಂಗಳ ಹತ್ತಕ್ಕೆ ಯಾವುದೇ ಬಾಕಿ ಇರದೆ ಹಣ ಹಾಕುತ್ತೇವೆ. ಜುಲೈ ಹತ್ತಕ್ಕೆ ಒಂದು ವರ್ಷ ಕಂಪ್ಲಿಟ್ ಆಗುತ್ತೆ. ಯಾವುದೇ ಹಣ ಬಾಕಿ ಇಲ್ಲ. ಅಕ್ಕಿ ಸಕಾಲಕ್ಕೆ ನಾವು ಕೊಡುತ್ತೇವೆ. ಹಣದ ಬದಲು ಅಕ್ಕಿ ಕೊಡಲು ಚರ್ಚೆ ನಡೆದಿದೆ. ಅಕ್ಕಿ ಬದಲು ದವಸ ಧಾನ್ಯಗಳನ್ನು ಕೊಡುವ ಪ್ರಸ್ತಾವನೆ ಇದೆ. ಮತ್ತೆ ಕೇಂದ್ರದ ಬಳಿ ಅಕ್ಕಿ ಕೇಳುತ್ತೇವೆ. ಈಗ ನಮ್ಮ ರಾಜ್ಯದವರೆ ಸಚಿವರಿದ್ದಾರೆ. ಅವರ ಬಳಿ ಪ್ರಸ್ತಾವನೆ ಇಡುತ್ತೇವೆ ಎಂದು ತಿಳಿಸಿದರು.

ತೈಲ ಬೆಲೆ ಏರಿಕೆ ಬಗ್ಗೆಯೂ ಮಾತನಾಡಿದ ಅವರು, ಬೇರೆ ರಾಜ್ಯಗಳಿಗೆ ಹೋಲಿಸಿದರೆ ನಮ್ಮಲ್ಲಿ ಬೆಲೆ ಕಡಿಮೆ ಇದೆ. ಬೆಲೆ ಹೆಚ್ಚಳ ಮಾಡಿದ ಮೇಲೂ ಕಡಿಮೆ ಇದೆ. ಐದಾರು ರೂ. ಈಗಲೂ ಕಡಿಮೆ ಇದೆ. ಗ್ಯಾರಂಟಿಗಳಿಗಾಗಿ ತೈಲ ಬೆಲೆ ಹೆಚ್ಚಳ ಮಾಡಿಲ್ಲ ಎಂದು ಹೇಳಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com